ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೭

**ಪಟ್ಟಿ – ೦೮**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೈದನೇ ಅಧಿವೇಶನ**

**ಶುಕ್ರವಾರ, ದಿನಾಂಕ : ೧೪ನೇ ಮಾರ್ಚ್, ೨೦೨೫**

---

## ಸಮೂಹ – V

೧. ಸಮಾಜ ಕಲ್ಯಾಣ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

೩. ಕೃಷಿ ಸಚಿವರು

೪. ಕಾರ್ಮಿಕ ಸಚಿವರು

೫. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೬. ಯೋಜನೆ ಮತ್ತು ಸಾಂಖ್ಯಿಕ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

---

# ಮೆಟ್ರಿಕ್‌ವರೆಗೂ ಮತ್ತು ಮೆಟ್ರಿಕ್ ನಂತರದ ಸರ್ಕಾರಿ ವಸತಿ ನಿಲಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೨ (೯೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿರುವ ಮೆಟ್ರಿಕ್‌ವರೆಗೂ ಮತ್ತು ಮೆಟ್ರಿಕ್ ನಂತರದ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಅವುಗಳಿಗೆ ಮೆಟ್ರಿಕ್‌ವರೆಗೂ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಸ್ವಂತ ಕಟ್ಟಡಗಳಿಲ್ಲದೇ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇಲ್ಲದಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು)

(ಈ) ವಸತಿ ನಿಲಯಗಳಲ್ಲಿ ಇರುವಂತಹ ಮಕ್ಕಳಿಗೆ ಯಾವ–ಯಾವ ರೀತಿಯ ಸೌಲಭ್ಯ ಸವಲತ್ತುಗಳನ್ನು ಒದಗಿಸಲಾಗುತ್ತಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕೃಷಿ ಇಲಾಖೆಯಲ್ಲಿರುವ ವಿವಿಧ ಯೋಜನೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೩ (೯೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆ ವತಿಯಿಂದ ರಾಜ್ಯದ ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು ಯಾವುವು ; ಸದರಿ ಯೋಜನೆಯಡಿ ರೈತರಿಗೆ ಯಾವ ಯಾವ ಸೌಲಭ್ಯಗಳು ದೊರಕುತ್ತಿವೆ ; (ಜಿಲ್ಲಾವಾರು, ಯೋಜನಾವಾರು ಮಾಹಿತಿ ಒದಗಿಸುವುದು)

(ಆ) ೨೦೨೪–೨೫ನೇ ಸಾಲಿನಲ್ಲಿ ಯಾವ ಯಾವ ಹೊಸ ಮಾದರಿಯ ಯೋಜನೆಗಳನ್ನು ರೈತರಿಗೆ ಒದಗಿಸಲಾಗುತ್ತಿದೆ ; (ಯೋಜನಾವಾರು ಮಾಹಿತಿ ಒದಗಿಸುವುದು)

(ಇ) ಪ್ರಸ್ತುತ ಜಾರಿಯಲ್ಲಿರುವ ಸೌಲಭ್ಯಗಳನ್ನು ಪಡೆಯಲು ರೈತರಿಗೆ ಇರುವ ಮಾನದಂಡಗಳಾವುವು ? (ಯೋಜನಾವಾರು ಮಾಹಿತಿ ಒದಗಿಸುವುದು)

## ಮೇಲ್ವಿಚಾರಕಿಯರ ಹುದ್ದೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೪ (೯೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಖಾಲಿ ಇರುವ ಮೇಲ್ವಿಚಾರಕಿಯರ ಹುದ್ದೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಹಾಗೂ ಕಾರ್ಯಚಟುವಟಿಕೆಗಳನ್ನು ಸುವ್ಯವಸ್ಥಿತವಾಗಿ ನಡೆಸಲು ಮೇಲ್ವಿಚಾರಕಿಯರು ಅಗತ್ಯವಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಈ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; ಈವರೆಗೂ ಭರ್ತಿ ಮಾಡದಿರಲು ಕಾರಣವೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೫ (೯೧೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯುಡಿಯುಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳು ಯಾವುವು : ಸದರಿ ನಿಗಮಗಳಿಂದ ಸರ್ಕಾರವು ಸಾರ್ವಜನಿಕರಿಗೆ ನೀಡುತ್ತಿರುವ ಸೇವೆಗಳು ಯಾವುವು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಸದರಿ ನಿಗಮಗಳಿಗೆ ಕಳೆದ ೫ ವರ್ಷಗಳಿಂದ ಇಲ್ಲಿಯವರೆಗೂ ಬಿಡುಗಡೆಯಾಗಿರುವ ಅನುದಾನವೆಷ್ಟು ; (ವರ್ಷವಾರು ಅನುದಾನವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ಸದರಿ ಇಲಾಖೆಯ ನಿಗಮದಡಿಯಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಕ್ರಿಯಾಯೋಜನೆಯೆಷ್ಟು : ಈ ಯೋಜನೆಗಳು ಸರ್ಕಾರದ ಹಂತದಲ್ಲಿ ಮಂಜೂರಾದರೂ ಕೂಡ ವಿವಿಧ ಯೋಜನೆಗಳು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾರಣಕ್ಕೆ ಪೂರ್ಣಗೊಂಡಿಲ್ಲ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಸದರಿ ನಿಗಮಗಳಲ್ಲಿ ಫಲನುಭವಿಗಳ ಆಯ್ಕೆಯನ್ನು ಯಾವ ರೀತಿ ಮಾಡಲಾಗುತ್ತದೆ; ಫಲಾನುಭವಿಗಳ ಆಯ್ಕೆಯನ್ನು ಹೆಚ್ಚು ಮಾಡಲು ಸರ್ಕಾರ ಚಿಂತಿಸಿದೆಯೇ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಶುದ್ಧ ಜೀವಜಲ ಪೂರೈಸುವ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೬ (೯೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣಾ ಭಾಗಗಳಲ್ಲಿ ಶುದ್ಧ ಜೀವಜಲ ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕುಡಿಯುವ ನೀರು ಕಲುಷಿತಗೊಳ್ಳದಂತೆ ತಡೆಯಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ ;

(ಇ) ನೀರು ಪೂರೈಕೆ ಮಾಡುವ ಕೊಳವೆ ಬಾವಿಗಳನ್ನು ಸ್ಥಳೀಯ ಆಡಳಿತಗಳು ಸ್ವಚ್ಛವಾಗಿಡುವಂತೆ ಕ್ರಮ ವಹಿಸಲಾಗಿದೆಯೇ ? (ವಿವರ ಒದಗಿಸುವುದು)

## ಕೃಷಿ ಇಲಾಖೆಯಲ್ಲಿನ ನೂತನ ಯೋಜನೆಗಳ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೭ (೧೦೦೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಕ್ಷೇತ್ರದ ಸುಸ್ಥಿರ ಹಾಗೂ ಲಾಭದಾಯಕಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರಗಳನ್ನು ಒದಗಿಸುವುದು)

(ಆ) ಕಳೆದ ಎರಡು ವರ್ಷಗಳಿಂದ ಈ ನಿಟ್ಟಿನಲ್ಲಿ ಯಾವ ಹೊಸ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ;

(ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಹಲವಾರು ಯೋಜನೆಗಳನ್ನು ಸಮನ್ವಯಗೊಳಿಸುವ ನಿಟ್ಟಿನಲ್ಲಿ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಕಳೆದ ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯ ಸರ್ಕಾರದ ರೈತರ ಸಮೃದ್ಧಿ ಯೋಜನೆ ಜಾರಿಗೊಂಡಿದೆಯೇ ?

## ಗ್ರಾಮೀಣ ಭಾಗದಲ್ಲಿ ಶಿಕ್ಷಣ ಅಭಿವೃದ್ಧಿ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೮ (೧೦೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಭಾಗದ ಶಿಕ್ಷಣ ಅಭಿವೃದ್ಧಿಗೆ ಹಾಕಿಕೊಂಡಿರುವ ಯೋಜನೆಗಳೇನು ; (ಯೋಜನೆವಾರು ವಿವರ ನೀಡುವುದು)

(ಆ) ೨೦೨೪-೨೫ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪ್ರಾಥಮಿಕ ಶಾಲೆಗಳನ್ನು ಅಭಿವೃದ್ಧಿ ಪಡಿಸಲಾಗಿದೆಯೇ ;

(ಇ) ಕಳೆದ ಒಂದು ವರ್ಷದಲ್ಲಿ ಎಷ್ಟು ಪ್ರಾಥಮಿಕ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗಿದೆ ? (ಮಾಹಿತಿ ಒದಗಿಸುವುದು)

## ಬೆಳೆ ಪರಿಹಾರ ಒದಗಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೫೯ (೯೧೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಂಧನೂರು ತಾಲ್ಲೂಕಿನಲ್ಲಿ ಸುರಿದ ಅಕಾಲಿಕ ಮಳೆಯಿಂದಾಗಿ ೯೪೨೫ ಹೆಕ್ಟೇರ್ ಭತ್ತದ ಬೆಳೆ ಹಾನಿಯಾಗಿದ್ದು ಇದರಿಂದಾಗಿ ೨೧೭೨೧ ರೈತರು ಕಂಗಾಲಾಗಿರುವುದಲ್ಲದೆ ನಿಗದಿಪಡಿಸಿದ ದರ ಗಿಂತಲೂ ಬೆಳೆ ಬೆಲೆ ಕಡಿಮೆ ಆಗಿದ್ದು ಈ ಕೂಡಲೇ ಬೆಳೆ ಪರಿಹಾರ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಬೆಂಬಲ ಬೆಲೆ ಘೋಷಿತ ಭತ್ತ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದರೆ ಈ ಬಗ್ಗೆ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ;

(ಇ) ಸೋನಾ ಮಸೂರಿ ಭತ್ತದ ತಳಿಗೆ ಜಿಐ ಟ್ಯಾಗ್ ನೀಡಿದರೆ ಪ್ರಪಂಚದಾದ್ಯಂತ ಭತ್ತಕ್ಕೆ ಮೌಲ್ಯ ಬರಲಿದ್ದು ಈ ಬಗ್ಗೆ ಸರ್ಕಾರದ ಚಿಂತನೆಯೇನು ?

## ಭತ್ತದ ಅಭಿವೃದ್ಧಿ ಮಂಡಳಿ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೦ (೯೧೭) ಮಾನ್ಯ ಕೃಷಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಸಿಂಧನೂರು ತಾಲ್ಲೂಕಿನಲ್ಲಿ ಅತೀ ಹೆಚ್ಚು ಭತ್ತವನ್ನು ಬೆಳೆಯುವುದರಿಂದ ಭತ್ತದ ಕಣಜ, ಭತ್ತದ ನಾಡು ಎಂದು ಕರೆಯಲಾಗುತ್ತಿದ್ದು ಈ ಭಾಗದಲ್ಲಿ ಭತ್ತದ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಬಡ್ತಿ ನೀಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೧ (೯೧೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ನೇಮಕವಾದ ವಾರ್ಡನ್ ಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಎಷ್ಟು ವರ್ಷಗಳಿಗೆ ಮುಂಬಡ್ತಿ ನೀಡಬೇಕೆಂಬ ನಿಯಮವಿದೆ ಇದುವರೆಗೆ ಎಷ್ಟು ಜನ ವಾರ್ಡನ್ ಗಳಿಗೆ ಮುಂಬಡ್ತಿ ನೀಡಲಾಗಿದೆ ; (ವಿವರ ನೀಡುವುದು)

(ಆ) ಈ ಇಲಾಖೆಯಲ್ಲಿ ಯಾವ ಯಾವ ವರ್ಷದಲ್ಲಿ ನೇರ ನೇಮಕಾತಿ ಮಾಡಿಕೊಳ್ಳಲಾಗಿದೆ ; ನೇರ ನೇಮಕಾತಿ ಆದವರ ಸಂಖ್ಯೆ ಎಷ್ಟು ; ಪ್ರತಿ ಐದು ವರ್ಷಕ್ಕೊಮ್ಮೆ ಮುಂಬಡ್ತಿ ನೀಡಬೇಕೆಂಬ ನಿಯಮವಿದ್ದು ಅದರಂತೆ ಎಷ್ಟು ಜನರಿಗೆ ಮುಂಬಡ್ತಿ ನೀಡಲಾಗಿದೆ ? (ವಿವರ ನೀಡುವುದು)

## ಮಹಿಳಾ ಉದ್ಯೋಗಿಗಳ ವಸತಿ ನಿಲಯ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೨ (೯೩೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಉತ್ತರ ಕರ್ನಾಟಕದ ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಮಹಿಳಾ ಉದ್ಯೋಗಿ ವಸತಿ ನಿಲಯಗಳನ್ನು (Paid working women Hostel) ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದರೆ ಇದು ಯಾವ ಹಂತದಲ್ಲಿದೆ ?

## ಕೃಷಿ ಉತ್ಪನ್ನಗಳ ಸಂಸ್ಕರಣ ಘಟಕ ಸ್ಥಾಪನೆ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೩ (೯೩೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಕೃಷಿ ಉತ್ಪನ್ನಗಳನ್ನು ಹಾಗೂ ಆಹಾರ ಸಂಸ್ಕರಣಾ ಉದ್ಯಮಗಳಾದ ಹಣ್ಣು ಮತ್ತು ತರಕಾರಿ ಸಂಸ್ಕರಣೆ, ಡೈರಿ ಉತ್ಪನ್ನಗಳು ಮತ್ತು ಧಾನ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ರಾಯಚೂರಿನಲ್ಲಿ ಕೃಷಿ ಆಧಾರಿತ ಕೈಗಾರಿಕೆಗಳು ಕೀಟನಾಶಕಗಳು ಮತ್ತು ಬೀಜಗಳಂತಹ ರಾಸಾಯನಿಕ ಮತ್ತು ರಸಗೊಬ್ಬರ ಕಾರ್ಖಾನೆ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರಕ್ಕೆ ಇದೆಯೇ ;

(ಇ) ರಾಯಚೂರು ಜಿಲ್ಲೆಯಲ್ಲಿ ಎಫ್‌ಪಿಓಗಳಿಗೆ ಕೃಷಿ ಯಂತ್ರಧಾರೆ ಯೋಜನೆಯಡಿ ಎಷ್ಟು ಸಬ್ಸಿಡಿ ನೀಡಲಾಗಿದೆ ; ಎಷ್ಟು ಹಾರ್ವೆಸ್ಟರ್ ಟ್ರಾಕ್ಟರ್ ವಿತರಿಸಲಾಗಿದೆ ? (ತಾಲ್ಲೂಕುವಾರು ವಿವರ ಒದಗಿಸುವುದು)

## ಗ್ರಾಮ ಪಂಚಾಯಿತಿಯಲ್ಲಿ ಇ–ಖಾತಾ ವಿತರಣೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೭೬೪ (೯೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಇ–ಖಾತಾ ನೀಡಲು ಇರುವ ನಿಯಮಗಳೇನು ; (ಸುತ್ತೋಲೆಯನ್ನು ನೀಡುವುದು)

(ಆ) ಹಲವು ಗ್ರಾಮ ಪಂಚಾಯತ್‌ಗಳಲ್ಲಿ ನಿಗದಿತ ಅವಧಿಯಲ್ಲಿ ಇ–ಖಾತಾ ನೀಡದೆ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಕಾಲದಲ್ಲಿ ಇ–ಖಾತಾ ವಿತರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನಲ್ಲಿ ಒಂದು ವರ್ಷದಿಂದ ಇ–ಖಾತಾ ವಿತರಿಸುವಂತೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಇಲ್ಲಿಯವರೆಗೆ ಎಷ್ಟು ಇ–ಖಾತಾ ವಿತರಿಸಲಾಗಿದೆ ; ನಿಗದಿತ ಅವಧಿ ಮೀರಿದರೂ ಇ–ಖಾತಾ ವಿತರಿಸದೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಈ) ನಿಗದಿತ ಅವಧಿಯಲ್ಲಿ ಇ–ಖಾತಾ ವಿವರಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೭೬೫ (೯೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು ; ಗ್ರಾಮ ಪಂಚಾಯತ್‌ಗಳಲ್ಲಿ ಮಂಜೂರಾಗಿರುವ ಹುದ್ದೆಗಳಾವುವು ;

(ಆ) ಗ್ರಾಮ ಪಂಚಾಯತ್‌ಗಳಲ್ಲಿ ಅನುಮೋದನೆಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಅವರಿಗೆ ಪ್ರಸ್ತುತ ನೀಡುತ್ತಿರುವ ವೇತನ ಎಷ್ಟು ;

(ಇ) ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ವೇತನ ಹೊರತುಪಡಿಸಿ ನೀಡುತ್ತಿರುವ ಇತರೆ ಸೌಲಭ್ಯಗಳೇನು ;

(ಈ) ಗ್ರಾಮ ಪಂಚಾಯತ್ ಸಿಬ್ಬಂದಿಗಳು ತಳಹಂತದ ಆಡಳಿತ ವ್ಯವಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರೂ ; ಅವರಿಗೆ ಆರೋಗ್ಯ ವಿಮೆ, ಭವಿಷ್ಯ ನಿಧಿ, ಪಿಂಚಣಿ ಸೌಲಭ್ಯ ಇಲ್ಲದೇ ಜೀವನ ಭದ್ರತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದ ಅಂಗನವಾಡಿಗಳಿಗೆ ಆಹಾರ ಸಾಮಾಗ್ರಿ ಸರಬರಾಜು ಮಾಡುವ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೬ (೮೮೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಅಂಗನವಾಡಿಗಳಿಗೆ ಆಹಾರ ಸಾಮಾಗ್ರಿ ಸರಬರಾಜು ಮಾಡುವ ಗುತ್ತಿಗೆಯನ್ನು ಯಾರಿಗೆ ಮತ್ತು ಎಷ್ಟು ವರ್ಷಕ್ಕೆ ನೀಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಆ) ನೀಡಲಾದ ಗುತ್ತಿಗೆಯಲ್ಲಿ ಯಾವ ಯಾವ ಆಹಾರ ಸಾಮಾಗ್ರಿಗಳನ್ನು ಒದಗಿಸಲು ಗುತ್ತಿಗೆ ನೀಡಲಾಗಿದೆ ; (ಆಹಾರ ಸಾಮಾಗ್ರಿಗಳ ಪೂರ್ಣ ವಿವರ ನೀಡುವುದು)

(ಇ) ಗುತ್ತಿಗೆ ನೀಡುವಾಗ ಸ್ಥಳೀಯ ಗುತ್ತಿಗೆದಾರರನ್ನು ಕಡೆಗಣನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸ್ಥಳೀಯ ಗುತ್ತಿಗೆದಾರರನ್ನು ಪರಿಗಣಿಸಲು ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ಒದಗಿಸುವುದು)

## ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ಇ-ಖಾತಾ ವಿತರಣೆಯ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೬೭ (೮೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮಠಾಣಾ ಎಂದರೇನು; ಹಾಗೂ ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ಇ-ಖಾತಾ ವಿತರಣೆಗೆ ಅನುಸರಿಸುವ ಪ್ರಕ್ರಿಯೆ ಏನು ; (ಸುತ್ತೋಲೆ ಅಥವಾ ಆದೇಶದ ಪ್ರತಿಯನ್ನು ನೀಡುವುದು)

(ಆ) ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ಇ-ಖಾತಾ ನೀಡಲು ನಮೂನೆ-೯ರ ವಹಿಯನ್ನು ಮಾಲೀಕತ್ವ ದೃಢೀಕರಣಕ್ಕೆ ಪರಿಗಣಿಸಲಾಗುತ್ತದೆಯೇ ; ಇಲ್ಲದೆ ಇದ್ದಲ್ಲಿ, ಯಾವ ದಾಖಲೆಗಳನ್ನು ಪರಿಗಣಿಸಲಾಗುತ್ತದೆ ;

(ಇ) ನಮೂನೆ-೯ರ ವಹಿಯು ಕಳೆದು ಹೋದ ಅಥವಾ ನಾಶವಾದ ಸಂದರ್ಭದಲ್ಲಿ ಯಾವ ರೀತಿಯಲ್ಲಿ ಮಾಲೀಕತ್ವ ಮತ್ತು ಅಳತೆಯನ್ನು ದೃಢೀಕರಿಸಿಕೊಳ್ಳಲಾಗುತ್ತದೆ ;

(ಈ) ಗ್ರಾಮಠಾಣಾ ವ್ಯಾಪ್ತಿಯಲ್ಲಿನ ಸ್ವತ್ತುಗಳ ಗಡಿ ಮತ್ತು ಚಕ್ಕುಬಂದಿಯನ್ನು ಗುರುತಿಸಲು ಅನುಸರಿಸುವ ವಿಧಾನ ಯಾವುದು ?

## ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿ ವೇತನದ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೮ (೮೮೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಿಂದ ಹಿಂದುಳಿದ ವರ್ಗದ ಕಲ್ಯಾಣ ಇಲಾಖೆಯ ವತಿಯಿಂದ ಇಲ್ಲಿಯವರೆಗೂ ಪದವಿ ಮತ್ತು ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವವರಿಗೆ ಎಷ್ಟು ವಿದ್ಯಾರ್ಥಿ ವೇತನವನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

(ಆ) ವಿದ್ಯಾರ್ಥಿ ವೇತನಕ್ಕಾಗಿ ಎಷ್ಟು ಅರ್ಜಿಗಳು ರಾಜ್ಯದಲ್ಲಿ ಸಂಗ್ರಹವಾಗಿದೆ ; ವಿದ್ಯಾರ್ಥಿ ವೇತನ ನೀಡಬೇಕಾದರೆ ಸರ್ಕಾರ ನಿಗದಿಪಡಿಸಿರುವ ಮಾನದಂಡವೇನು ;

(ಇ) ೨೦೨೩–೨೪ನೇ ಸಾಲಿನಲ್ಲಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿ ಒಂದು ವರ್ಷವಾದರೂ ವಿದ್ಯಾರ್ಥಿ ವೇತನ ನೀಡದಿರುವುದರಿಂದ, ವಿದ್ಯಾರ್ಥಿಗಳಿಗೆ ಮುಂದಿನ ವಿದ್ಯಾಭ್ಯಾಸಕ್ಕೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರದ ಕ್ರಮವೇನು ?

## ಕೃಷಿ ವಿಶ್ವವಿದ್ಯಾಲಯಗಳ ಬೋಧಕರ ಹಾಗೂ ಬೋಧಕೇತರರ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೯ (೮೮೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ;

(ಆ) ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರರ ಸಂಖ್ಯೆ ಎಷ್ಟು ಮತ್ತು ಅವು ಯಾವುವು ; (ಭಾಷಾವಾರು, ಪ್ರತಿಯೊಂದು ಕೃಷಿ ವಿಶ್ವವಿದ್ಯಾಲಯವಾರು ಮಾಹಿತಿ ಒದಗಿಸುವುದು)

(ಇ) ಸದರಿ ವಿಶ್ವವಿದ್ಯಾಲಯಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗಿದೆಯೇ ? (ವಿಶ್ವವಿದ್ಯಾಲಯವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)

## ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗೆ ನೀಡಿರುವ ಬಡ್ತಿಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೦ (೮೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರೇಡ್–೧ ಕಾರ್ಯದರ್ಶಿಗಳಿಗೆ ಪಿ.ಡಿ.ಓ. ಹುದ್ದೆಗೆ ಬಡ್ತಿ ನೀಡಲು ಅನುಸರಿಸಬೇಕಾದ ಮಾನದಂಡಗಳಾವುವು ; ಸನ್ ೨೦೦೯–೧೦ ಸಾಲಿನಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು

ಪಿ.ಡಿ.ಓ. ಹುದ್ದೆಗೆ ಬಡ್ತಿ ನೀಡುವಾಗ ಇವುಗಳನ್ನು ಅನುಸರಿಸಿವೆಯೇ ; (ಜಿಲ್ಲಾವಾರು ಈ ಮಾನದಂಡಗಳನ್ನು ಅನುಸರಿಸಿದ ದಾಖಲೆ ನೀಡುವುದು)

(ಆ) ಗ್ರೇಡ್–೧ ಕಾರ್ಯದರ್ಶಿಗಳಿಗೆ ಪಿ.ಡಿ.ಓ. ಹುದ್ದೆಗೆ ಬಡ್ತಿ ನೀಡಲು ದಿನಾಂಕ:೧೧.೦೩.೨೦೧೦ ರಂದು ಸರ್ಕಾರ ನಿರ್ದೇಶನ ನೀಡುವ ಪೂರ್ವದಲ್ಲಿಯೆ ಎಷ್ಟು ಜನರಿಗೆ ಬಡ್ತಿ ನೀಡಲಾಗಿದೆ ; ಈ ರೀತಿ ಬಡ್ತಿಗಳು ಸಕ್ರಮವಾದಲ್ಲಿ ದಿನಾಂಕ:೧೧.೦೩.೨೦೧೦ರ ಆದೇಶದ ಔಚಿತ್ಯವೇನು; ಹಾಗಾದರೆ, ದಿನಾಂಕ:೧೦.೦೩.೨೦೧೦ ರಂದು ನೇರ ನೇಮಕಾತಿ ಹಾಗೂ ದಿನಾಂಕ:೧೧.೦೩.೨೦೧೦ರಂದು ಬಡ್ತಿ ಪಿ.ಡಿ.ಓ.ಗಳ ಸಂಬಂಧ ಹೊರಡಿಸಿರುವ ಆದೇಶಗಳಿಗೆ ಕಾನೂನಿನ ಮಾನ್ಯತೆ ಇಲ್ಲವೆ ; (ಜಿಲ್ಲಾವಾರು ಬಡ್ತಿ ಹೊಂದಿದವರ ಪಟ್ಟಿ ನೀಡುವುದು)

(ಇ) ದಿನಾಂಕ:೧೧.೦೩.೨೦೧೦ರ ಪೂರ್ವದಲ್ಲಿ ಬಡ್ತಿ ಹೊಂದಿದ ಈ ಪಿ.ಡಿ.ಓ.ಗಳು ಮಾರ್ಚ್–೨೦೧೦ರಲ್ಲಿ ಗ್ರೇಡ್–೧ ಕಾರ್ಯದರ್ಶಿ ಹುದ್ದೆಯ ವೇತನ ಪಡೆದಿದ್ದರೆ ಅಥವಾ H.R.M.S. ಜಾರಿ ಇದ್ದರು ಸಹ ಇದರ ಮುಖಾಂತರ ಬಿಟ್ಟು ಮ್ಯಾನುಯಲ್ (ಭಾಗಶಃ ಗ್ರೇಡ್–೧ ಕಾರ್ಯದರ್ಶಿ ಹಾಗೂ ಭಾಗಶಃ ಪಿ.ಡಿ.ಓ) ವೇತನ ಪಡೆದಿದ್ದರೆ ಇವರ ಬಡ್ತಿಗಳು ಸಕ್ರಮವೇ ;

(ಈ) ಸರ್ಕಾರದ ಪತ್ರ ಸಂಖ್ಯೆ:ಕೆಪಿಆರ್–ಜಿಪಿಎ–ಪಿಡೋ–೨೯೧–೨೦೨೪, ದಿನಾಂಕ:೦೩.೦೧.೨೦೨೫ರನ್ವಯ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು ಅಕ್ರಮ ಪಿ.ಡಿ.ಓ. ಬಡ್ತಿ ಕುರಿತು ಸರ್ಕಾರಕ್ಕೆ ಸಲ್ಲಿಸಿರುವ ವರದಿಗಳಾವುವು ; (ಇವುಗಳ ಪ್ರತಿಗಳನ್ನು ನೀಡುವುದು) ಈ ವರದಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; (ಇದರ ದಾಖಲೆ ಹಾಗೂ ಸದರಿ ಪ್ರಕರಣದ ಟಿಪ್ಪಣಿ ಪ್ರತಿ ನೀಡುವುದು)

(ಉ) ಅಕ್ರಮವಾಗಿ ಬಡ್ತಿ ಹೊಂದಿದವರನ್ನು ಜ್ಯೇಷ್ಠತಾ ಪಟ್ಟಿಯಲ್ಲಿ ಅಗ್ರಸ್ಥಾನ ನೀಡಿ, ಬಡ್ತಿ ಹಾಗೂ ಎಲ್ಲಾ ಸೇವಾ ಸವಲತ್ತನ್ನು ನೀಡಿದ್ದು, ಇವರು ನಿವೃತ್ತಿಯಾಗುವವರೆಗೆ ಕಾಲಹರಣ ಮಾಡುವ ಉದ್ದೇಶದಿಂದ ಈ ದೂರುಗಳ ಮೇಲೆ ಅಂತಿಮ ಆದೇಶ ಹೊರಡಿಸದಿರಲು ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ?

## ರಾಜ್ಯದಲ್ಲಿ 'ಯೂರಿಯಾ ಮಾಫಿಯಾ' ನಡೆಯುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೧ (೯೦೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ 'ಯೂರಿಯಾ ಮಾಫಿಯಾ' ಎಗ್ಗಿಲ್ಲದೆ ಸಾಗಿದ್ದು, ರೈತರ ಪಾಲಿನ ಸಬ್ಸಿಡಿ ದರದ ಯೂರಿಯಾ ಗೊಬ್ಬರವು ಅನ್ಯ ರಾಜ್ಯದ ಕೈಗಾರಿಕೆಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ಸಬ್ಸಿಡಿ ಯೂರಿಯವನ್ನು ಅಕ್ರಮವಾಗಿ ಕೈಗಾರಿಕೆಗಳಿಗೆ ಮಾರುತ್ತಿರುವ ಎಷ್ಟು ಪ್ರಕರಣಗಳು ದಾಖಲಾಗಿದೆ ;

(ಇ) ಸಬ್ಸಿಡಿಯಲ್ಲಿ ನೀಡಲಾಗಿರುವ ಯೂರಿಯವನ್ನು ಕೃಷಿಯ ಹೊರತಾಗಿ ಕೈಗಾರಿಕಾ ಉದ್ದೇಶಕ್ಕೆ ಬಳಸಲು ಅನುಮತಿ ಇದೆಯೇ ;

(ಈ) ರೈತರಿಗೆ ನೀಡಲಾಗುತ್ತಿರುವ ಯೂರಿಯಾದ ೪೫ ಕೆ.ಜಿ. ಚೀಲಕ್ಕೆ ಮಾರುಕಟ್ಟೆಯ ಬೆಲೆ ಎಷ್ಟು ; ಇದನ್ನು ರೈತರಿಗೆ ಸಬ್ಸಿಡಿ ರೂಪದಲ್ಲಿ ಎಷ್ಟು ರೂಪಾಯಿಗಳಿಗೆ ನೀಡಲಾಗುತ್ತಿದೆ ; ಇದರಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ಪಾಲೆಷ್ಟು ?

## ಕೇಂದ್ರ ಪರಿಹಾರ ಕೇಂದ್ರ, ಸುಮನಹಳ್ಳಿ ಜಾಗವು ಅನ್ಯರ ಪಾಲಾಗುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೨ (೯೦೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿರುವ ಕೇಂದ್ರ, ಪರಿಹಾರ ಕೇಂದ್ರ, ಸುಮನಹಳ್ಳಿ ಇದು ಒಟ್ಟು ಎಷ್ಟು ಎಕರೆ ಪ್ರದೇಶವನ್ನು ಹೊಂದಿದೆ ಹಾಗೂ ಈ ಜಾಗದಲ್ಲಿ ನಡೆಯುತ್ತಿರುವ ಚಟುವಟಿಕೆಗಳೇನು ; ಈ ಜಾಗದಲ್ಲಿ ಯಾವುದಾದರೂ ಸಂಘ ಸಂಸ್ಥೆ ಅಥವಾ ಎನ್‌ಜಿಓಗಳಿಗೆ ಇಷ್ಟು ಅವಧಿಗೆಂದು ಜಮೀನನ್ನು ಗುತ್ತಿಗೆಗೆ ನೀಡಲಾಗುತ್ತಿದೆಯೇ ; ನೀಡಿದ್ದಲ್ಲಿ, ಇದರ ಒಟ್ಟು ವಿಸ್ತೀರ್ಣವೆಷ್ಟು ಹಾಗೂ ಸರ್ಕಾರ ನಿಗದಿಪಡಿಸಿರುವ ಹಣವೆಷ್ಟು ; ಸಂಸ್ಥೆಯ ಪೂರ್ಣ ವಿವರ ನೀಡುವುದು ;

(ಆ) ಗುತ್ತಿಗೆ ಪಡೆದುಕೊಂಡ ಸಂಸ್ಥೆಯವರು ಎಷ್ಟು ವಿಸ್ತೀರ್ಣ ಪ್ರದೇಶದಲ್ಲಿ ತಮ್ಮ ಕಾರ್ಯಚಟುವಟಿಕೆ ಮಾಡುತ್ತಿದ್ದಾರೆ ; ಅವುಗಳು ಯಾವುವು ಉಳಿದ ಜಾಗದಲ್ಲಿ ನಡೆಯುತ್ತಿರುವ ಚಟುವಟಿಕೆಗಳೇನು ;

(ಇ) ಜಮೀನನ್ನು ಗುತ್ತಿಗೆ ನೀಡಿದ ಸಂದರ್ಭದಲ್ಲಿ ಸರ್ಕಾರ ವಿಧಿಸಿರುವ ನೀತಿ ನಿಯಮಗಳೇನು ; ನಿಯಮ ಇದ್ದರೂ ಸಹ ನಿಯಮಗಳನ್ನು ಉಲ್ಲಂಘನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಂಸ್ಥೆಯ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ; ಇದನ್ನು ಗಮನಹರಿಸಬೇಕಾಗಿರುವ ಅಧಿಕಾರಿಗಳು ಯಾರು, ಈ ವಿಷಯಕ್ಕೆ ಸಂಬಂಧಿಸಿದಂತೆ ಯಾವುದಾದರೂ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ತೆಗೆದುಕೊಳ್ಳಲಾಗಿದೆಯೇ ;

(ಉ) ಸರ್ಕಾರದ ಜಮೀನನ್ನು ಸರ್ಕಾರದ ಕಾರ್ಯಚಟುವಟಿಕೆಗಳಿಗೆ ಬಳಸಿಕೊಳ್ಳುವುದಕ್ಕೆ ಉಪಯೋಗಿಸಿಕೊಳ್ಳುವುದನ್ನು ಬಿಟ್ಟು, ಈ ರೀತಿ ಗುತ್ತಿಗೆ ನೀಡುವ ಅನಿವಾರ್ಯತೆಯ ಉದ್ದೇಶಗಳೇನು ;

(ಊ) ಸರ್ಕಾರ ಗುತ್ತಿಗೆ ನೀಡುವ ಸಂದರ್ಭದಲ್ಲಿ ಯಾವ ಯಾವ ಉದ್ದೇಶಕ್ಕೆ ಬಳಸಿಕೊಳ್ಳಬೇಕೆಂದು ಷರತ್ತು ವಿಧಿಸಲಾಗಿದೆಯೇ ; ಷರತ್ತಿಗೆ ವಿರುದ್ಧವಾಗಿ ಸಂಸ್ಥೆಯವರು ಖಾಸಗಿಯವರಿಗೆ ಬಾಡಿಗೆಗೆ ನೀಡಿ, ಹಣ ಸಂಪಾದನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಜಲ ಜೀವನ್ ಮಿಷನ್ ಯೋಜನೆಯಡಿ ಸಮರ್ಪಕವಾಗಿ ಕೆಲಸ ಆಗದಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೩ (೯೦೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಕೋಲಾರ ಜಿಲ್ಲೆಯಲ್ಲಿ ಇದುವರೆಗೂ ಎಷ್ಟು ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕವನ್ನು ನೀಡಲಾಗಿದೆ ಹಾಗೂ ಇನ್ನು ಎಷ್ಟು ಸಂಪರ್ಕಗಳು ಬಾಕಿ ಉಳಿದಿದೆ ; (ಗ್ರಾಮವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷದಿಂದ ಇಲ್ಲಿಯವರೆಗೆ ಈ ಯೋಜನೆಯಡಿಯಲ್ಲಿ ಎಷ್ಟು ಅನುದಾನ ಬಂದಿದೆ ; ಇದರಲ್ಲಿ ಎಷ್ಟು ಖರ್ಚು ಮಾಡಲಾಗಿದೆ ಹಾಗೂ ಉಳಿಕೆ ಹಣವೆಷ್ಟು ;

(ಇ) ನರೇಗಾ ಯೋಜನೆಯಡಿ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಕಾಂಕ್ರೀಟ್ ರಸ್ತೆಗಳನ್ನು ನಿರ್ಮಿಸಲಾಗಿದೆ ; ಆದರೆ ಜಲ ಜೀವನ್ ಮಿಷನ್ ಕಾಮಗಾರಿಗಾಗಿ ರಸ್ತೆ ಅಗೆದ ಬಳಿಕ ಸಮರ್ಪಕವಾಗಿ ಗುತ್ತಿಗೆದಾರರು ದುರಸ್ತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪೈಪ್‌ಲೈನ್ ಕಾಮಗಾರಿ ನಡೆಸುವ ಸಂದರ್ಭದಲ್ಲಿ ಗುತ್ತಿಗೆದಾರರು ಒಂದು ಮೀಟರ್ ಆಳದಲ್ಲಿ ಪೈಪ್ ಅಳವಡಿಸಬೇಕೆಂಬ ನಿಯಮ ಇದೆಯೇ ; ಹಾಗಿದ್ದರೇ, ಗುತ್ತಿಗೆದಾರರು ಕೇವಲ ಅರ್ಧ ಮೀಟರ್ ಆಳದಲ್ಲಿ ಪೈಪ್ ಅಳವಡಿಸುತ್ತಿದ್ದು ಇದರೊಂದಿಗೆ ಪೈಪ್‌ಲೈನ್ ಉದ್ದದಲ್ಲಿಯೂ ಮೋಸ ಮಾಡಲಾಗುತ್ತಿದೆ ಎಂಬ ದೂರುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಟೆಂಡರ್‌ನಲ್ಲಿ ಭಾಗವಹಿಸಲು ಹಾಗೂ ಕಾಮಗಾರಿಯ ಗುತ್ತಿಗೆ ನೀಡುವ ಸಂದರ್ಭದಲ್ಲಿ ಸರ್ಕಾರದಿಂದ ರೂಪಿಸಿರುವ ನೀತಿ ನಿಯಮ ಹಾಗೂ ಮಾನದಂಡಗಳು ಏನು ?

## ಕೋಲಾರ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೪ (೯೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಿಂದ ಇಲ್ಲಿಯವರೆಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸರ್ಕಾರದ ನಿಯಮದ ಪ್ರಕಾರ ಟೆಂಡರ್ ಅವಧಿ ಮುಗಿದಿದ್ದರೂ ಅನೇಕ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸದೆ, ಕೆಲ ಕಂಪನಿಯವರೇ ನಿರ್ವಹಣೆ ಮಾಡಿಕೊಂಡು ಸ್ಮಾರ್ಟ್ ಕಾರ್ಡ್‌ಗಳ ರೀಚಾರ್ಜ್ ಹೆಸರಿನಲ್ಲಿ ಅಕ್ರಮವಾಗಿ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅವಧಿ ಮುಗಿದಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸದಿರಲು ಕಾರಣಗಳೇನು ; ಇದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ರೀಚಾರ್ಜ್ ಹೆಸರಿನಲ್ಲಿ ಅಕ್ರಮವಾಗಿ ಹಣ ವಸೂಲಿ ಮಾಡುತ್ತಿರುವ ಸಂಸ್ಥೆಗಳು ಯಾವುವು ? (ವಿವರಗಳನ್ನು ಒದಗಿಸುವುದು)

## ರಾಜ್ಯದಲ್ಲಿನ ರೈತರ ಆತ್ಮಹತ್ಯೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೫ (೯೬೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ಆತ್ಮಹತ್ಯೆ ಮಾಡಿಕೊಂಡ ರೈತರುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವರ್ಷವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ರೈತರ ಆತ್ಮಹತ್ಯೆ ಪ್ರಕರಣದಲ್ಲಿ ಪರಿಹಾರ ವಿತರಿಸಲಾದ ಪ್ರಕರಣಗಳೆಷ್ಟು ; ಮತ್ತು ಪರಿಹಾರ ವಿತರಿಸಲು ಬಾಕಿ ಇರುವ ಪ್ರಕರಣಗಳೆಷ್ಟು ; (ತಾಲ್ಲೂಕುವಾರು, ವರ್ಷವಾರು, ಪ್ರಕರಣವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಪ್ರಸಕ್ತ ಆಡಳಿತಕ್ಕೆ ಬಂದ ನಂತರ ರೈತ ಆತ್ಮಹತ್ಯೆ ಪ್ರಕರಣಗಳಲ್ಲಿ ಕೆಲವೊಂದು ಪ್ರಕರಣಗಳಿಗೆ ಈ ತನಕ ಪರಿಹಾರ ಧನ ವಿತರಿಸದಿರಲು ಕಾರಣವೇನು ; ಮತ್ತು ಈ ತನಕ ಪರಿಹಾರ ಧನ ವಿತರಿಸದ ಪ್ರಕರಣಗಳಲ್ಲಿ ಪರಿಹಾರ ಧನ ವಿತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಜ್ಯದಲ್ಲಿ ರೈತರ ಆತ್ಮಹತ್ಯೆಗಳನ್ನು ತಡೆಗಟ್ಟಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು ?

# ೨೦೨೪ರ ಮುಂಗಾರು ಮತ್ತು ಹಿಂಗಾರು ಮಳೆಯಿಂದಾಗಿ ಆಗಿರುವ ಹಾನಿ/ನಷ್ಟಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೬ (೯೨೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪ರ ಮೇ–ಜೂನ್ ರಿಂದ ಈವರೆಗೆ ರಾಜ್ಯದಲ್ಲಿ ಅತ್ಯಧಿಕವಾಗಿ ಸುರಿದ ಮುಂಗಾರು ಮತ್ತು ಹಿಂಗಾರು ಮಳೆಯ ಪ್ರಮಾಣ ಎಷ್ಟು ; (ಅತಿ ಹೆಚ್ಚು ಮಳೆ ಬಿದ್ದ ಜಿಲ್ಲೆಗಳಿಂದ ಕಡಿಮೆ ಮಳೆ ಬಿದ್ದ ಜಿಲ್ಲೆಗಳವರೆಗಿನ ವಿವರವಾದ ಮಾಹಿತಿ ನೀಡುವುದು)

(ಆ) ಅತಿ ವೃಷ್ಠಿಯಿಂದಾಗಿ ಆಗಿರುವ ತೋಟಗಾರಿಕಾ ಬೆಳೆಗಳು, ಕೃಷಿ ಬೆಳೆಗಳು, ಜಾನುವಾರುಗಳ ಜೀವಹಾನಿ ಸೇರಿದಂತೆ ಸಾರ್ವಜನಿಕ ಆಸ್ತಿ, ಜನಸಾಮಾನ್ಯರ ಆಸ್ತಿಯ ನಷ್ಟದ ವಿವರಗಳೇನು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿರುವ ಪ್ರದೇಶಗಳು ಯಾವುವು ; (ಪೂರ್ಣವಾದ ವಿವರಗಳನ್ನು ಒದಗಿಸುವುದು)

(ಈ) ೨೦೨೪ರ ಮುಂಗಾರು ಮತ್ತು ಹಿಂಗಾರು ಮಳೆಯಿಂದಾಗಿ ಆಗಿರುವ ಹಾನಿ/ನಷ್ಟಗಳ ಸಮೀಕ್ಷೆಯನ್ನು ಸರ್ಕಾರದ ವತಿಯಿಂದ ಮಾಡಲಾಗಿದೆಯೇ ; ಇದ್ದಲ್ಲಿ, ಈ ಸಮೀಕ್ಷೆಯ ಮಾಹಿತಿಯ ವಿವರವನ್ನು ಒದಗಿಸುವುದು)

(ಉ) ಸರ್ಕಾರದಿಂದ ಈವರೆಗೆ ಬಿಡುಗಡೆಗೊಳಿಸಿದ ಪರಿಹಾರದ ಮೊತ್ತವೆಷ್ಟು ; ಸದರಿ ಪರಿಹಾರದ ಮೊತ್ತವನ್ನು ಎಷ್ಟು ರೈತರುಗಳಿಗೆ ಹಾಗೂ ಜನಸಾಮಾನ್ಯರಿಗೆ ಒದಗಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೭ (೯೪೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಹಾಸ್ಟೆಲ್‌ಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಿರ್ವಹಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ೨೦೨೩–೨೪, ೨೦೨೪–೨೫ ರಲ್ಲಿ ಪ್ರವೇಶ ಪಡೆದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಮಂಗಳೂರು ನಗರದಲ್ಲಿ ಎಷ್ಟು ಹಾಸ್ಟೆಲ್‌ಗಳು ಇವೆ ; ಒಟ್ಟು ಎಷ್ಟು ಅರ್ಜಿಗಳು ೨೦೨೪–೨೫ನೇ ಸಾಲಿನಲ್ಲಿ ಬಂದಿವೇ ; ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ ; ಹೆಚ್ಚುವರಿ ಹಾಸ್ಟೆಲ್‌ಗಳ ಬೇಡಿಕೆ ಇದೆಯೇ ; (ವಿವರ ನೀಡುವುದು)

(ಈ) ಪ್ರಸ್ತುತ ಪ್ರವೇಶ ಪಡೆಯದೇ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಗೃಹಲಕ್ಷ್ಮಿ ಯೋಜನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೮ (೯೪೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹಲಕ್ಷ್ಮೀ ಯೋಜನೆ ಅನ್ವಯ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಕುಟುಂಬಗಳು ಈ ಯೋಜನೆಯಡಿಯಲ್ಲಿ ನೋಂದಾಯಿಸಲಾಗಿದೆ ; ಒಟ್ಟು ಈವರೆಗೆ ಎಷ್ಟು ಕಂತುಗಳನ್ನು ಬಿಡುಗಡೆ ಮಾಡಲಾಗಿದೆ ; ಈವರೆಗೆ ಬಿಡುಗಡೆ ಮಾಡಿದ ಒಟ್ಟು ಮೊತ್ತ ಎಷ್ಟು ; (ವಿವರ ನೀಡುವುದು)

(ಆ) ಗೃಹಲಕ್ಷ್ಮಿ ಯೋಜನೆಗೆ ನೋಂದಾಯಿಸಲು ರೇಷನ್‌ಕಾರ್ಡ್‌ಗಳಲ್ಲಿ ಹೆಸರು ಬದಲಾವಣೆ ಮತ್ತು ರೇಷನ್ ಕಾರ್ಡ್‌ಗಳನ್ನು ಅಮಾನತ್ತಿನಲ್ಲಿ ಇಟ್ಟಿರುವುದರಿಂದ ಬಹಳಷ್ಟು ಮಂದಿ ಫಲಾನುಭವಿಗಳಿಗೆ ಈ ಯೋಜನೆಯ ಪ್ರಯೋಜನ ದೊರಕದಿರುವುದು ನಿಜವೇ ; (ಈ ಬಗ್ಗೆ ವಿವರ ನೀಡುವುದು)

(ಇ) ಗೃಹಲಕ್ಷ್ಮಿ ಯೋಜನೆಯಲ್ಲಿ ಯಾವ ಯಾವ ಕಾರಣಕ್ಕಾಗಿ ಅರ್ಜಿಗಳನ್ನು ತಿರಸ್ಕರಿಸಲಾಗಿದೆ ; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆ ಅನ್ವಯ ನೋಂದಾಯಿಸಿದ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಚುನಾವಣೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೯ (೯೪೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಪಂಚಾಯತ್ ತಾಲ್ಲೂಕು ಪಂಚಾಯತ್ ಚುನಾವಣೆಗಳನ್ನು ಎಂದು ನಡೆಸಲು ತೀರ್ಮಾನಿಸಲಾಗಿದೆ ; ಚುನಾವಣೆಗಳನ್ನು ನಡೆಸಲು ವಿಳಂಬವಾಗುತ್ತಿರಲು ಕಾರಣಗಳೇನು ; (ವಿವರ ನೀಡುವುದು)

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ತಾಲ್ಲೂಕು ಪಂಚಾಯತ್‌ಗಳಿಗೆ ಸ್ವಂತ ಕಟ್ಟಡಗಳಿರುವುದಿಲ್ಲ ; (ವಿವರ ನೀಡುವುದು)

(ಇ) ಜಿಲ್ಲಾ ಪಂಚಾಯತ್‌ಗಳಿಗೆ ಅನುದಾನವನ್ನು ಬಿಡುಗಡೆ ಮಾಡಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆಯೇ ? (ವಿವರ ನೀಡುವುದು)

## ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಡುಗಡೆ ಮಾಡಿದ ಅನುದಾನದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೦ (೯೪೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಮತ್ತು ೨೦೨೪–೨೫ನೇ ಸಾಲುಗಳಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಕರಾವಳಿಯ ೧೭೦ ಕಿ.ಮೀ. ಉದ್ದದ ಸಮುದ್ರ ಬದಿಗಳಲ್ಲಿ ಸರ್ಕಾರ ಕೈಗೊಂಡ ಯೋಜನೆಗಳಾವುವು ;

(ಇ) ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಸಲ್ಲಿಸಿದ ಬೇಡಿಕೆ ಏನು ; (ವಿವರ ನೀಡುವುದು)

(ಈ) ಕರಾವಳಿ ಅಭಿವೃದ್ಧಿ ಪ್ರಾಧಿಕಾರವನ್ನು ನಿರ್ಲಕ್ಷಿಸಿದೆ ಎಂದು ದೂರುಗಳಿದ್ದು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಕರಾವಳಿ ಅಭಿವೃದ್ಧಿ ಪ್ರಾಧಿಕಾರವನ್ನು "ಮಂಡಳಿಯನ್ನಾಗಿ" ಎಂದು ಜಾರಿಗೆ ತರಲಾಗುವುದು ; ಯಾರು ಇದರ ಸದಸ್ಯರಾಗಿರುತ್ತಾರೆ ? (ವಿವರ ನೀಡುವುದು)

## ಗ್ರಾಮ ಪಂಚಾಯತ್ ಸದಸ್ಯರ ಗೌರವ ಧನದ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೧ (೯೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್ ಸದಸ್ಯರಿಗೆ, ಅಧ್ಯಕ್ಷರಿಗೆ ಮತ್ತು ಉಪಾಧ್ಯಕ್ಷರಿಗೆ ಪ್ರಸ್ತುತ ನೀಡಲಾಗುತ್ತಿರುವ ಗೌರವಧನವೆಷ್ಟು ; ಇವರುಗಳಿಗೆ ಯಾವ ಯಾವ ಭತ್ಯೆಗಳನ್ನು ನೀಡಲಾಗುತ್ತಿದೆ ; ಇವರುಗಳಿಗೆ ಗೌರವಧನ ಪರಿಷ್ಕರಣೆ ಯಾವಾಗ ಮಾಡಲಾಗಿರುತ್ತದೆ ;

(ಆ) ಗ್ರಾಮ ಪಂಚಾಯತ್ ಸದಸ್ಯರಿಗೆ ಪ್ರಸ್ತುತ ನೀಡುತ್ತಿರುವ ಗೌರವಧನ ಅತ್ಯಂತ ಕಡಿಮೆ ಇದ್ದು, ಇದನ್ನು ಹೆಚ್ಚು ಮಾಡಲು ಸರ್ಕಾರ ಕ್ರಮವಹಿಸುವುದೇ ; ವಹಿಸಿದ್ದಲ್ಲಿ, ಎಷ್ಟು ಹೆಚ್ಚಳ ಮಾಡಲು ಕ್ರಮವಹಿಸಲಾಗುವುದು ;

(ಇ) ಗ್ರಾಮ ಪಂಚಾಯತ್ ಸದಸ್ಯರ ದೂರವಾಣಿ ಭತ್ಯೆ, ಪ್ರಯಾಣ ಭತ್ಯೆ ಹೆಚ್ಚಳ ಮಾಡಲು ಸರ್ಕಾರ ನಿರ್ಧರಿಸಿದೆಯೇ ; ಯಾವ ಕಾಲಮಿತಿಯಲ್ಲಿ ಇವರುಗಳ ವಿವಿಧ ಭತ್ಯೆಗಳನ್ನು ಪರಿಷ್ಕರಿಸಲಾಗುವುದು ;

(ಈ) ಗ್ರಾಮ ಪಂಚಾಯತ್ ಸದಸ್ಯರಿಗೆ ಜೀವ ವಿಮಾ ಸೌಲಭ್ಯ/ಆರೋಗ್ಯ ವಿಮೆ ಸೌಲಭ್ಯ ನೀಡುವ ಬಗ್ಗೆ ಸರ್ಕಾರದ ನಿಲುವೇನು ?

## ಗ್ರಾಮ ಪಂಚಾಯತ್ ನೌಕರರ ಬೇಡಿಕೆಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೨ (೯೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್ ನೌಕರರು (ಗ್ರಾಮ ಆಡಳಿತಾಧಿಕಾರಿಗಳ ಸಂಘ) ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮುಷ್ಕರ ನಡೆಸಿರುವುದು/ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನೌಕರರ ಬೇಡಿಕೆಯ ಬಗ್ಗೆ ಸರ್ಕಾರದ ನಿಲುವೇನು ; ಯಾವೆಲ್ಲ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ ಸರ್ಕಾರ ಕ್ರಮವಹಿಸಿದೆ ; (ವಿವರ ನೀಡುವುದು)

(ಇ) ನೌಕರರಿಗೆ ಪ್ರಯಾಣ ಭತ್ಯೆ ಹೆಚ್ಚಳ, ಕರ್ತವ್ಯದಲ್ಲಿರುವಾಗ ಜೀವಹಾನಿಗೆ ಒಳಗಾದ ನೌಕರರ ಕುಟುಂಬಕ್ಕೆ ರೂ.೫೦ ಲಕ್ಷಗಳ ಪರಿಹಾರ, ಆಪತ್ತಿನ ಭತ್ಯೆ ಇತ್ಯಾದಿ ಬೇಡಿಕೆಗಳನ್ನು ಸರ್ಕಾರವು ಪರಿಗಣಿಸುವುದೇ ;

(ಈ) ಗ್ರಾಮ ಸಹಾಯಕರಿಗೆ ಸೇವಾ ಭದ್ರತೆಯನ್ನು ನೀಡುವ ಬಗ್ಗೆ ಸರ್ಕಾರದ ನಿಲುವೇನು ;

(ಉ) ಗ್ರಾಮ ಪಂಚಾಯತ್ ನೌಕರರು ಮಾಡುವ ಬೆಳೆ ಸಮೀಕ್ಷೆ ಮತ್ತು ಬೆಳೆ ಹಾನಿ ಪರಿಹಾರದ ಕೆಲಸವನ್ನು ಕೃಷಿ/ತೋಟಗಾರಿಕಾ ಇಲಾಖೆಗೆ ವಹಿಸುವ ಬಗ್ಗೆ ಸರ್ಕಾರದ ನಿಲುವೇನು ?

## ನೌಕರರ ಬಡ್ತಿ ನೀಡುವಾಗ ಅನುಸರಿಬೇಕಾದ ಮಾನದಂಡಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೩ (೯೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರೇಡ್–೧ ಕಾರ್ಯದರ್ಶಿಗಳಿಗೆ ಪಿ.ಡಿ.ಓ ಹುದ್ದೆಗೆ ಬಡ್ತಿ ನೀಡಲು ಅನುರಿಸಬೇಕಾದ ಮಾನದಂಡಗಳಾವುವು ; ೨೦೦೯–೧೦ ಸಾಲಿನಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು ಪಿಡಿಓ ಹುದ್ದೆಗೆ ಬಡ್ತಿ ನೀಡುವಾಗ ಇವುಗಳನ್ನು ಅನುಸರಿಸಿವೆಯೇ ; (ಜಿಲ್ಲಾವಾರು ಈ ಮಾನದಂಡಗಳನ್ನು ಅನುಸರಿಸಿದ ದಾಖಲೆ ನೀಡುವುದು)

(ಆ) ಗ್ರೇಡ್–೧ ಕಾರ್ಯದರ್ಶಿಗಳಿಗೆ ಪಿ.ಡಿ.ಓ ಹುದ್ದೆಗೆ ಬಡ್ತಿ ನೀಡಲು ದಿನಾಂಕ:೧೧.೦೩.೨೦೧೦ರಂದು ಸರ್ಕಾರ ನಿರ್ದೇಶನ ನೀಡುವ ಪೂರ್ವದಲ್ಲಿಯೇ ಎಷ್ಟು ಜನರಿಗೆ ಬಡ್ತಿ ನೀಡಲಾಗಿದೆ ; (ಜಿಲ್ಲಾವಾರು ಬಡ್ತಿ ಹೊಂದಿದವರ ಪಟ್ಟಿ ನೀಡುವುದು)

(ಇ) ಈ ರೀತಿ ಬಡ್ತಿಗಳು ಸಕ್ರಮವಾದಲ್ಲಿ ದಿನಾಂಕ: ೧೧.೦೩.೨೦೧೦ರ ಆದೇಶದ ಔಚಿತ್ಯವೇನು ; ಹಾಗಾದರೆ ದಿನಾಂಕ: ೧೦.೦೩.೨೦೧೦ರಂದು ನೇರ ನೇಮಕಾತಿ ಹಾಗೂ ದಿನಾಂಕ:೧೧.೦೩.೨೦೧೦ರಂದು ಬಡ್ತಿ ಪಿಡಿಓ ಗಳ ಸಂಬಂಧ ಹೊರಡಿಸಿರುವ ಆದೇಶಗಳಿಗೆ ಕಾನೂನಿನ ಮಾನ್ಯತೆ ಇಲ್ಲವೇ ;

(ಈ) ದಿನಾಂಕ:೧೧.೦೩.೨೦೧೦ರ ಪೂರ್ವದಲ್ಲಿ ಬಡ್ತಿ ಹೊಂದಿದ ಈ ಪಿಡಿಓ ಗಳು ಮಾರ್ಚ್ ೨೦೧೦ರ ಗ್ರೇಡ್–೧ ಕಾರ್ಯದರ್ಶಿ ಹುದ್ದೆಯ ವೇತನ ಪಡೆದಿದ್ದರೆ ಅಥವಾ ಹೆಚ್.ಆರ್.ಎಂ.ಎಸ್.(HRMS) ಇದ್ದರು ಸಹ ಇದರ ಮುಖಾಂತರ ಬಿಟ್ಟು ಮ್ಯಾನುವಲ್ (ಭಾಗಶಃಗೇಡ್–೧ ಕಾರ್ಯದರ್ಶಿ ಹಾಗೂ ಭಾಗಶಃ ಪಿಡಿಓ) ವೇತನ ಪಡೆದಿದ್ದರೆ ಇವರ ಬಡ್ತಿಗಳು ಸಕ್ರಮವೇ ;

(ಉ) ಸರ್ಕಾರದ ಪತ್ರ ಸಂಖ್ಯೆ:ಕೆಪಿಆರ್ಸಿ–ಜಿಪಿಎ–ಪಿಡೊ–೨೯೧–೨೦೨೪ ದಿನಾಂಕ:೦೩.೦೧.೨೦೨೫ ರನ್ವಯ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು ಅಕ್ರಮ ಪಿಡಿಓ ಬಡ್ತಿ ಕುರಿತು ಸರ್ಕಾರಕ್ಕೆ ಸಲ್ಲಿಸಿರುವ ವರದಿಗಳಾವುವು ; ಈ ವರದಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; (ಸಂಪೂರ್ಣ ವಿವರ ನೀಡುವುದು)

(ಊ) ಈ ಅಕ್ರಮವಾಗಿ ಬಡ್ತಿ ಹೊಂದಿದವರನ್ನು ಜೇಷ್ಠತಾ ಪಟ್ಟಿಯಲ್ಲಿ ಅಗ್ರಸ್ಥಾನ ನೀಡಿ, ಬಡ್ತಿ ಹಾಗೂ ಸರ್ಕಾರದ ಎಲ್ಲಾ ಸೇವಾ ಸೌಲತ್ತು ನೀಡಿ, ಇವರು ನಿವೃತ್ತಿಯಾಗುವವರೆಗೆ ಕಾಲಹರಣ ಮಾಡುವ ಉದ್ದೇಶದಿಂದ ಈ ದೂರುಗಳ ಮೇಲೆ ಅಂತಿಮ ಆದೇಶ ಹೊರಡಿಸದಿರಲು ಸರ್ಕಾರ ವಿಳಂಬ ಮಾಡುತ್ತಿದೆಯೇ ?

## ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೪ (೯೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:೨೧.೦೨.೨೦೧೪ರಂದು ಹಾಗೂ ದಿನಾಂಕ: ೨೮.೧೨.೨೦೧೭ರಂದು ಸರ್ಕಾರವು ಪ್ರಕಟಿಸಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯಲ್ಲಿದ್ದ ಲೋಪಗಳೇನು ; (ಲೋಪಗಳ ಪಟ್ಟಿ ನೀಡುವುದು ಪ್ರತ್ಯೇಕ ಜೇಷ್ಠತಾ ಪಟ್ಟಿವಾರು) ಇವುಗಳನ್ನು ಕ್ರಮವಾಗಿ ಮಾನ್ಯ ಕೆ.ಎ.ಟಿ.ಯು ಅರ್ಜಿ ಸಂಖ್ಯೆ ೬೮೦೧–೬೮೦೫/೨೦೧೧ ಹಾಗೂ ಅರ್ಜಿ ಸಂಖ್ಯೆ ೫೪೪೪–೫೪೮/೨೦೧೮ಗಳಲ್ಲಿ ಯಾವ ಕಾರಣಗಳನ್ನು ನೀಡಿ ರದ್ದುಗೊಳಿಸಿದೆ ; (ಕಾರಣಗಳ ಪಟ್ಟಿ ನೀಡುವುದು)

(ಆ) ಕೆ.ಎ.ಟಿ ನಿಂದನಾ ಅರ್ಜಿ ಸಂಖ್ಯೆ: ೨೪೩/೨೦೧೯ ಹಾಗೂ ನಿಂದನಾ ಅರ್ಜಿ ಸಂಖ್ಯೆ: ೧೭೦–೨೧೧/೨೦೨೧ಗಳಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಯಾವ ಕಾರಣ ನೀಡಿ, ಸದರಿ ನಿಂದನಾ ಅರ್ಜಿ ವಿಲೆ ಮಾಡಲು ಮನವಿ ಮಾಡಿದ್ದಾರೆ ; (ಸದರಿ ಮನವಿಯ ವಿವರ ನೀಡುವುದು)

(ಇ) ಆಯುಕ್ತರು, ಪಂಚಾಯತ್‌ರಾಜ್ ಇವರ ಅಧ್ಯಕ್ಷತೆಯಲ್ಲಿ ಸಿದ್ದಪಡಿಸಿದ ಪಿ.ಡಿ.ಓಗಳ ಜೇಷ್ಠತಾ ಪಟ್ಟಿ ದಿನಾಂಕ:೦೮.೦೬.೨೦೨೪ರ ಸಮಿತಿಯ ವರದಿಯ ಕ್ರಮ ಸಂಖ್ಯೆ ೨೭ರ ಉಪ ಸಂಖ್ಯೆ ೬ರಲ್ಲಿನ ವಿವಾದಾಂಶಗಳಲ್ಲಿ ತಿಳಿಸಿದ ಜಿಲ್ಲಾವಾರು ಹೆಚ್ಚುವರಿ ಬಡ್ತಿ ಹೊಂದಿದವರ ಪಟ್ಟಿಯನ್ನು ಹಾಗೂ ದಿನಾಂಕ:೧೮.೦೩.೨೦೨೩ ರಿಂದ ೦೮.೦೬.೨೦೨೪ರವರೆಗೆ ನಡೆಸಿದ ಒಟ್ಟು ೧೯ ಸಮಿತಿಯ ಸಭೆಯ ನಡವಳಿಯನ್ನು ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಸಲ್ಲಿಸಿರುತ್ತಾರೆಯೇ ; ಹಾಗಾದರೆ, ಸಮಿತಿಯು ಸಿದ್ಧಪಡಿಸಿದ ಜೇಷ್ಠತಾ ಪಟ್ಟಿ ಜಿಲ್ಲಾವಾರು ಹೆಚ್ಚುವರಿ ಬಡ್ತಿ ಹೊಂದಿದವರ ಪಟ್ಟಿ ನೀಡುವುದು ;

(ಈ) ಜಿಲ್ಲಾವಾರು ವೃಂದದ ನೌಕರರ ಜೇಷ್ಠತೆಯನ್ನು ಒಗ್ಗೂಡಿಸಿ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ತಯಾರಿಸುವಾಗ, ಕ.ಸಾ.ನೌ (ಜೇಷ್ಠತಾ) ನಿಯಮಗಳು,೧೯೫೭ರ ನಿಯಮ ೭–ಎ(೧) ಪ್ರಕಾರ ಸಿದ್ಧಪಡಿಸಬೇಕೆಂದು ಸರ್ಕಾರ ಸೂಚಿಸಿದ್ದರೂ ಸಹ ನಿಯಮ–೭ಎ (೧)ಅನ್ನು ತಿರಸ್ಕರಿಸಿ. ನಿಯಮ೫(೧)ರ ಪ್ರಕಾರ ಜೇಷ್ಠತಾ ಪಟ್ಟಿ ತಯಾರಿಸಲು ಸಮಿತಿಯು ನೀಡಿರುವ ಕಾರಣಗಳಾವುವು ?

## ಅನುದಾನ ಬಿಡುಗಡೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೫ (೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಡಿಯಲ್ಲಿ ಕಳೆದ ೨

ವರ್ಷಗಳಲ್ಲಿ (೨೦೨೩–೨೪, ೨೦೨೪–೨೫) ಅಭಿವೃದ್ಧಿ ಕಾರ್ಯಗಳಿಗೆ ಮತ್ತು ರಸ್ತೆಗಳ ಅಭಿವೃದ್ಧಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ಕಾಮಗಾರಿಗಳ, ರಸ್ತೆಗಳ ವಿವರ ನೀಡುವುದು)

(ಆ) ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; (ಕಾಮಗಾರಿಗಳ ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಡಿಯಲ್ಲಿ ರಸ್ತೆಗಳ ಅಭಿವೃದ್ಧಿಗೆ ೨೦೨೫–೨೬ರ ಸಾಲಿನಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ; ಯಾವೆಲ್ಲ ರಸ್ತೆಗಳ ಅಭಿವೃದ್ಧಿ ಮಾಡಲಾಗುವುದು ; (ತಾಲ್ಲೂಕುವಾರು ಕಾಮಗಾರಿಗಳ, ರಸ್ತೆಗಳ ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಕುಡಿಯುವ ನೀರಿಗೆ ಈ ವರ್ಷ ಎಷ್ಟು ಅನುದಾನ ಮೀಸಲಿಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಅಸಂಘಟಿತ ಕಾರ್ಮಿಕರ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೬ (೯೫೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಅಸಂಘಟಿತ ಕಾರ್ಮಿಕರು (ಕೂಲಿ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಕೃಷಿ ಕಾರ್ಮಿಕರು) ಇದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವರೆಲ್ಲರೂ ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ ಎಂಬುದನ್ನು ಸರ್ಕಾರ ಹೇಗೆ ಖಚಿತಪಡಿಸುತ್ತಿದೆ ; ಕಾಲಕಾಲಕ್ಕೆ ಪರಿಶೀಲನೆ ನಡೆಸುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) BOCW (Building & Other Construction Workers) ಬೋರ್ಡ್‌ನಿಂದ ವಿಜಯಪುರ ಜಿಲ್ಲೆಯಲ್ಲಿ ಲಾಭ ಪಡೆಯುತ್ತಿರುವ ಕಾರ್ಮಿಕರ ಸಂಖ್ಯೆಯೆಷ್ಟು ; ಈ ಎಲ್ಲಾ ಕಾರ್ಮಿಕರಿಗೆ ನಿಗದಿತ ವೇತನ (Minimum Wages) ನೀಡಲಾಗುತ್ತಿದೆಯೇ ; ತಪಾಸಣೆ ನಡೆಸಲು ಸರ್ಕಾರ ಯಾವುದಾದರು ಸಮಿತಿಯನ್ನು ನೇಮಿಸಿರುವುದೇ ; (ಮಾಹಿತಿ ನೀಡುವುದು)

(ಈ) ವಿಜಯಪುರ ಜಿಲ್ಲೆಯ ಕೈಗಾರಿಕಾ ಕಾರ್ಮಿಕರಿಗೆ ಸರ್ಕಾರಿ ಯೋಜನೆಗಳ ಪ್ರಯೋಜನ ಪಡೆಯಲು ಇ-ಶ್ರಮ ಇಲಾಖೆಯಿಂದ ವಿಶೇಷ ಶಿಬಿರಗಳು ಆಯೋಜಿಸಲಾಗುತ್ತದೆಯೇ ; ESI (Employee State Insurance) ಸೌಲಭ್ಯಗಳು ವಿಜಯಪುರದ ಎಲ್ಲಾ ಅರ್ಹ ಕಾರ್ಮಿಕರಿಗೆ ತಲುಪುತ್ತಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ರೈತರಿಗೆ ನೀಡುತ್ತಿರುವ ಯೂರಿಯಾ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೭ (೯೫೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರಿಗೆ ಸಬ್ಸಿಡಿ ದರದಲ್ಲಿ ಯೂರಿಯಾ ಮಾರಾಟ ಮಾಡಲಾಗುತ್ತಿದೆಯೇ ; ನೀಡುತ್ತಿರುವ ಸಬ್ಸಿಡಿ ಮೊತ್ತ ಎಷ್ಟು; ಪ್ರಸಕ್ತ ಸಾಲಿನಲ್ಲಿ ಎಷ್ಟು ರೈತರು ಸಬ್ಸಿಡಿ ದರದಲ್ಲಿ ಯೂರಿಯಾ ಖರೀದಿಸಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಸಬ್ಸಿಡಿ ಯೂರಿಯಾವನ್ನು ಅಕ್ರಮವಾಗಿ ಕೈಗಾರಿಕೆಗಳಿಗೆ ಮಾರಾಟ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ಜನರ ಮೇಲೆ ಪ್ರಕರಣ ದಾಖಲಾಗಿವೆ ; ಅವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ದೇವದಾಸಿಯರ ಸಮಸ್ಯೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೮ (೯೫೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ದೇವದಾಸಿಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ದೇವದಾಸಿಯರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು ;

(ಆ) ದೇವದಾಸಿಯರ ಬೇಡಿಕೆಗಳೇನು ; ದೇವದಾಸಿ ಮಹಿಳೆಯರ ಸ್ಥಿತಿಗತಿ ಬಗ್ಗೆ ವೈಜ್ಞಾನಿಕ ಸಮೀಕ್ಷೆ ನಡೆಸುವ ಬೇಡಿಕೆ ಕುರಿತು ಸರ್ಕಾರದ ನಿಲುವೇನು ; ಸಮೀಕ್ಷೆ ನಡೆಸಲು ಸಮಿತಿ ರಚಿಸಲಾಗಿದೆಯೇ ; ಸಮಿತಿ ತನ್ನ ವರದಿಯನ್ನು ಸಲ್ಲಿಸಿದೆಯೇ ;

(ಇ) ವರದಿಯಲ್ಲಿ ಪ್ರಸ್ತಾಪಿಸಿರುವ ಅಂಶಗಳೇನು ; ದೇವದಾಸಿಯರ ಸಮಸ್ಯೆ ಮತ್ತು ಪುನರ್ವಸತಿ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಯಾವ ಯಾವ ಯೋಜನೆ/ಕಾರ್ಯಕ್ರಮಗಳನ್ನು ರೂಪಿಸಿದೆ ?

# ಮಹಿಳೆಯರ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೯ (೯೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಉದ್ಯೋಗ ಮತ್ತು ಸ್ವಾವಲಂಬನೆಗೆ (Self Employment) ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಜಾರಿಗೆ ಬಂದ ಯೋಜನೆಗಳು ಯಾವುವು ; ಈ ಯೋಜನೆಗಳ ಪ್ರಗತಿ ಯಾವ ಹಂತದಲ್ಲಿವೆ ;

(ಆ) ವಿಜಯಪುರದಲ್ಲಿ ಮಹಿಳಾ ಸಹಾಯ ಕೇಂದ್ರ (One Stop Center) ಕಾರ್ಯನಿರ್ವಹಿಸುತ್ತಿದೆಯೇ ; ಇದುವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ ; ಈ ಪೈಕಿ ಎಷ್ಟು ಪ್ರಕರಣಗಳಿಗೆ ನೆರವು ನೀಡಲಾಗಿದೆ ;

(ಇ) ಜಿಲ್ಲೆಯಲ್ಲಿ ಮಹಿಳಾ ಆತ್ಮಸಂಭ್ರಮ ಮತ್ತು ಸ್ವಯಂ ಸಹಾಯ ಸಂಘಗಳ (SHG) ಕಾರ್ಯನಿರ್ವಹಣೆಗೆ ಸರ್ಕಾರದಿಂದ ಎಷ್ಟು ವಿಶೇಷ ಅನುದಾನ ಒದಗಿಸಲಾಗಿದೆ ;

(ಈ) ಗೃಹ ಹಿಂಸೆ ಪೀಡಿತ ಮಹಿಳೆಯರಿಗೆ ಆಶ್ರಯ ಮತ್ತು ಪುನರ್ವಸತಿ ನೀಡಲು ಜಿಲ್ಲೆಯಲ್ಲಿ ಎಷ್ಟು ಕೇಂದ್ರಗಳಿವೆ ; ಮಹಿಳಾ ಭದ್ರತಾ ಮೇಲ್ವಿಚಾರಣಾ ಸಮಿತಿ (Women's Safety Monitoring Committee) ವಿಜಯಪುರ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿದೆಯೇ ; (ವಿವರ ನೀಡುವುದು)

(ಉ) ಗ್ರಾಮೀಣ ಭಾಗದ ಮಹಿಳಾ ಉದ್ಯಮಶೀಲತೆ ಅಭಿವೃದ್ಧಿಗಾಗಿ (Enterpreneurship Development) ಸರ್ಕಾರವು ವಿಶೇಷ ಯೋಜನೆಗಳನ್ನು ರೂಪಿಸಿರುವುದೇ ?

## ವೃಂದ ಮತ್ತು ನೇಮಕಾತಿ ನಿಯಮದಲ್ಲಿ ತಿದ್ದುಪಡಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯೦ (೯೯೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿವಿಧ ಇಲಾಖೆಗಳಲ್ಲಿ ಗ್ರೂಪ್–ಎ ಜೂನಿಯರ್ ಹುದ್ದೆಯಿಂದ ಗ್ರೂಪ್–ಎ ಸೀನಿಯರ್ ಹುದ್ದೆಗೆ ಅರ್ಹತಾದಾಯಕ ಸೇವೆ ಕನಿಷ್ಠ ೩ ವರ್ಷಗಳನ್ನು ನಿಗದಿಪಡಿಸಿದ್ದು, ಸಮಾಜ ಕಲ್ಯಾಣ ಇಲಾಖೆಯಲ್ಲಿ ಇದುವರೆವಿಗೂ ವೃಂದ ಮತ್ತು ನೇಮಕಾತಿ ನಿಯಮದಲ್ಲಿ ತಿದ್ದುಪಡಿ ಆಗದಿರಲು ಕಾರಣಗಳೇನು ;

(ಆ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಗ್ರೂಪ್–ಎ ಜೂನಿಯರ್ ಹುದ್ದೆಯಾದ ಸಹಾಯಕ ನಿರ್ದೇಶಕರು ಗ್ರೇಡ್–೧ ಹುದ್ದೆಯಿಂದ ಗ್ರೂಪ್–ಎ ಸೀನಿಯರ್ ಹುದ್ದೆಯಾದ ಉಪ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ಹೊಂದಲು ನಿಗದಿಪಡಿಸಿರುವ ಅರ್ಹತಾದಾಯಕ ಸೇವೆ ಎಷ್ಟು ಹಾಗೂ ಇದರಿಂದ ಹಲವು ನೌಕರರಿಗೆ ಮುಂಬಡ್ತಿ ಹೊಂದಲು ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ದಿನಾಂಕ:೧೦.೦೭.೨೦೨೪ರಂದು ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ವೃಂದ ಮತ್ತು ನೇಮಕಾತಿಯ ಉಪ ಸಮಿತಿ ಸಭೆಯಲ್ಲಿ ಅರ್ಹತಾ ಸೇವೆಯನ್ನು ೩ ವರ್ಷಗಳಿಗೆ ನಿಗದಿಪಡಿಸಲು ತೀರ್ಮಾನಿಸಲಾಗಿತ್ತು ; ಇದುವರೆವಿಗೂ ತಿದ್ದುಪಡಿ ಆಗದಿರಲು ಕಾರಣಗಳೇನು ;

(ಈ) ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಆರ್ಥಿಕ ಇಲಾಖೆಯವರು ಒಮ್ಮತ ಅಭಿಪ್ರಾಯ ನೀಡಿದ್ದರೂ ಸಹ ಮತ್ತೊಮ್ಮೆ

ಕಡತವನ್ನು ಸದರಿ ಇಲಾಖೆಗಳ ಅಭಿಪ್ರಾಯಕ್ಕೆ ಕಳುಹಿಸುವ ಅವಶ್ಯಕತೆ ಇದೆಯೇ ;

(ಉ) ಸಮಾಜ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ವಿಳಂಬ ಮಾಡುತ್ತಿರುವುದು ಏಕೆ ?

## ಅಧಿಕಾರಿ/ಸಿಬ್ಬಂದಿಗಳ ಸೇವಾ ವಿಷಯಗಳ ಮಂಜೂರಾತಿಯಲ್ಲಿ ವಿಳಂಬ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯೧ (೯೯೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲಾ ಪಂಚಾಯತ್ ಹಾಗೂ ಅದರ ಅಧೀನದಲ್ಲಿನ ಸಿಬ್ಬಂದಿಯವರ ಸೇವಾ ವಿಷಯಗಳಾದ ಕಾಲಮಿತಿ ವೇತನ ಬಡ್ತಿ ಹಾಗೂ ಮುಂಬಡ್ತಿ ಮಂಜೂರಾತಿ ಘೋಷಣೆ ಮಾಡಬೇಕಿರುವ ಅರ್ಹ ಪ್ರಕರಣಗಳ ಪೈಕಿ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವೃಂದವಾರು ಅರ್ಹರಿರುವ ಸಿಬ್ಬಂದಿ ಹೆಸರು ಮತ್ತು ಪದನಾಮ, ಮಂಜೂರಾತಿಗೆ ಅರ್ಹತೆ ಪಡೆದ ದಿನಾಂಕ, ಯಾವ ದಿನಾಂಕದಿಂದ ಬಾಕಿ ಇದೆ, ವಿಳಂಬಕ್ಕೆ ಕಾರಣ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಆ) ಒಂದು ಹುದ್ದೆಯಿಂದ ಮತ್ತೊಂದು ಹುದ್ದೆಗೆ ಮುಂಬಡ್ತಿ ಹೊಂದಲು ಹಾಗೂ ಕಾಲಮಿತಿ ವೇತನ ಬಡ್ತಿ ಪಡೆಯಲು ಸಿಬ್ಬಂದಿಗಳು ಸಲ್ಲಿಸಬೇಕಾದ ದಾಖಲೆಗಳು ಯಾವುವು ; (ಸರ್ಕಾರದ ಆದೇಶ ಪ್ರತಿ ಒದಗಿಸುವುದು)

(ಇ) ಜಿಲ್ಲಾ ಪಂಚಾಯಿತಿಗೆ ಪ್ರಸ್ತಾವನೆಗಳು ಸ್ವೀಕೃತವಾದ ಬಳಿಕ ಸೇವಾ ವಿಷಯಗಳ ಮಂಜೂರಾತಿ ಘೋಷಣೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾದ ಕಾಲಮಿತಿ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಮಂಜೂರಾತಿ ಘೋಷಣೆ ಸಂದರ್ಭದಲ್ಲಿ ಕಾರ್ಯನಿರ್ವಾಹಣ ವರದಿ (ಸಿ.ಆರ್) ಬದಲಾಗಿ ಸ್ಪೆಷಲ್ ರಿಪೋರ್ಟ್ ಅನ್ನು ಪರಿಗಣಿಸಲಾಗುವುದೇ ಅಥವಾ ಇಲ್ಲವೇ ; (ಯಾವ ಸಂದರ್ಭದಲ್ಲಿ ಪರಿಗಣಿಸಲಾಗುವುದು ಮಾಹಿತಿ ನೀಡುವುದು)

(ಉ) ಕಳೆದ ೫ ವರ್ಷಗಳಲ್ಲಿ ಸಿ.ಆರ್ ಬದಲಾಗಿ ಸ್ಪೆಷಲ್ ರಿಪೋರ್ಟ್ ಅನ್ನು ಪರಿಗಣಿಸಿ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಹಾಗೂ ಅದರ ಅಧೀನ ಕಚೇರಿಯಲ್ಲಿ ಸಿಬ್ಬಂದಿಯವರ ಮುಂಬಡ್ತಿ, ಕಾಲಮಿತಿ ವೇತನ ಬಡ್ತಿ ಹಾಗೂ ಸ್ವಯಂ ಚಾಲಿತ ವೇತನ ಬಡ್ತಿ ಮಂಜೂರಾತಿ ಘೋಷಣೆ ಮಾಡಲಾಗಿದೆಯೇ ; (ವೃಂದವಾರು, ಅಭ್ಯರ್ಥಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಊ) ಈ ಸಂಬಂಧ ಪ್ರಸ್ತಾವನೆಗಳು ಸಕಾಲದಲ್ಲಿ ಸ್ವೀಕೃತವಾಗಿದ್ದಾಗ, ಅಧೀನ ಕಚೇರಿಗಳಿಂದ ಪ್ರಸ್ತಾವನೆಗಳನ್ನು ಪಡೆದುಕೊಳ್ಳಲು ಜಿಲ್ಲಾ ಪಂಚಾಯತ್ ಕಚೇರಿಯಿಂದ ತೆಗೆದುಕೊಂಡಿರುವ ಕ್ರಮಗಳೇನು ?

## ಕಬ್ಬು ಮತ್ತು ಭತ್ತ ಬೆಳೆ ಇಳುವರಿಯಲ್ಲಿ ಕುಸಿತವಾಗಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯೨ (೯೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಬ್ಬು ಮತ್ತು ಭತ್ತದ ಬೆಳೆಗಳನ್ನು ಬೆಳೆಯುವ ಕೃಷಿ ಭೂಮಿ ಒಟ್ಟು ವಿಸ್ತೀರ್ಣ ಎಷ್ಟು ;

(ಆ) ನೀರಾವರಿ ಮತ್ತು ಜಲಾನಯನ ಪ್ರದೇಶದ ವಿಸ್ತೀರ್ಣ ಎಷ್ಟು ಹಾಗೂ ಮಣ್ಣಿನ ಫಲವತ್ತತೆ ಕಳೆದುಕೊಂಡ (ಶೇಕಡವಾರು) ಪ್ರದೇಶದ ವಿಸ್ತೀರ್ಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಬ್ಬು ಮತ್ತು ಭತ್ತ ಬೆಳೆಯುವ ಪ್ರದೇಶಗಳಲ್ಲಿ ಮಣ್ಣಿನ ಫಲವತ್ತತೆಗೆ ಸಂಬಂಧಿಸಿದಂತೆ ಹೆಚ್ಚು ಆಮ್ಲೀಯ ಅಂಶವನ್ನು ಮತ್ತು ಹೆಚ್ಚು ಲವಣಾಂಶದ ಸವಾಲುಗಳನ್ನು ಎದುರಿಸುತ್ತಿರುವ ಜಿಲ್ಲೆಗಳು ಯಾವುವು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ಒಂದು ದಶಕದಲ್ಲಿ ಮಣ್ಣಿನ ಫಲವತ್ತತೆ ನಿರಂತರವಾಗಿ ಕುಸಿಯುತ್ತಿರುವುದರಿಂದ ಕಬ್ಬು ಮತ್ತು ಭತ್ತ ಉತ್ಪಾದನೆಯಲ್ಲಿ (ಇಳುವರಿಯಲ್ಲಿ) ತೀವ್ರ ಕುಸಿತವಾಗಿರುವುದು ನಿಜವೇ ; ಕಾರಣಗಳೇನು ; ಇಳುವರಿಯಲ್ಲಿ ಹೆಚ್ಚಳ ಅಥವಾ ಕುಸಿತವಾಗಿರುವ ಶೇಕಡವಾರು ಪ್ರಮಾಣ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಮಣ್ಣಿನ ಫಲವತ್ತತೆ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಯೋಜನೆ/ ಕಾರ್ಯಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಅನುಮೋದನೆ ನೀಡುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೯೩ (೧೦೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ನೀರುಗಂಟಿ, ಸ್ವಚ್ಛತಗಾರರು, ಕರವಸೂಲಿಗಾರರು ಸೇರಿದಂತೆ ಇತರೆ

ಹುದ್ದೆಗಳಿಗೆ ದಿ:೩೧–೧೦.೨೦೧೭ಕ್ಕೂ ಮೊದಲು ಕನಿಷ್ಠ ವಿದ್ಯಾರ್ಹತೆ ಹೊಂದಿಲ್ಲದೆ ನೇಮಕಗೊಂಡು ಜಿಲ್ಲಾ ಪಂಚಾಯತ್‌ನಿಂದ ಅನುಮೋದನೆಯಾಗದೇ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಈ ಪೈಕಿ ಅನುಮೋದನೆ ನೀಡಲಾಗಿರುವ ಹಾಗೂ ಅನುಮೋದನೆಗೆ ಬಾಕಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು)

(ಆ) ಎಲ್ಲಾ ದಾಖಲಾತಿಗಳು ಸರಿಯಿದ್ದರೂ ಅನುಮೋದನೆ ಆಗದೇ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಈ ಪೈಕಿ ಅನುಮೋದನೆ ನೀಡಲಾಗಿರುವ ಹಾಗೂ ಅನುಮೋದನೆಗೆ ಬಾಕಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು)

(ಇ) ಜಿಲ್ಲಾ ಪಂಚಾಯಿತಿಗಳಲ್ಲಿ ಅನುಮೋದನೆ ನೀಡುವ ಪ್ರಕ್ರಿಯೆ ನಿಧಾನಗತಿಯಲ್ಲಿ ಸಾಗುತ್ತಿರುವುದಕ್ಕೆ ಕಾರಣಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ಅನುಮೋದನೆ ನೀಡುವ ವಿಷಯದಲ್ಲಿ ಜಿಲ್ಲಾ ಪಂಚಾಯಿತಿಗಳ ಅಧಿಕಾರಿಗಳು/ಸಿಬ್ಬಂದಿಗಳು ಅನಗತ್ಯವಾಗಿ ವಿಳಂಬ ಮಾಡುತ್ತಿದ್ದಾರೆ ಎನ್ನುವ ಆರೋಪ ಕುರಿತು ಸರ್ಕಾರ ಯಾವ ರೀತಿ ಕ್ರಮವಹಿಸಲಿದೆ ? (ವಿವರ ನೀಡುವುದು)

# ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕುರಿತು

## ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೭೯೪ (೯೮೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯವರು, ಸಹಾಯಕರು, ಅಂಗನವಾಡಿ ಮೇಲ್ವಿಚಾರಕರು, ಇತರ ಅಧಿಕಾರಿ ಸಿಬ್ಬಂದಿಗಳು ವಿವಿಧ ಬೇಡಿಕೆಗಳ ಈಡೇರಿಕೆಗೆ ಮನವಿಗಳನ್ನು ಸಲ್ಲಿಸುತ್ತಿದ್ದು ಮತ್ತು ವಿವಿಧ ರೀತಿಯಲ್ಲಿ ಪ್ರತಿಭಟನೆಯನ್ನು ಆಗಾಗ ಮಾಡುತ್ತಿದ್ದು, ಈ ಕುರಿತು ಇಲಾಖೆ ಇಲ್ಲಿಯವರೆಗೆ ಕೈಗೊಂಡ ಕ್ರಮವೇನು ; ಈ ರೀತಿಯ ಸಮಸ್ಯೆಗಳ ಪರಿಹಾರಕ್ಕಾಗಿ ಯಾವ ಕ್ರಮಗಳನ್ನು ರೂಪಿಸಿದೆ ; (ಬೇಡಿಕೆವಾರು ವಿವರ ನೀಡುವುದು)

(ಆ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಎಷ್ಟು ಅಧಿಕಾರಿ ಸಿಬ್ಬಂದಿಗಳ ಯಾವ ಅವಧಿಯವರೆಗಿನ ಗೌರವಧನ ವೇತನ ಪಾವತಿಗೆ ಬಾಕಿಯಿದೆ ; ಬಾಕಿಯಾಗಲು ಕಾರಣವೇನು ;

(ಇ) ರಾಜ್ಯದ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಷರತ್ತುಗಳನ್ವಯ ಎಲ್‌ಕೆಜಿ/ಯುಕೆಜಿ (ಪೂರ್ವ ಪ್ರಾಥಮಿಕ) ಶಾಲೆಗಳನ್ನು ಪ್ರಾರಂಭಿಸುತ್ತಿದ್ದು, ಇದರಿಂದಾಗಿ ಕೆಲ ಅಂಗನವಾಡಿಗಳಲ್ಲಿ ಮಕ್ಕಳ ಸಂಖ್ಯೆ ತೀರಾ ಕಡಿಮೆಯಾಗಿದ್ದು, ಕ್ರಮೇಣ ಅಂಗವಾಡಿಗಳು ಗರ್ಭಿಣಿ, ಬಾಣಂತಿಯರಿಗೆ ಸವಲತ್ತು ನೀಡಲು ಸೀಮಿತವಾಗಿ ಪ್ರಾಮುಖ್ಯತೆ ಕಳೆದುಕೊಳ್ಳುವ ಭೀತಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯವರು, ಸಹಾಯಕರು ಕೆಲಸ ಕಳೆದುಕೊಳ್ಳುವ ಸಂಭವವಿದೆಯೇ ;

(ಈ) ಈ ಹಿನ್ನೆಲೆಯಲ್ಲಿ ರಾಜ್ಯದ ಅಂಗನವಾಡಿ ವ್ಯವಸ್ಥೆಯನ್ನು ಬಹು ಇಲಾಖಾ ಮಾಹಿತಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ಬಗ್ಗೆ ಇಲಾಖೆ ಯೋಚಿಸಿದೆಯೇ ಅಂಗನವಾಡಿ ವ್ಯವಸ್ಥೆಯನ್ನು ಉಳಿಸುವ ಮತ್ತು ಸದೃಢಗೊಳಿಸುವ ಬಗ್ಗೆ ಇತರ ಯಾವ ಯೋಚನೆ ಸರ್ಕಾರದ ಮುಂದಿದೆ ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೫ (೯೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಗ್ರಾಮ ಪಂಚಾಯಿತಿ ಸಿಬ್ಬಂದಿ ಇತರ ಅಧಿಕಾರಿಗಳು ಹಾಗೂ ಜನ ಪ್ರತಿನಿಧಿಗಳು ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಮನವಿಗಳನ್ನು ಸಲ್ಲಿಸುತ್ತಿದ್ದು ಮತ್ತು ವಿವಿಧ ರೀತಿಯಲ್ಲಿ ಪ್ರತಿಭಟನೆಯನ್ನು ಆಗಾಗ ಮಾಡುತ್ತಿದ್ದು, ಈ ಕುರಿತು ಇಲಾಖೆ ಇಲ್ಲಿಯವರೆಗೆ ಯಾವ ರೀತಿಯಲ್ಲಿ ಕ್ರಮವಹಿಸಿದೆ ; ಈ ರೀತಿಯ ಸಮಸ್ಯೆಗಳ ಪರಿಹಾರಕ್ಕಾಗಿ ಯಾವ ಕ್ರಮಗಳನ್ನು ರೂಪಿಸಿದೆ ; (ಬೇಡಿಕೆವಾರು ವಿವರ ನೀಡುವುದು)

(ಆ) ಗ್ರಾಮ ಪಂಚಾಯಿತಿಗಳ ಸಿಬ್ಬಂದಿಗಳು ಬಡ್ತಿ ಹೊಂದಿ ಮತ್ತು ನಿವೃತ್ತರಾಗಿ ತೆರವಾಗುವ ಹುದ್ದೆಗಳನ್ನು ಭರ್ತಿ ಮಾಡಲು ಇಲ್ಲಿಯವರೆಗೆ ಇಲಾಖೆ ಯಾವ ಕ್ರಮವಹಿಸಿದೆ ; ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಖಾಲಿಯಿರುವ ಗ್ರಾಮ ಪಂಚಾಯಿತಿ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ಮಾದರಿಯು ಮೊದಲಿನಂತೆಯೇ ಇದ್ದು, ಇಲಾಖೆಯ ಕೆಲಸದ ಜೊತೆಗೆ ಇತರ ಇಲಾಖೆಗಳ ಕೆಲಸಗಳನ್ನು ಗ್ರಾಮ ಪಂಚಾಯಿತಿಯು ನಿರ್ವಹಿಸುತ್ತಿದ್ದು, ಸೃಷ್ಟಿಯಾಗಿರುವ ಹೆಚ್ಚುವರಿ ಕಾರ್ಯದೊತ್ತಡವನ್ನು ನಿಭಾಯಿಸಲು ಇಲಾಖೆ ಯಾವ ಕ್ರಮವಹಿಸಿದೆ ;

(ಈ) ಕರ್ನಾಟಕ ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳ ತೆರಿಗೆ ಮೂಲವನ್ನು ಹೆಚ್ಚಿಸುವ ಮತ್ತು ವಸೂಲಿ ಮಾಡುವ ಬಗ್ಗೆ ಸುಧಾರಣಾ ಕ್ರಮಗಳೇನು ; ರಾಜ್ಯದ ವಿವಿಧ ಜಿಲ್ಲೆಗಳ ನಡುವೆ ತೆರಿಗೆ ಮೂಲ ಹೆಚ್ಚಳ ಮತ್ತು ಶೇಕಡಾವಾರು ವಸೂಲಿ ಅಂಕಿ ಅಂಶಗಳ ನಡುವೆ ಅಗಾಧ ವ್ಯತ್ಯಾಸವಿರಲು ಕಾರಣಗಳೇನು ;

(ಉ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ತೆರಿಗೆ ಮೂಲ ಹೆಚ್ಚಳವಾಗದಿರಲು ಮತ್ತು ತೆರಿಗೆ ವಸೂಲಿ ಕುಂಠಿತವಾಗಲು ಕಾರಣವಾಗುವ ಅಂಶಗಳನ್ನು ಗುರುತಿಸಿ ಸುಧಾರಿಸಲು ಏನು ಕ್ರಮವಹಿಸಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಪಟ್ಟಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೬ (೯೮೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರತ ಸ್ವಾತಂತ್ರ್ಯಾನಂತರ ಮದ್ರಾಸು ರಾಜ್ಯ ಅಸ್ತಿತ್ವದಲ್ಲಿರುವಾಗ ಕರ್ನಾಟಕದ ವಿವಿಧ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಇರುವ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿದ್ದ ಸಮುದಾಯಗಳ ಹೆಸರುಗಳು ಯಾವುವು ; (ಈ ಸಮುದಾಯಗಳ ಹೆಸರುಗಳ ಪಟ್ಟಿ ನೀಡುವುದು)

(ಆ) ಕರ್ನಾಟಕದಲ್ಲಿ ಭಾಷಾವಾರು ಪ್ರಾಂತ್ಯಗಳ ಏಕೀಕರಣವಾಗಿ ಮೈಸೂರು ರಾಜ್ಯವಾದಾಗ ರಚಿಸಿದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿದ ಸಮುದಾಯಗಳ ಹೆಸರುಗಳು ಯಾವುವು ; ಪ್ರಸ್ತುತ, ಕರ್ನಾಟಕದ ವಿವಿಧ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಇರುವ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿರುವ ಸಮುದಾಯಗಳು ಯಾವುವು ;

(ಇ) ಭಾರತ ದೇಶದ ೧೯೫೦ರ ಜನಗಣತಿ ಮತ್ತು ಮದ್ರಾಸು ರಾಜ್ಯ ಅಸ್ತಿತ್ವದಲ್ಲಿರುವಾಗ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿದ ಕುಡುಬಿ ಜನಾಂಗ ಕರ್ನಾಟಕದಲ್ಲಿ ಭಾಷಾವಾರು ಪ್ರಾಂತ್ಯಗಳ ಏಕೀಕರಣವಾಗಿ ಮೈಸೂರು ರಾಜ್ಯವಾದಾಗ ರಚಿಸಿದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿಲ್ಲದಿರಲು ಕಾರಣವೇನು ;

(ಈ) ಕುಡುಬಿ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವ ಬಗ್ಗೆ ಶಿಫಾರಸ್ಸು ಮಾಡಿದ ಈ ಸಮುದಾಯದ ಬಗ್ಗೆ ಪ್ರೋ:ಟಿ.ಟಿ. ಬಸವನ ಗೌಡ (ಕವಿವಿ)ರವರು ೨೦೦೮ರಲ್ಲಿ ಕರ್ನಾಟಕ ಸರ್ಕಾರಕ್ಕೆ ಸಲ್ಲಿಸಿದ ಕುಲಶಾಸ್ತ್ರೀಯ ಸಂಶೋಧನಾ ವರದಿಯ ಆಧಾರದಲ್ಲಿ ಸರ್ಕಾರ ಏನು ಕ್ರಮವಹಿಸಿದೆ ;

(ಉ) ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಧೀನ ಕಾರ್ಯದರ್ಶಿಯವರು ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಸಲ್ಲಿಸಿದ ದಿನಾಂಕ:೦೪.೧೨.೨೦೨೪ರ ಇಒಸಂಖ್ಯೆ:೮೧೬೬೪ ಪತ್ರದ ವಿಷಯಕ್ಕೆ ಸಂಬಂಧಿಸಿದಂತೆ ಮತ್ತು ದಿನಾಂಕ:೦೫.೧೧.೨೦೨೪ರಂದು ಮಂಗಳೂರಿನಲ್ಲಿ ಭಾರತ ಸಂವಿಧಾನದ ಪರಿಚ್ಛೇಧ ೩೪೨ ರಂತೆ ಕ್ರಮವಹಿಸಲು ನಡೆದ ಕುಡುಬಿ ಸಮುದಾಯದ ಹಕ್ಕೋತ್ತಾಯದ ಮೂಲಕ ಜಿಲ್ಲಾಧಿಕಾರಿಗೆ ನೀಡಿದ ಮನವಿಯ ಕುರಿತಂತೆ ಕೈಗೊಂಡ ಕ್ರಮವೇನು ?

# ರಾಜ್ಯದಲ್ಲಿ ಯೋಜನಾ ಅನುದಾನ ಮತ್ತು ಕಾರ್ಯಕ್ರಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೭ (೯೮೮) ಮಾನ್ಯ ಯೋಜನೆ, ಕಾರ್ಯಾಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯೋಜನಾ ಅನುದಾನವನ್ನು ವಿವಿಧ ಕಾರ್ಯಕ್ರಮಗಳಿಗೆ ಹೇಗೆ ನಿಗಧಿ ಪಡಿಸಲಾಗುತ್ತಿದೆ ; ರಾಜ್ಯ ಆಯವ್ಯಯದಲ್ಲಿ ವಿವಿಧ ಕಾರ್ಯಕ್ರಮಗಳಿಗೆ ನೀಡಲ್ಪಡುವ ಅನುದಾನ ವಿವಿಧ ಜಿಲ್ಲೆಗಳೊಳಗೆ ಹೇಗೆ ಹಂಚಿಕೆಯಾಗುತ್ತಿದೆ ; (ವಿವರ ನೀಡುವುದು)

(ಆ) ರಾಜ್ಯದ ವಿವಿಧ ಅಭಿವೃದ್ಧಿ ಪ್ರಾಧಿಕಾರ/ಮಂಡಳಿಗಳಿಗೆ ವಾರ್ಷಿಕವಾಗಿ ನಿಗಧಿಪಡಿಸಿರುವ ಅನುದಾನ ಎಷ್ಟು ; ಈಗಾಗಲೇ ನೀಡಲಾಗಿರುವ ಅನುದಾನ ಪೂರ್ಣ ಪ್ರಮಾಣದಲ್ಲಿ ಬಳಕೆಯಾಗಿದೆಯೇ ; (ಮಂಡಳಿ/ಪ್ರಾಧಿಕಾರವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ೪೩ ಇಲಾಖೆಗಳಲ್ಲಿ ೧೮೦೨ ಕಾರ್ಯಕ್ರಮಗಳಿದ್ದು ಅವುಗಳಿಗೆ ವಾರ್ಷಿಕವಾಗಿ ಬಿಡುಗಡೆಯಾಗುವ ಅನುದಾನ ಎಷ್ಟು ; ಎಲ್ಲಾ ಕಾರ್ಯಕ್ರಮಗಳಿಗೂ ಅನುದಾನ ಬಿಡುಗಡೆಯಾಗುತ್ತಿದೆಯೇ ; ಅನುದಾನ ಬಿಡುಗಡೆಯಾಗದ ಕಾರ್ಯಕ್ರಮಗಳನ್ನು ನಿಲ್ಲಿಸಲು ಅಥವಾ ಸಂಬಂಧಿತ ಇತರ ಕಾರ್ಯಕ್ರಮಗಳೊಳಗೆ ಒಟ್ಟುಗೂಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ವಿವಿಧ ಇಲಾಖಾ ಅನುದಾನಗಳ ಮತ್ತು ಯೋಜನೆಗಳ ಅನುದಾನದ ಕ್ರಿಯಾ ಯೋಜನೆ ಮಾಡುವಾಗ ಶಾಸಕರ ಅಹವಾಲು, ಬೇಡಿಕೆಗಳನ್ನು ಪರಿಗಣಿಸಲಾಗುತ್ತಿದೆಯೇ ; ಈ ಕುರಿತು ಶಾಸಕರ ಪತ್ರಗಳಿಗೆ ಆಯಾಯ ಇಲಾಖೆಗಳು ಮತ್ತು ಸರ್ಕಾರ ಸ್ಪಂದಿಸಿದೆಯೇ ;

(ಉ) ರಾಜ್ಯದ ವಿವಿಧ ಅಭಿವೃದ್ಧಿ ಪ್ರಾಧಿಕಾರ/ಮಂಡಳಿಗಳ ಮೂಲಕ ಸರ್ಕಾರಕ್ಕೆ ಸಲ್ಲಿಸಿದ ಪ್ರಸ್ತಾವನೆಗಳಿಗೆ ಪೂರ್ಣ ಪ್ರಮಾಣದಲ್ಲಿ ಅನುಮೋದನೆ ನೀಡಲಾಗಿದೆಯೇ ; ಹಾಗೆಯೇ, ಅಭಿವೃದ್ಧಿ ಪ್ರಾಧಿಕಾರ/ಮಂಡಳಿಗಳು ಸಲ್ಲಿಸಿದ ಬದಲಾವಣೆ ಪ್ರಸ್ತಾವನೆಗಳನ್ನು ಅನುಮೋದಿಸಲಾಗಿದೆಯೇ ; ಈ ಕುರಿತಂತೆ ಹಿಂಬರಹ ನೀಡಲಾಗಿದೆಯೇ ?

## 'ಯುವನಿಧಿ' ಗ್ಯಾರಂಟಿ ಯೋಜನೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೮ (೯೮೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಗ್ಯಾರಂಟಿ ಯೋಜನೆಯಡಿಯಲ್ಲಿ ಇರುವ ಫಲಾನಿಭವಿಗಳ ಸಂಖ್ಯೆ ಎಷ್ಟು;

(ಆ) ಇವರಿಗೆ ಉದ್ಯೋಗಾವಕಾಶ ಒದಗಿಸಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ;

(ಇ) ನಿರುದ್ಯೋಗಿ ಯುವಕರ ಕೌಶಲ್ಯಾಭಿವೃದ್ಧಿಗೆ ಹಾಕಿಕೊಂಡಿರುವ ಕಾರ್ಯಕ್ರಮಗಳೇನು ;

(ಈ) ಉದ್ಯೋಗಾವಕಾಶ ಒದಗಿಸಲು ಹಾಗೂ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳಿಗೆ ಅನುದಾನ ಒದಗಿಸಲಾಗಿದೆಯೇ ?

## ಹೆಜ್ಜಾಲ–ಚಾಮರಾಜನಗರ ರೈಲು ಮಾರ್ಗದ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೯ (೯೮೨) ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಜ್ಜಾಲ–ಚಾಮರಾಜನಗರ ರೈಲು ಮಾರ್ಗದ ಯೋಜನೆ ಬಾಕಿ ಉಳಿಯಲು ಕಾರಣಗಳೇನು ;

(ಆ) ಈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕೇಂದ್ರ ಸರ್ಕಾರದ ಮನವೊಲಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆಯೇ ; ಯೋಜನೆ ಅನುಷ್ಠಾನಕ್ಕೆ ಕೈಗೊಂಡ ಕ್ರಮಗಳೇನು ;

(ಈ) ಕಾಲಮಿತಿಯೊಳಗೆ ಯೋಜನೆಯನ್ನು ಕೈಗೆತ್ತಿಕೊಳ್ಳುವ ಉದ್ದೇಶದ ಬಗ್ಗೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲಾಗುವುದೇ ?

## ಶುಂಠಿ ಬೆಳೆಗೆ ಬೆಂಬಲ ಬೆಲೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೦ (೯೮೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ – ತಮಿಳುನಾಡು ಮತ್ತು ಕೇರಳ ರಾಜ್ಯಗಳ ಗಡಿ ಚಾಮರಾಜನಗರ ಜಿಲ್ಲೆಯಲ್ಲಿ ಶುಂಠಿ ಬೆಳೆ ಕೃಷಿಯು ಪ್ರಧಾನ ವಾಣಿಜ್ಯ ಬೆಳೆಯಾಗಿದ್ದು, ಶುಂಠಿ ಬೆಲೆ ಕುಸಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಲೆ ಕುಸಿತ ಹಿನ್ನಲೆಯಲ್ಲಿ ಸರ್ಕಾರ ಶುಂಠಿ ಬೆಳೆಗೆ ಬೆಂಬಲ ಬೆಲೆ ನಿಗಧಿಪಡಿಸಲು ಕ್ರಮಕೈಗೊಳ್ಳುವುದೇ ;

(ಇ) ಬೆಲೆ ಕುಸಿತ ಪರಿಣಾಮ ಶುಂಠಿ ಖರೀದಿ ಕೇಂದ್ರ ತೆರೆಯಬೇಕೆನ್ನುವ ರೈತರ ಮನವಿಗೆ ಸರ್ಕಾರ ಸ್ಪಂದಿಸುವುದೇ ?

## ಮಹಿಳೆಯರ ಅಭಿವೃದ್ಧಿಗೆ ಕಾರ್ಯಕ್ರಮಗಳು

**ಡಾ: ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೧ (೧೦೦೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳೆಯರು ಸ್ವಯಂ ಉದ್ಯೋಗ ಮಾಡಲು ಸಹಾಯ ಮಾಡುವುದಕ್ಕೆ ಇಲಾಖೆಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ; ಯಾವ ರೀತಿಯ ಆರ್ಥಿಕ ಸಹಾಯ ಮಾಡಲಾಗುತ್ತಿದೆ ; (ವಿವರ ಒದಗಿಸುವುದು)

(ಆ) ಮಹಿಳಾ ಸಬಲೀಕರಣಕ್ಕಾಗಿ ಯಾವ ಯಾವ ಯೋಜನೆಗಳಿವೆ ; ಈ ಯೋಜನೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಜನರಿಗೆ ಸಹಾಯ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಶಿಶು ಅಭಿವೃದ್ಧಿಗಾಗಿ ಇರುವ ಯೋಜನೆ ಯಾವುದು ; (ಸಂಪೂರ್ಣ ವಿವರ ನೀಡುವುದು)

(ಈ) ವಿಧವೆಯರಿಗೆ ಮಾಸಾಶನ ನೀಡುವ ಯೋಜನೆ ಇದೆಯೇ ; ನೀಡುತ್ತಿದ್ದರೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನರಿಗೆ ನೀಡಲಾಗಿದೆ ; ವಿಧವೆಯರಿಗೆ ಸಹಾಯ ಮಾಡಲು ಬೇರೆ ವಿಶೇಷ ಯೋಜನೆ ಏನಾದರು ಇದೆಯೇ ?

## ಕಾರ್ಮಿಕ ಕಲ್ಯಾಣಕ್ಕಾಗಿ ಯೋಜನೆಗಳು

**ಡಾ|| ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೨ (೧೦೦೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆಗಳು ಜಾರಿಯಾಗಿವೆ ; (ವಿವರ ನೀಡುವುದು)

(ಆ) ಕಟ್ಟಡ ಕಾರ್ಮಿಕರಿಗಾಗಿ ವಿಶೇಷ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಕಾರ್ಮಿಕರಿಗೆ ವೈದ್ಯಕೀಯ ಸೌಲಭ್ಯ ನೀಡಲು ವಿಮೆ ಸೌಲಭ್ಯವಿದೆಯೇ ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಜನರಿಗೆ ಈ ಸೌಲಭ್ಯ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಹಾಕಿಕೊಂಡಿರುವ ಕಾರ್ಯಕ್ರಮಗಳಾವುವು ; ಅಸಂಘಟಿತ ಕಾರ್ಮಿಕರಿಗೆ ಸಹಾಯ ಮಾಡಲು ಯಾವ ಯೋಜನೆಗಳಿವೆ ? (ವಿವರ ನೀಡುವುದು)

## ಹಿಂದುಳಿದ ವರ್ಗಗಳಿಗಾಗಿ ಯೋಜನೆಗಳು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೩ (೧೦೦೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಇಲಾಖೆಯಲ್ಲಿ ಹಾಕಿಕೊಂಡಿರುವ ಕಾರ್ಯಕ್ರಮಗಳಾವುವು ; (ವಿವರ ನೀಡುವುದು)

(ಆ) ಸ್ವಯಂ ಉದ್ಯೋಗಕ್ಕಾಗಿ ಸಾಲ ನೀಡುವಲ್ಲಿ ಇರುವ ಯೋಜನೆಗಳಾವುವು ;

(ಇ) ಸ್ವಯಂ ಉದ್ಯೋಗಕ್ಕಾಗಿ ಎಷ್ಟು ಫಲಾನುಭವಿಗಳಿಗೆ ಯಾವ ಯಾವ ವರ್ಗಗಳಲ್ಲಿ ಸಾಲ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಮಹಿಳೆಯರಿಗಾಗಿ ಪ್ರತ್ಯೇಕವಾದ ವಿಶೇಷ ಯೋಜನೆಗಳಿವೆಯೇ ? (ವಿವರ ನೀಡುವುದು)

## ನಶಿಸಿ ಹೋಗುತ್ತಿರುವ ಜಾನಪದ ಕಲೆಗೆ ಪ್ರೋತ್ಸಾಹ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೪ (೧೦೦೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಾನಪದ ಕಲೆ ಮತ್ತು ಸಂಸ್ಕೃತಿ ನಶಿಸಿಹೋಗುವ ಹಂತ ತಲುಪಿದ್ದು ಇದನ್ನು ಉಳಿಸಿ ಬೆಳೆಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಗ್ರಾಮೀಣ ಪ್ರದೇಶದಲ್ಲಿ ಹಾಡುವ ಜಾನಪದ ಹಾಡುಗಳಲ್ಲಿ ಜೀವನದ ಮೌಲ್ಯಗಳನ್ನು ತಿಳಿಸುವ ಅಂಶಗಳಿದ್ದು, ಇದನ್ನು ಹೆಚ್ಚು ಪ್ರಚಾರ ಮಾಡಲು ಸರ್ಕಾರ ಯಾವ ರೀತಿಯ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಿದೆ ;

(ಇ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ತಿಂಗಳಿಗೊಂದು ಸಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಎರಡು ತಿಂಗಳಿಗೊಮ್ಮೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಕಾರ್ಯಕ್ರಮ ಹಾಕಿಕೊಳ್ಳಲಾಗುವುದೇ ?

## ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಬರುವ ವಸತಿ ನಿಲಯಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೫ (೮೮೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಪ್ರಸಕ್ತ ಶೈಕ್ಷಣಿಕ ಸಾಲಿಗೆ ಈ ಹಾಸ್ಟೆಲ್‌ಗಳಲ್ಲಿ ಪ್ರವೇಶ ಕೋರಿ ಅರ್ಜಿ ಸಲ್ಲಿಸಿದ್ದ/ಪ್ರವೇಶ ಕಲ್ಪಿಸಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ವಸತಿ ನಿಲಯಗಳಲ್ಲಿರುವ ಮಂಜೂರಾತಿ ವಿದ್ಯಾರ್ಥಿಗಳ ಸಾಮಾರ್ಥ್ಯ ಎಷ್ಟು ; ಹಾಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಹಾಸ್ಟೆಲ್‌ಗಳಲ್ಲಿ ಪ್ರವೇಶ ಮಿತಿಗಿಂತ ಅಧಿಕ ವಿದ್ಯಾರ್ಥಿಗಳು ವಾಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ವಿಚಾರದಲ್ಲಿ ಹೈಕೋರ್ಟ್ ವ್ಯಕ್ತಪಡಿಸಿರುವ ಅಭಿಪ್ರಾಯ ಹಾಗೂ ನೀಡಿರುವ ಸೂಚನೆ ಏನು ;

(ಈ) ನ್ಯಾಯಾಲಯದ ಸೂಚನೆ ನಂತರ ಸರ್ಕಾರ ಕೈಗೊಂಡಿರುವ ಪರಿಹಾರ ಕ್ರಮಗಳೇನು ; ಹೊಸದಾಗಿ ಎಷ್ಟು ಹಾಸ್ಟೆಲ್‌ಗಳ ನಿರ್ಮಾಣಕ್ಕೆ ಕ್ರಮ ಕೈಗೊಂಡಿದೆ ; ಇದಕ್ಕಾಗಿ ಮಂಜೂರು ಮಾಡಿರುವ ಹಣ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರಿಗೆ ಚಿಕಿತ್ಸಾ ಸೇವೆಯನ್ನು ನೀಡುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೬ (೯೫೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರಿಗೆ ವಿರಳ ಮತ್ತು ದುಬಾರಿ ವೆಚ್ಚದ ಚಿಕಿತ್ಸಾ ಸೇವೆಗಳನ್ನು ಒದಗಿಸಲು ೩೫ ಕೋಟಿ ರೂ.ಗಳ Corpus Fund ಅನ್ನು ಸ್ಥಾಪಿಸಲಾಗುವುದು ಎಂದು ಈ ಹಿಂದೆ ಆಯವ್ಯಯದಲ್ಲಿ ಘೋಷಿಸಿದ್ದು, ಈ ಕಾರ್ಯ ಪೂರ್ಣಗೊಂಡಿದೆಯೇ ;

(ಆ) ಇದ್ದಲ್ಲಿ, ಎಷ್ಟು ರೋಗಿಗಳು ಈ ಯೋಜನೆಯ ಲಾಭವನ್ನು ಪಡೆಯಲು ಅರ್ಜಿಯನ್ನು ಸಲ್ಲಿಸಿದ್ದಾರೆ ಮತ್ತು ಎಷ್ಟು ಫಲಾನುಭವಿಗಳು ಈ ಯೋಜನೆಯ ಲಾಭ ಪಡೆದಿದ್ದಾರೆ ;

(ಇ) ಸದರಿ Corpus Fund ನಲ್ಲಿ ಹಣ ಬಾಕಿ ಉಳಿದಿದೆಯೇ ; ಈ ಯೋಜನೆ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ವಿವಿಧ ಯೋಜನೆ ಕೈಗೊಳ್ಳುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೭ (೯೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಭಾಗದ ರಸ್ತೆ ಸಂಪರ್ಕ ಜಾಲವನ್ನು ವ್ಯವಸ್ಥಿತವಾಗಿ ಮತ್ತು ಗುಣಾತ್ಮಕವಾಗಿ ಅಭಿವೃದ್ಧಿಪಡಿಸಲು "ಪ್ರಗತಿ ಪಥ" ಯೋಜನೆಯನ್ನು ಪ್ರಾರಂಭಿಸಿ ಈ ಯೋಜನೆ ಅಡಿಯಲ್ಲಿ ೧೮೯ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ತಲಾ ೫೦ ಕಿ.ಮೀ ಉದ್ದದ ರಸ್ತೆಗಳಂತೆ, ಒಟ್ಟಾರೆಯಾಗಿ ೯,೪೫೦ ಕಿ.ಮೀ. ಉದ್ದದ ರಸ್ತೆ ಸಂಪರ್ಕ ಜಾಲವನ್ನು ೫,೨೦೦ ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು ಎಂದು ಈ ಹಿಂದೆ ಆಯವ್ಯಯದಲ್ಲಿ ಘೋಷಿಸಿದ್ದು, ಸದರಿ ಯೋಜನೆಗೆ ಚಾಲನೆ ನೀಡಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ರಸ್ತೆ ಕಾಮಗಾರಿಗಾಗಿ ಟೆಂಡರ್ ಕರೆಯಲಾಗಿದೆ ; ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ ; (ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ಹೆಸರು ಮತ್ತು ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ರಸ್ತೆ ಕಾಮಗಾರಿಗಳು ಪ್ರಾರಂಭಗೊಂಡಿವೆ ಮತ್ತು ಎಷ್ಟು ಕಾಮಗಾರಿಗಳು ಬಾಕಿ ಉಳಿದಿವೆ ; ಇವುಗಳನ್ನು ಯಾವಾಗ ಪ್ರಾರಂಭಗೊಳಿಸಿ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಆಹಾರ ಪಾರ್ಕ್‌ಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೮ (೯೫೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ರಫ್ತನ್ನು ಉತ್ತೇಜಿಸಲು ರಾಜ್ಯದಲ್ಲಿರುವ ವಿಮಾನ ನಿಲ್ದಾಣಗಳ ಹತ್ತಿರದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಆಹಾರ ಪಾರ್ಕ್‌ಗಳನ್ನು ಹಾಗೂ ಪ್ರಸಕ್ತ ಸಾಲಿನಲ್ಲಿ ಶಿವಮೊಗ್ಗದ ಸೋಗಾನೆ, ವಿಜಯಪುರದ ಇಟ್ಟಂಗಿಹಾಳ ಮತ್ತು ಬೆಂಗಳೂರು ಗ್ರಾಮಾಂತರದ ಪೂಜೇನಹಳ್ಳಿಯಲ್ಲಿ ಸ್ಥಾಪಿಸಲಾಗುವುದು ಎಂದು ಆಯವ್ಯಯದಲ್ಲಿ ಘೋಷಿಸಿದ್ದು, ಸದರಿ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ; ಈ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದೆಯೇ ; ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ ;

(ಇ) ಈ ಯೋಜನೆಯನ್ನು ಪೂರ್ಣಗೊಳಿಸಲು ಮೀಸಲಿಟ್ಟಿರುವ ಅನುದಾನ ಎಷ್ಟು; ಸರ್ಕಾರದ ವತಿಯಿಂದ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಯಾವಾಗ ? (ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆಯಲ್ಲಿ ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೯ (೯೫೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅತೀ ವೇಗವಾಗಿ ಬೆಳೆಯುತ್ತಿರುವ ಬೆಳಗಾವಿ ಜಿಲ್ಲೆಯು ಶೈಕ್ಷಣಿಕ ರಂಗದಲ್ಲಿ ಮುಂಚೂಣಿಯಲ್ಲಿರುವ ಮೂರು

ವಿಶ್ವವಿದ್ಯಾಲಯ, ಮೆಡಿಕಲ್ ಕಾಲೇಜು, ಪ್ಯಾರಾ ಮೆಡಿಕಲ್, ನರ್ಸಿಂಗ್ ಮೊದಲಾಗಿ ಹಲವಾರು ಶಿಕ್ಷಣ ಸಂಸ್ಥೆಗಳಿರುವ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯಷ್ಟೇ ಅಲ್ಲದೇ ಹೊರ ಜಿಲ್ಲೆಗಳಿಂದಲೂ ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ಬೆಳಗಾವಿಗೆ ಬರುತ್ತಿದ್ದು, ೬೦ ಲಕ್ಷಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ಈ ಜಿಲ್ಲೆಯಲ್ಲಿ ಪ್ರತಿ ವರ್ಷ ಬೇಡಿಕೆಗೆ ತಕ್ಕಷ್ಟು ವಿದ್ಯಾರ್ಥಿ ವಸತಿ ನಿಲಯಗಳು ಇಲ್ಲದ ಕಾರಣ ಹಿಂದುಳಿದ ವರ್ಗಗಳ ಸಾವಿರಾರು ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯಗಳು ಇಲ್ಲದೇ ಶಿಕ್ಷಣಕ್ಕೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರತಿ ವರ್ಷ ಸಾವಿರಾರು ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸುತ್ತಿದ್ದು, ಇದರಲ್ಲಿ ಕೇವಲ ಶೇ.೨೫ ರಷ್ಟು ಮಾತ್ರ ಪ್ರವೇಶ ದೊರಕುತ್ತಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಜಿಲ್ಲೆಯಲ್ಲಿ ಸರ್ಕಾರಿ ವಿದ್ಯಾರ್ಥಿನಿಲಯಗಳಿಗೆ ಹೆಚ್ಚು ಬೇಡಿಕೆ ಇರುವುದರಿಂದ ಹೊಸದಾಗಿ ವಿದ್ಯಾರ್ಥಿನಿಲಯಗಳನ್ನು ನಿರ್ಮಿಸಲು ಸರ್ಕಾರ ಯೋಜಿಸಿದೆಯೇ ;

(ಈ) ಯಾವಾಗ ಈ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ಮತ್ತು ಪ್ರಸಕ್ತ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿನಿಲಯಗಳನ್ನು ನಿರ್ಮಿಸಲಾಗುವುದು ? (ಮಾಹಿತಿ ನೀಡುವುದು)

## ಅಂಗನವಾಡಿಗಳಿಗೆ ಸ್ವಂತ ಕಟ್ಟಡ ನಿರ್ಮಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೦ (೯೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ೧,೦೦೦ ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು ೨೦೦ ಕೋಟಿ

ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದು ಆಯವ್ಯಯದಲ್ಲಿ ಘೋಷಿಸಿದ್ದು, ಸದರಿ ಕಾರ್ಯವು ಪ್ರಾರಂಭಗೊಂಡಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಾರಂಭಗೊಂಡಿದೆ ; ಎಷ್ಟು ಜಿಲ್ಲೆಗಳಲ್ಲಿ ಕಾಮಗಾರಿ ಬಾಕಿ ಉಳಿದಿದೆ ; ವಿಳಂಬಕ್ಕೆ ಕಾರಣಗಳೇನು ;

(ಇ) ಸದರಿ ಕಾಮಗಾರಿಗಳಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ ; ಇಲ್ಲಿಯವರೆಗೆ ಎಷ್ಟು ಮೊತ್ತ ಖರ್ಚು ಮಾಡಲಾಗಿದೆ ;

(ಈ) ಸ್ವಂತ ಕಟ್ಟಡವಿರುವ ಅಂಗನವಾಡಿಗಳ ಕಟ್ಟಡಗಳು ಶಿಥಲಾವಸ್ಥೆಗೆ ತಲುಪಿದ್ದು, ಇವುಗಳ ದುರಸ್ತಿಗಾಗಿ ಸರ್ಕಾರ ಯೋಜಿಸಿದೆಯೇ ; ಇದ್ದಲ್ಲಿ, ದುರಸ್ತಿ ಕಾಮಗಾರಿಗಳನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ?

## ಮರಣ ಹೊಂದಿದ ಕಾರ್ಮಿಕರ ಅವಲಂಬಿತರಿಗೆ ಸಿಗುತ್ತಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೧ (೮೯೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮರಣ ಹೊಂದಿದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಪತ್ನಿ ಹಾಗೂ ಅವಲಂಬಿತ ಮಕ್ಕಳಿಗೆ ಸಿಗುತ್ತಿರುವ ಸೌಲಭ್ಯಗಳಾವುವು ; (ವಿವರ ನೀಡುವುದು)

(ಆ) ಮರಣ ಹೊಂದಿದ ಕಾರ್ಮಿಕರ ಪತ್ನಿಯರಿಗೆ ವಿಧವಾ ವೇತನ ಹಾಗೂ ಮರಣವಾದ ಕಾರ್ಮಿಕರ ಅವಲಂಬಿತ ಮಕ್ಕಳಿಗೆ ವಿದ್ಯಾರ್ಥಿ ವೇತನಗಳು ಲಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಮರಣ ಹೊಂದಿದ ಕಾರ್ಮಿಕರ ಪತ್ನಿಯರಿಗೆ ವಿಧವಾ ವೇತನ ಹಾಗೂ ಮರಣವಾದ ಕಾರ್ಮಿಕರ ಅವಲಂಬಿತ ಮಕ್ಕಳಿಗೆ ವಿದ್ಯಾರ್ಥಿ ವೇತನಗಳನ್ನು ನೀಡಲು ಸರ್ಕಾರ ಇದುವರೆಗೆ ಕ್ರಮ ವಹಿಸದಿರಲು ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಮರಣ ಹೊಂದಿದ ಕಾರ್ಮಿಕರ ಪತ್ನಿಯರಿಗೆ ವಿಧವಾ ವೇತನ ಹಾಗೂ ಮರಣವಾದ ಕಾರ್ಮಿಕರ ಅವಲಂಬಿತ ಮಕ್ಕಳಿಗೆ ವಿದ್ಯಾರ್ಥಿ ವೇತನಗಳನ್ನು ನೀಡಲಾಗುವುದು?

## 'ರಾಣೆಯಾರ್' ಸಮುದಾಯಕ್ಕೆ ಪರಿಶಿಷ್ಟ ಜಾತಿ ನಿಗಮದಿಂದ ಸೌಲಭ್ಯಗಳನ್ನು ನೀಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೨ (೮೯೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನೇಕ ವರ್ಷಗಳಿಂದ "ರಾಣೆಯಾರ್" ಸಮುದಾಯವು ಪರಿಶಿಷ್ಟ ಜಾತಿ ಮೀಸಲಾತಿ ನಿಯಮದಡಿ ಸೌಲಭ್ಯಗಳನ್ನು ಪಡೆದುಕೊಂಡಿದ್ದು, ಕಳೆದ ೩–೪ ವರ್ಷಗಳಿಂದ "ಅಂಬೇಡ್ಕರ್ ಅಭಿವೃದ್ಧಿ ನಿಗಮ" ದಲ್ಲಿ "ರಾಣೆಯಾರ್" ಸಮುದಾಯ ದಾಖಲಾಗಿದ್ದನ್ನು ತೆಗೆದು ಹಾಕಲಾಗಿರುವುದರಿಂದ ಈ ಸಮುದಾಯಕ್ಕೆ ಯಾವುದೇ ನಿಗಮದಿಂದಲೂ ಸೌಲಭ್ಯಗಳು ದೊರೆಯದೆ ಸಮುದಾಯ ಅತ್ಯಂತ ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕೂಲಿ ಕಾರ್ಮಿಕರಾಗಿ ದುಡಿದು, ಅತ್ಯಂತ ಬಡತನದಲ್ಲಿಯೇ ಜೀವನ ಸಾಗಿಸುತ್ತಿರುವ "ರಾಣೆಯಾರ್" ಸಮುದಾಯವನ್ನು ಪರಿಶಿಷ್ಟ ಜಾತಿ/ಪಂಗಡದ ಹೆಚ್ಚು

ಸೌಲಭ್ಯಗಳಿರುವ ಸರ್ಕಾರದ ನಿಗಮದಲ್ಲಿ ಮರುಸೇರ್ಪಡೆಗೊಳಿಸಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ ;

(ಇ) ಯಾವ ಕಾಲಮಿತಿಯೊಳಗೆ "ರಾಣೆಯಾರ್" ಸಮುದಾಯವನ್ನು ಪರಿಶಿಷ್ಟ ಜಾತಿ/ಪಂಗಡದ ಹೆಚ್ಚು ಸೌಲಭ್ಯಗಳಿರುವ ಸರ್ಕಾರದ ನಿಗಮದಲ್ಲಿ ಮರುಸೇರ್ಪಡೆಗೊಳಿಸಲಾಗುವುದು ?

## ಕಾರ್ಮಿಕರಿಗೆ ಕೆಲಸದ ಸಾಮಗ್ರಿಗಳನ್ನು ವಿತರಿಸುವ ಯೋಜನೆ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೩ (೮೯೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಕೆಲಸದ ಸಾಮಗ್ರಿಗಳನ್ನು ವಿತರಿಸುವ ಯೋಜನೆ ಜಾರಿಯಲ್ಲಿದೆಯೇ ; (ಇದ್ದಲ್ಲಿ, ಅದರ ವಿವರಗಳನ್ನು ಒದಗಿಸುವುದು)

(ಆ) ಸದರಿ ಯೋಜನೆಯಲ್ಲಿ ವಿತರಿಸಲಾಗುತ್ತಿರುವ ಸಾಮಗ್ರಿಗಳು ಕಳಪೆ ಮಟ್ಟದ್ದಾಗಿವೆ ಎಂಬ ಆರೋಪಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಇದುವರೆಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಇ) ಪ್ರಸ್ತುತ ವಿತರಿಸಲಾಗುತ್ತಿರುವ ಸಾಮಗ್ರಿಗಳು ಕಳಪೆ ಮಟ್ಟದ್ದಾಗಿವೆ ಎಂಬ ಆರೋಪಗಳು ಕೇಳಿ ಬರುತ್ತಿರುವ ಹಿನ್ನೆಲೆಯಲ್ಲಿ ಸದರಿ ಕೆಲಸದ ಸಾಮಗ್ರಿಗಳನ್ನು "ಈ ವೋಚರ್ ವ್ಯವಸ್ಥೆ"ಯಡಿ ಯಾವುದೇ ಅಂಗಡಿಯಲ್ಲಿ ಖರೀದಿ ಮಾಡುವ ಅವಕಾಶವನ್ನು ಕಲ್ಪಿಸಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ ?

## ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೪ (೯೦೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಎಷ್ಟು ಹಾಸ್ಟೆಲ್‌ಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ ;

(ಆ) ಸದರಿ ಹಾಸ್ಟೆಲ್‌ಗಳಿಗೆ ಮಂಜೂರಾಗಿರುವ, ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ವಿವಿಧ ಹುದ್ದೆಗಳು ಯಾವುವು ; (ವಿವರ ನೀಡುವುದು)

(ಇ) ಸದರಿ ಹಾಸ್ಟೆಲ್‌ಗಳಲ್ಲಿ ಸಾಕಷ್ಟು ಹುದ್ದೆಗಳು ದೀರ್ಘಕಾಲದಿಂದ ಖಾಲಿ ಇರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಹಾಸ್ಟೆಲ್‌ಗಳ ಕಾರ್ಯನಿರ್ವಹಣೆ ಸುಗಮವಾಗಿ ಸಾಗಲು ಸಕಾಲದಲ್ಲಿ ಸಿಬ್ಬಂದಿಯನ್ನು ನೇಮಿಸಲು ಸರ್ಕಾರ ಕ್ರಮ ವಹಿಸದಿರಲು ಕಾರಣಗಳೇನು ;

(ಉ) ಯಾವ ಕಾಲಮಿತಿಯೊಳಗೆ ಸದರಿ ಎಲ್ಲಾ ಹಾಸ್ಟೆಲ್‌ಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸಲಾಗುವುದು ?

## ಕೃಷಿ ವಿದ್ಯುತ್ ಪಂಪ್‌ಸೆಟ್ ಯೋಜನೆ ಪರಾಮರ್ಶೆ ಮಾಡುತ್ತಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೫ (೯೨೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಕೃಷಿ ವಿದ್ಯುತ್ ಪಂಪ್‌ಸೆಟ್ ಸಬ್ಸಿಡಿ ಫಲಾನುಭವಿಗಳಿದ್ದಾರೆ ; ವರ್ಷದಿಂದ ವರ್ಷಕ್ಕೆ ಎಷ್ಟು ವಿದ್ಯುತ್ ಸಂಪರ್ಕಗಳ ಸಂಖ್ಯೆ ಏರಿಕೆಯಾಗುತ್ತಿದೆ ; ಸದರಿ ಯೋಜನೆಗೆ ವರ್ಷಕ್ಕೆ ಎಷ್ಟು ಮೊತ್ತ ವ್ಯಯವಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೃಷಿ ವಿದ್ಯುತ್ ಪಂಪ್‌ಸೆಟ್ ಸಬ್ಸಿಡಿ ಯೋಜನೆಯನ್ನು ಅರ್ಹರಲ್ಲದವರು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸಬ್ಸಿಡಿ ಪಡೆಯಲು ಇರುವ ಮಾನದಂಡಗಳೇನು ;

(ಇ) ಹಾಗಿದ್ದಲ್ಲಿ, ಕೃಷಿ ವಿದ್ಯುತ್ ಪಂಪ್‌ಸೆಟ್ ಸಬ್ಸಿಡಿಯನ್ನು ಪರಾಮರ್ಶೆ ಮಾಡುವ ಉದ್ದೇಶ ಇದೆಯೇ ; ಪರಾಮರ್ಶೆ ಮಾಡಲು ಕಾರಣಗಳೇನು ; ಪರಾಮರ್ಶೆ ನೆಪದಲ್ಲಿ ಅರ್ಹ ಫಲಾನುಭವಿಗಳನ್ನು ಕೈಬಿಡದಂತೆ ಜಾಗ್ರತೆ ವಹಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಪರಾಮರ್ಶೆ ಕಾರ್ಯ ಯಾವ ಹಂತದಲ್ಲಿದೆ ; ಅನುಸರಿಸುವ ಮಾನದಂಡಗಳೇನು ; ಇದರಿಂದ ಎಷ್ಟು ಮೊತ್ತ ಉಳಿತಾಯವಾಗಲಿದೆ ?

## ರೈತ ವಿದ್ಯಾನಿಧಿ ಯೋಜನೆಯಲ್ಲಿನ ಬದಲಾವಣೆಯಿಂದ ತೊಂದರೆ ಆಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೬ (೯೨೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಯೋಜನೆ ಜಾರಿಗೆ ಬಂದಿದ್ದು ಯಾವಾಗ ;

(ಆ) ಯೋಜನೆ ಜಾರಿಯಾದಾಗಿನಿಂದ ಇದುವರೆಗೂ ಎಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗಿದೆ ; (ವರ್ಷವಾರು ಜಿಲ್ಲಾವಾರು ಫಲಾನುಭವಿಗಳ ಸಂಖ್ಯೆಗಳ ವಿವರ ಒದಗಿಸುವುದು)

(ಇ) ಕಳೆದ ವರ್ಷದಿಂದ ಈ ಯೋಜನೆಯಲ್ಲಿ ಕೆಲವೊಂದು ನಿಬಂಧನೆಗಳನ್ನು ವಿಧಿಸಿರುವುದರಿಂದ ಕೃಷಿಕರು, ಕೃಷಿ ಕಾರ್ಮಿಕರ ಮಕ್ಕಳು ಈ ಯೋಜನೆಯ ಸೌಲಭ್ಯದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯೋಜನೆಯಲ್ಲಿ ಯಾವ ಬದಲಾವಣೆ ಮಾಡಲಾಗಿದೆ ; ಬದಲಾವಣೆಗೆ ಕಾರಣಗಳೇನು ;

(ಈ) ಹಿಂದೆ ಇದ್ದ ನಿಯಮದಂತೆಯೇ ಎಲ್ಲಾ ಕೃಷಿಕರು/ಕೃಷಿ ಕಾರ್ಮಿಕರ ಮಕ್ಕಳಿಗೆ ಈ ಯೋಜನೆಯಡಿ ವಿದ್ಯಾರ್ಥಿ ವೇತನ ನೀಡಲು ಕ್ರಮವಹಿಸಲಾಗುವುದೇ ? (ವಿವರ ಒದಗಿಸುವುದು)

## ಕಾಮಗಾರಿ ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ ಬಿಲ್ ಪಾವತಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೭ (೯೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಚಿಕ್ಕಮಗಳೂರು ಜಿಲ್ಲೆಗೆ ಮಂಜೂರಾಗಿರುವ ಅನುದಾನವೆಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಈ ಕಾಮಗಾರಿಗಳಿಗೆ ಇದುವರೆಗೂ ಎಷ್ಟು

ಅನುದಾನ ಬಿಡುಗಡೆಯಾಗಿದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಈ ಕಾಮಗಾರಿಗಳನ್ನು ಯಾವ ಯಾವ ಅನುಷ್ಠಾನ ಏಜೆನ್ಸಿಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ ; (ಕಾಮಗಾರಿವಾರು ವಿವರ ಒದಗಿಸುವುದು)

(ಈ) ಕಳೆದ ೫ ವರ್ಷದಿಂದ ಕಾಮಗಾರಿ ಪೂರ್ಣಗೊಳಿಸಿ ಬಿಲ್ ಪಾವತಿಸಲು ಬಾಕಿ ಇರುವ ಪ್ರಕರಣಗಳೆಷ್ಟು ; ಬಿಲ್ ಪಾವತಿಸಲು ಬಾಕಿ ಇರಲು ಕಾರಣಗಳೇನು ; (ಕಾಮಗಾರಿವಾರು ವಿವರ ಒದಗಿಸುವುದು)

(ಉ) ಬಾಕಿ ಇರುವ ಬಿಲ್ ಪಾವತಿಸಲು ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು ?

## ನಿಗಮಗಳ ಮೂಲಕ ಆಯ್ಕೆಗೊಂಡಿರುವ ಫಲಾನುಭವಿಗಳಿಗೆ ಸವಲತ್ತು ನೀಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೮ (೯೩೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿವಿಧ ಅಭಿವೃದ್ಧಿ ನಿಗಮಗಳ ಮೂಲಕ ಯಾವ ಯಾವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ ; ಯಾವ ಕಾರ್ಯಕ್ರಮಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ಹಾಗೂ ಎಷ್ಟು ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ೨೦೨೩–೨೪ ಹಾಗೂ ೨೦೨೪–೨೫ ನೇ ಸಾಲಿನ ಮೂಲಕ ಯಾವ ಯಾವ ಯೋಜನೆಗಳಿಗೆ ಎಷ್ಟು ಗುರಿ ನಿಗದಿಪಡಿಸಲಾಗಿತ್ತು;

ಎಷ್ಟು ಫಲಾನುಭವಿಗಳಿಗೆ ಸವಲತ್ತು ಒದಗಿಸಲಾಗಿದೆ ; (ಜಿಲ್ಲಾವಾರು ವಿವರವನ್ನು ನಿಗಮವಾರು ಒದಗಿಸುವುದು)

(ಇ) ೨೦೨೨–೨೩ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ನಿಗಮಗಳ ಮೂಲಕ ಯಾವ ಯಾವ ಯೋಜನೆಗೆ ಎಷ್ಟು ಜನ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿತ್ತು ; ಎಷ್ಟು ಜನ ಫಲಾನುಭವಿಗಳಿಗೆ ಯೋಜನೆಯ ಸಂಪೂರ್ಣ ಸವಲತ್ತುಗಳನ್ನು ಒದಗಿಸಲಾಗಿದೆ ; ಎಷ್ಟು ಬಾಕಿ ಇವೆ ; ಬಾಕಿ ಇರಲು ಕಾರಣಗಳೇನು ; (ವಿವರ ಒದಗಿಸುವುದು)

(ಈ) ಬಾಕಿ ಇರುವ ಫಲಾನುಭವಿಗಳಿಗೆ ಸವಲತ್ತುಗಳನ್ನು ಒದಗಿಸಲು ಇರುವ ತೊಡಕುಗಳೇನು ; ಯಾವ ಕಾಲಮಿತಿಯಲ್ಲಿ ಈ ಫಲಾನುಭವಿಗಳಿಗೆ ಯೋಜನೆಯ ಸಂಪೂರ್ಣ ಸವಲತ್ತುಗಳನ್ನು ಒದಗಿಸಲಾಗುವುದು ? (ವಿವರ ಒದಗಿಸುವುದು)

## ಕಾರ್ಮಿಕರಿಗೆ ಟೂಲ್ ಕಿಟ್ ವಿತರಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೯ (೮೭೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಕಾರ್ಮಿಕರಿಗೆ ಟೂಲ್ ಕಿಟ್‌ಗಳನ್ನು ನೀಡಲು ಕರೆಯಲಾದ ಟೆಂಡರ್ ಪ್ರಕ್ರಿಯೆಯಲ್ಲಿ ರೂ.೪೯೩.೦೦ಕೋಟಿ ಅವ್ಯವಹಾರ ನಡೆದಿರುವ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಆ) ಈ ಟೂಲ್ ಕಿಟ್ ಸರಬರಾಜು ಮಾಡಲು ಐ.ಟಿ. ಕಂಪನಿಗೆ ಟೆಂಡರ್ ನೀಡುವ ಮೂಲಕ ನೇರವಾಗಿ ಭ್ರಷ್ಟಾಚಾರವೆಸಗಿರುವ ಸ್ಪಷ್ಟ ದಾಖಲೆಗಳು ಇರುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಕಟ್ಟಡ ಕಾರ್ಮಿಕರಿಗೆ ವಿತರಿಸಲು ಖರೀದಿಸಲಾದ ಟೂಲ್ ಕಿಟ್‌ಗಳು ಯಾವುವು ; ಅದರಲ್ಲಿ ಯಾವ ಯಾವ ವಸ್ತುಗಳು ಇವೆ ; ಸದರಿ ಟೂಲ್ ಕಿಟ್‌ಗಳನ್ನು ಎಷ್ಟು ಕಾರ್ಮಿಕರಿಗೆ ವಿತರಿಸಲಾಗಿದೆ ? (ಅವರ ಹೆಸರು, ವಿಳಾಸ ಹಾಗೂ ಸದರಿ ಕಾರ್ಮಿಕರಿಗೆ ವಿತರಿಸಲಾದ ಕಿಟ್‌ನಲ್ಲಿದ್ದ ವಸ್ತುಗಳ ವಿವರದೊಂದಿಗೆ ಮಾಹಿತಿ ನೀಡುವುದು)

## ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೦ (೮೭೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಡಿಯಲ್ಲಿ ರಾಜ್ಯದಲ್ಲಿ ಎಷ್ಟು ಗರ್ಭಿಣಿ ಮಹಿಳೆಯರಿಗೆ ಪ್ರಸವ ಪೂರ್ವ ಆರೋಗ್ಯ ತಪಾಸಣೆ ಕೈಗೊಳ್ಳಲಾಗಿದೆ ; ಇದರಿಂದ ಎಷ್ಟು ತೀವ್ರ ತಾಪತ್ರಯದ ಗರ್ಭಿಣಿಯರನ್ನು ಗುರುತಿಸಲಾಗಿದೆ ;

(ಆ) ಕಳೆದ ಒಂದು ವರ್ಷದಲ್ಲಿ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯ ಮೂಲಕ ಎಷ್ಟು ಗರ್ಭಿಣಿ ತಾಯಂದರಿಗೆ ಉತ್ತೇಜಕ ಧನ ಸಹಾಯ ನೀಡಲಾಗಿದೆ ; ರಾಜ್ಯ ಸರಕಾರವು ನೀಡಿದ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಂದ್ರಧನುಷ್ ಮಿಷನ್ ಮೂಲಕ ಕಾಯಿಲೆಯಿಂದ ರಕ್ಷಣೆ ಪಡೆಯಲು ಕಳೆದ ಒಂದು ವರ್ಷದಲ್ಲಿ ರಾಜ್ಯದ ಎಷ್ಟು ಗರ್ಭಿಣಿ ಸ್ತ್ರೀಯರಿಗೆ ಮತ್ತು ಮಕ್ಕಳಿಗೆ ಲಸಿಕೆಯನ್ನು ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ವೃದ್ಧಾಶ್ರಮಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೧ (೮೭೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳನ್ನು ಸಂಯೋಜಿಸಿ ಪಾಲನಾ ಗೃಹಗಳನ್ನು ಪ್ರಾರಂಭಿಸುವ ಕುರಿತು ಸರ್ಕಾರದ ನಿಲುವೇನು ;

(ಆ) ವೃದ್ಧಾಶ್ರಮದಲ್ಲಿರುವ ವೃದ್ಧರಿಗೆ ಅನಾಥ ಮಕ್ಕಳ ಪಾಲನೆಯ ಜವಾಬ್ದಾರಿಯನ್ನು ನೀಡುವ ಕುರಿತು ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ;

(ಇ) ಕಳೆದ ೦೫ ವರ್ಷಗಳಲ್ಲಿ ಎಷ್ಟು ಮಕ್ಕಳನ್ನು ದತ್ತು ನೀಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಕಟ್ಟಡ ಕಾರ್ಮಿಕರ ಕಾರ್ಡ್ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೨ (೮೭೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಇದುವರೆಗೆ ಎಷ್ಟು ಕಾರ್ಮಿಕರಿಗೆ ಕಾರ್ಡ್‌ಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೦೬ ತಿಂಗಳಿನಲ್ಲಿ ವಿತರಿಸಿದ ಕಾರ್ಮಿಕರ ಕಾರ್ಡ್‌ಗಳ ಸಂಖ್ಯೆ ಎಷ್ಟು ಮತ್ತು ಅದರಲ್ಲಿ ಕಾರ್ಮಿಕರ ಕಾರ್ಡ್ ಪಡೆದ ಮಹಿಳೆಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ಗರ್ಭಿಣಿ ಕಾರ್ಮಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತದೆ ; ಮಗುವಿನ

ಜನನದ ಬಳಿಕ ೦೬ ತಿಂಗಳ ಕಾಲ ಪಿಂಚಣಿ ನೀಡುವ ಯೋಜನೆ ಜಾರಿಯಲ್ಲಿದೆಯೇ ; ಕಳೆದ ೦೨ ವರ್ಷಗಳಲ್ಲಿ ಈ ಸೌಲಭ್ಯವನ್ನು ಎಷ್ಟು ಮಹಿಳಾ ಕಾರ್ಮಿಕರಿಗೆ ನೀಡಲಾಗಿದೆ ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ ಇಲ್ಲಿನ ಶಿಕ್ಷಕ/ಶಿಕ್ಷಕೇತರ ಇನ್ನುಳಿದ ವಿಷಯದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೮೨೩ (೯೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ ಯಾವ ವರ್ಷ ಪ್ರಾರಂಭವಾಗಿದೆ ; (ಮಾಹಿತಿ ನೀಡುವುದು)

(ಆ) ಈ ವಿಶ್ವವಿದ್ಯಾಲಯದಲ್ಲಿ ಎಷ್ಟು ವಿಷಯಗಳ ಮೇಲೆ ಸ್ನಾತಕೋತ್ತರ ಪದವಿ ನೀಡಲಾಗುತ್ತದೆ ; ೨೦೨೫–೨೦೨೬ನೇ ಶೈಕ್ಷಣಿಕ ವರ್ಷದಲ್ಲಿ ಯಾವ ಯಾವ ಕೋರ್ಸ್‌ಗಳಲ್ಲಿ ಎಷ್ಟು ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿರುವರು ; (ವಿವರವಾದ ಮಾಹಿತಿ ನೀಡುವುದು)

(ಇ) ಈ ವಿಶ್ವವಿದ್ಯಾಲಯಕ್ಕೆ ಮಂಜೂರಾದ ಶಿಕ್ಷಕ ಹಾಗೂ ಶಿಕ್ಷಕೇತರ ಹುದ್ದೆಗಳೆಷ್ಟು ; ಅವುಗಳಲ್ಲಿ ಎಷ್ಟು ಸಿಬ್ಬಂದಿ ಖಾಯಂ ಆಧಾರದ ಮೇಲೆ ನೇಮಕಗೊಂಡಿರುವರು ; (ವಿವಿಧ ವಿಭಾಗವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಾಲಿ ತಾತ್ಕಾಲಿಕ ಆಧಾರದ ಮೇಲೆ ಅಥವಾ ಅತಿಥಿ ಉಪನ್ಯಾಸಕರಾಗಿ ಎಷ್ಟು ಜನ ಸಿಬ್ಬಂದಿಯವರು ವಿವಿಧ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವರು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಉ) ವಿಶ್ವವಿದ್ಯಾಲಯಕ್ಕೆ ಖಾಯಂ ಆಗಿ ನೇಮಕ ಮಾಡಿಕೊಳ್ಳುವ ಸಂದರ್ಭದಲ್ಲಿ ಸದ್ಯ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯವರಿಗೆ ವೇಟೇಜ್ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ? (ಮಾಹಿತಿ ಒದಗಿಸುವುದು)

## ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಶಾಸಕರ ಹೆಸರಿಗೆ ನೀಡಿದ ಅನುದಾನದ ಉಳಿಕೆ ಹಣಕ್ಕೆ ಕಾಮಗಾರಿ ನೀಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೪ (೮೮೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಆಯಾ ಸಾಲಿನಲ್ಲಿ ಶಾಸಕರ ಹೆಸರಿನಲ್ಲಿ ಉಳಿದ ಉಳಿತಾಯ ಖಾತೆಯಲ್ಲಿ ಲಭ್ಯವಿರುವ ಅನುದಾನದಲ್ಲಿ ಕಾಮಗಾರಿಗಳಿಗೆ ಶಾಸಕರು ಪ್ರಸ್ತಾವನೆ ಸಲ್ಲಿಸಲು ಅವಕಾಶವಿದೆಯೇ ; (ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗುವುದು ;

(ಇ) ಶಾಸಕರುಗಳಿಗೆ ನೀಡಲಾದ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಆಯಾ ಸಾಲಿನಲ್ಲಿ ಉಳಿತಾಯ ಖಾತೆಯಲ್ಲಿನ ಅನುದಾನಕ್ಕೆ ಪ್ರಸ್ತಾವನೆ ನೀಡಲು ಅವಕಾಶ ಇಲ್ಲದಿದ್ದಲ್ಲಿ, ಅವಕಾಶ ಮಾಡಿಕೊಡಲು ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗುವುದು ? (ಮಾಹಿತಿ ಒದಗಿಸುವುದು)

# ವಿಜಯನಗರ ಜಿಲ್ಲೆ, ಹೂವಿನಹಡಗಲಿ KRIDL ಉಪ ವಿಭಾಗದಲ್ಲಿ ಭ್ರಷ್ಟಾಚಾರ ನಡೆದಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೫ (೮೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯನಗರ ಜಿಲ್ಲೆ, ಹೂವಿನ ಹಡಗಲಿಯ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ (ಕೆಆರ್‌ಐಡಿಎಲ್) ಉಪವಿಭಾಗೀಯ ಕಛೇರಿಯಲ್ಲಿ ಸೂಕ್ತ ದಾಖಲೆಗಳಿಲ್ಲದೆ ಮತ್ತು ಕಾಮಗಾರಿಗಳನ್ನು ನಡೆಸದೆ ಖಾಸಗಿ ಉದ್ದಿಮೆಗಳಿಗೆ ಸುಮಾರು ರೂ.೨.೭೨ ಕೋಟಿ ಗಳ ಹಣವನ್ನು ನೀಡಿರುವುದು ನಿಜವೇ ; (ಹಾಗಿದ್ದಲ್ಲಿ, ಈ ಪ್ರಕರಣದ ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಹೂವಿನಹಡಗಲಿ ಕೆಆರ್‌ಐಡಿಎಲ್ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಇಲ್ಲಿನ ಇತರೆ ಸರ್ಕಾರಿ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಈ ರೀತಿ ಸರ್ಕಾರದ ಅನುದಾನವನ್ನು ಕಾಮಗಾರಿ ನಡೆಸದೆ ಅಕ್ರಮವಾಗಿ ದುರುಪಯೋಗ ಮಾಡಿರುವ ಅಧಿಕಾರಿಗಳ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಿ, ಅವರುಗಳ ಆಸ್ತಿಯುನ್ನು ಮುಟ್ಟುಗೋಲು ಹಾಕಿಕೊಳ್ಳಲು ಸರ್ಕಾರದ ತೀರ್ಮಾನಗಳೇನು ? (ವಿವರ ಒದಗಿಸುವುದು)

## ವಿಜಯನಗರ ಜಿಲ್ಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಶಿಷ್ಠಾಚಾರ ಉಲ್ಲಂಘನೆ ಆಗುತ್ತಿರುವ ಬಗ್ಗೆ

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೬ (೮೮೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೨–೨೩ನೇ ಸಾಲಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಿಜಯನಗರ ಜಿಲ್ಲೆ ವ್ಯಾಪ್ತಿಯಲ್ಲಿ ಹಮ್ಮಿಕೊಂಡ ಸರ್ಕಾರಿ ಕಾರ್ಯಕ್ರಮಗಳು ಯಾವುವು ; ಅವುಗಳಿಗೆ ಎಲ್ಲಾ ಜನ ಪ್ರತಿನಿಧಿಗಳನ್ನು ಆಹ್ವಾನಿಸಲಾಗಿತ್ತೆ ; (ಮಾಹಿತಿ ಒದಗಿಸುವುದು)

(ಆ) ಸರ್ಕಾರಿ ಕಾರ್ಯಕ್ರಮಗಳಿಗೆ ಜನಪ್ರತಿನಿಧಿಗಳನ್ನು ಆಹ್ವಾನಿಸದೇ ಶಿಷ್ಠಾಚಾರ ಉಲ್ಲಂಘನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶಿಷ್ಠಾಚಾರ ಉಲ್ಲಂಘನೆ ಮಾಡಿದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ?

## ೨೦೨೩–೨೪ ಹಾಗೂ ೨೦೨೪–೨೫ರ ಸಾಲಿನಲ್ಲಿ ಆಯೋಜಿಸಿರುವ ಜಾಗೃತಿ ಕಾರ್ಯಕ್ರಮಗಳ ಸಂಖ್ಯೆಯ ಬಗ್ಗೆ

**ಶ್ರೀ ಹೆಚ್.ಪಿ.ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :–**

೮೨೭ (೯೦೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ೨೦೨೩–೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ಆಯೋಜಿಸಿರುವ ಜಾಗೃತಿ ಕಾರ್ಯಕ್ರಮಗಳ ಸಂಖ್ಯೆ ಎಷ್ಟು ; ಅದಕ್ಕೆ ವೆಚ್ಚವಾಗಿರುವ ಹಣ ಎಷ್ಟು ; (ಕೈಗೊಳ್ಳಲಾಗಿರುವ ಪ್ರತಿಯೊಂದು ಕಾರ್ಯಕ್ರಮದ ಹಾಗೂ ಅದಕ್ಕೆ ವೆಚ್ಚವಾಗಿರುವ ಹಣದ ಮಾಹಿತಿ ಒದಗಿಸುವುದು)

(ಆ) ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ವ್ಯಕ್ತಿ ಹಾಗೂ ಸಂಘ ಸಂಸ್ಥೆಗಳ ಪೂರ್ವಾರ್ಹತೆ ಏನು ? (ಸಂಪೂರ್ಣ ವಿವರ ಒದಗಿಸುವುದು)

## ಗ್ರಾಮ ಪಂಚಾಯತ್ ಸದಸ್ಯರ ಬೇಡಿಕೆಗಳ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೮ (೯೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್ ಸದಸ್ಯರ ಮತ್ತು ಅಧ್ಯಕ್ಷರುಗಳ ನ್ಯಾಯಯುತ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸದರಿ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಗ್ರಾಮ ಪಂಚಾಯತ್ ಅಧ್ಯಕ್ಷರಿಗೆ ಉಚಿತ ಬಸ್‌ಪಾಸ್, ಪಿಂಚಣಿ ನೀಡುವ ಸೌಲಭ್ಯ, ಟೋಲ್ ಫ್ರೀ ಪಾಸ್‌ಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಈ ಬೇಡಿಕೆಗಳ ಕುರಿತು ಸರ್ಕಾರದ ನಿಲುವೇನು ?

## ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಜ್ಯೇಷ್ಠತಾ ಪಟ್ಟಿಗಳ ಬಗ್ಗೆ

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೯ (೯೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ೨೧–೦೨–೨೦೧೪ರಂದು ಹಾಗೂ ದಿನಾಂಕ: ೨೮–೧೨–೨೦೧೭ರಂದು ಸರ್ಕಾರವು ಪ್ರಕಟಿಸಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜ್ಯೇಷ್ಠತಾ

ಪಟ್ಟಿಯಲ್ಲಿ ಲೋಪಗಳೇನು ; (ಪ್ರತ್ಯೇಕ ಜ್ಯೇಷ್ಠತಾ ಪಟ್ಟಿವಾರು ಲೋಪಗಳ ಪಟ್ಟಿ ನೀಡುವುದು) ಇವುಗಳನ್ನು ಕ್ರಮವಾಗಿ ಮಾನ್ಯ ಕೆ.ಎ.ಟಿ.ಯು ಅರ್ಜಿ ಸಂಖ್ಯೆ: ೬೮೦೧–೬೮೦೫/೨೦೧೧ ಹಾಗೂ ಅರ್ಜಿ ಸಂಖ್ಯೆ: ೫೪೪೪–೫೪೮/೨೦೧೮ಗಳಲ್ಲಿ ಯಾವ ಕಾರಣಗಳನ್ನು ನೀಡಿ ರದ್ದುಗೊಳಿಸಲಾಗಿದೆ ; (ಕಾರಣಗಳ ಪಟ್ಟಿ ನೀಡುವುದು)

(ಆ) ಕೆ.ಎ.ಟಿ. ನಿಂದನಾ ಅರ್ಜಿ ಸಂಖ್ಯೆ: ೨೪೩/೨೦೧೯ ಹಾಗೂ ನಿಂದನಾ ಅರ್ಜಿ ಸಂಖ್ಯೆ: ೧೭೦–೨೧೧/೨೦೨೧ಗಳಲ್ಲಿ ಸರ್ಕಾರವು ಯಾವ ಕಾರಣ ನೀಡಿ ಸದರಿ ನಿಂದನಾ ಅರ್ಜಿ ವಿಲೇ ಮಾಡಲು ಮನವಿ ಮಾಡಿದೆ ; (ವಿವರ ನೀಡುವುದು)

(ಇ) ಆಯುಕ್ತರು, ಪಂಚಾಯತ್ ರಾಜ್ ಇವರ ಅಧ್ಯಕ್ಷತೆಯಲ್ಲಿ ಸಿದ್ಧಪಡಿಸಿದ ಪಿ.ಡಿ.ಓ.ಗಳ ಜ್ಯೇಷ್ಠತಾ ಪಟ್ಟಿ ದಿನಾಂಕ: ೦೮–೦೬–೨೦೨೪ರ ಸಮಿತಿಯ ವರದಿಯ ಕ್ರಮ ಸಂಖ್ಯೆ. ೨೭ರ ಉಪ ಸಂಖ್ಯೆ. ೬ ರಲ್ಲಿನ ವಿವಾದಾಂಶಗಳಲ್ಲಿ ತಿಳಿಸಿದ ಜಿಲ್ಲಾವಾರು ಹೆಚ್ಚುವರಿ ಬಡ್ತಿ ಹೊಂದಿದವರ ಪಟ್ಟಿಯನ್ನು ಹಾಗೂ ದಿನಾಂಕ: ೧೮–೦೩–೨೦೨೩ರಿಂದ ೦೮–೦೬–೨೦೨೪ರವರೆಗೆ ನಡೆಸಿದ ಒಟ್ಟು ೧೯ ಸಮಿತಿಯ ಸಭೆಯ ನಡವಳಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ; ಹಾಗಾದರೆ, ಸಮಿತಿಯು ಸಿದ್ಧಪಡಿಸಿದ ಜ್ಯೇಷ್ಠತಾ ಪಟ್ಟಿ, ಜಿಲ್ಲಾವಾರು ಹೆಚ್ಚುವರಿ ಬಡ್ತಿ ಹೊಂದಿದವರ ಪಟ್ಟಿ ಹಾಗೂ ದಿನಾಂಕ:೧೮–೦೩–೨೦೨೩ ರಿಂದ ೦೮–೦೬–೨೦೨೪ರವರೆಗಿನ ಎಲ್ಲಾ ೧೯ ಸಭೆಗಳ ನಡವಳಿ ಪ್ರತಿ ನೀಡುವುದು ;

(ಈ) ಜಿಲ್ಲಾವಾರು ವೃಂದದ ನೌಕರರ ಜ್ಯೇಷ್ಠತೆಯನ್ನು ಒಗ್ಗೂಡಿಸಿ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ತಯಾರಿಸುವಾಗ, ಕ.ಸಾ.ನೌ (ಜ್ಯೇಷ್ಠತಾ) ನಿಯಮಗಳು, ೧೯೫೭ರ ನಿಯಮ ೭–ಎ(೧)

ಪ್ರಕಾರ ಪಿ.ಡಿ.ಓ. ಜ್ಯೇಷ್ಠತಾ ಪಟ್ಟಿ ಸಿದ್ಧಪಡಿಸಿರುವುದು ಸಮಿತಿಯ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನಿಯಮ ೭–ಎ (೧)ಅನ್ನು ತಿರಸ್ಕರಿಸಿ, ನಿಯಮ ೫(೧)ರ ಪ್ರಕಾರ ಜ್ಯೇಷ್ಠತಾ ಪಟ್ಟಿ ತಯಾರಿಸಲು ಸಮಿತಿಯು ನೀಡಿರುವ ಕಾರಣಗಳಾವುವು ?

## ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಬಡ್ತಿಗಳ ಬಗ್ಗೆ

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೦ (೯೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರೇಡ್ – ೧ ಕಾರ್ಯದರ್ಶಿಗಳಿಗೆ ಪಿ.ಡಿ.ಓ. ಹುದ್ದೆಗೆ ಬಡ್ತಿ ನೀಡಲು ಅನುಸರಿಸಬೇಕಾದ ಮಾನದಂಡಗಳಾವುವು ; ೨೦೦೯–೧೦ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು ಪಿ.ಡಿ.ಓ. ಹುದ್ದೆಗೆ ಬಡ್ತಿ ನೀಡುವಾಗ ಇವುಗಳನ್ನು ಅನುಸರಿಸಲಾಗಿದೆಯೇ ; (ಜಿಲ್ಲಾವಾರು ಈ ಮಾನದಂಡಗಳನ್ನು ಅನುಸರಿಸಿದ ದಾಖಲೆ ನೀಡುವುದು)

(ಆ) ಗ್ರೇಡ್ – ೧ ಕಾರ್ಯದರ್ಶಿಗಳಿಗೆ ಪಿ.ಡಿ.ಓ. ಹುದ್ದೆಗೆ ಬಡ್ತಿ ನೀಡಲು ದಿನಾಂಕ: ೧೧–೦೫–೨೦೧೦ರಂದು ಸರ್ಕಾರ ನಿರ್ದೇಶನ ನೀಡುವ ಪೂರ್ವದಲ್ಲಿಯೆ ಎಷ್ಟು ಜನರಿಗೆ ಬಡ್ತಿ ನೀಡಲಾಗಿದೆ ; (ಜಿಲ್ಲಾವಾರು ಬಡ್ತಿ ಹೊಂದಿದವರ ಪಟ್ಟಿ ನೀಡುವುದು) ಈ ರೀತಿ ಬಡ್ತಿಗಳು ಸಕ್ರಮವಾದಲ್ಲಿ ದಿನಾಂಕ: ೧೧–೦೫–೨೦೧೦ರ ಆದೇಶದ ಔಚಿತ್ಯವೇನು ; ಹಾಗಾದರೆ ದಿನಾಂಕ: ೧೦–೦೫–೨೦೧೦ರ ನೇರ ನೇಮಕಾತಿ ಹಾಗೂ ದಿನಾಂಕ: ೧೧–೦೫–೨೦೧೦ರ ಪಿ.ಡಿ.ಓ.ಗಳ ಬಡ್ತಿ ಆದೇಶಗಳಿಗೆ ಕಾನೂನಿನ ಮಾನ್ಯತೆ ಇಲ್ಲವೆ ;

(ಇ) ದಿನಾಂಕ: ೧೧–೦೩–೨೦೧೦ರ ಪೂರ್ವದಲ್ಲಿ ಬಡ್ತಿ ಹೊಂದಿದ ಈ ಪಿ.ಡಿ.ಓ.ಗಳು ಮಾರ್ಚ್ – ೨೦೧೦ರಲ್ಲಿ ಗ್ರೇಡ್–೧ ಕಾರ್ಯದರ್ಶಿ ಹುದ್ದೆಯ ವೇತನ ಪಡೆದಿದ್ದರೆ ಅಥವಾ ಹೆಚ್.ಆರ್.ಎಂ.ಎಸ್. ಜಾರಿ ಇದ್ದರು ಸಹ ಇದರ ಮುಖಾಂತರ ಬಿಟ್ಟು ಮ್ಯಾನುವಲ್ (ಭಾಗಶ: ಗ್ರೇಡ್–೧ ಕಾರ್ಯದರ್ಶಿ ಹಾಗೂ ಭಾಗಶ: ಪಿ.ಡಿ.ಓ) ವೇತನ ಪಡೆದಿದ್ದರೆ ಇವರ ಬಡ್ತಿಗಳು ಸಕ್ರಮವೆ ;

(ಈ) ಸರ್ಕಾರದ ಪತ್ರ ಸಂಖ್ಯೆ: ಕೆಪಿಆರ್‌ಸಿ–ಜಿಪಿಎ–ಪಿಡೋ–೨೯೧–೨೦೨೪, ದಿನಾಂಕ: ೦೩–೦೧–೨೦೨೫ರನ್ವಯ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು ಅಕ್ರಮ ಪಿ.ಡಿ.ಓ. ಬಡ್ತಿ ಕುರಿತು ಸರ್ಕಾರಕ್ಕೆ ಸಲ್ಲಿಸಿರುವ ವರದಿಗಳಾವುವು ; (ಇವುಗಳ ಪ್ರತಿ ನೀಡಿ) ಈ ವರದಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಇದರ ದಾಖಲೆ ಹಾಗೂ ಸದರಿ ಪ್ರಕರಣದ ಟಿಪ್ಪಣಿ ಪ್ರತಿ ನೀಡುವುದು)

(ಉ) ಅಕ್ರಮವಾಗಿ ಬಡ್ತಿ ಹೊಂದಿದವರನ್ನು ಜ್ಯೇಷ್ಠತಾ ಪಟ್ಟಿಯಲ್ಲಿ ಅಗ್ರಸ್ಥಾನ ನೀಡಿ, ಬಡ್ತಿ ಹಾಗೂ ಸರ್ಕಾರದ ಎಲ್ಲಾ ಸೇವಾ ಸವಲತ್ತು ನೀಡಿದ್ದು, ಸದರಿ ದೂರುಗಳ ಮೇಲೆ ಅಂತಿಮ ಆದೇಶ ಹೊರಡಿಸದಿರಲು ಸರ್ಕಾರ ವಿಳಂಬ ಮಾಡುತ್ತಿದೆಯೇ ?

## ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೩೧ (೯೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ३೧–೦३–೨೦೦೮ರ ಸರ್ಕಾರದ ನಡವಳಿ ಹಾಗೂ ದಿನಾಂಕ: ೨೨–೦೧–೨೦೦೯ರ ಸಚಿವ ಸಂಪುಟ ಸಭೆಯಲ್ಲಿ, ಎಷ್ಟು ಪಿ.ಡಿ.ಓ. ಹುದ್ದೆಗಳನ್ನು ಸೃಜಿಸಲಾಗಿದೆ ; ಈ ಹುದ್ದೆಗಳನ್ನು ಒಟ್ಟು ಎಷ್ಟು ವರ್ಷಗಳಲ್ಲಿ ಹಾಗೂ ಪ್ರತಿ ವರ್ಷ ಯಾವ

ಪ್ರಮಾಣದಲ್ಲಿ ಭರ್ತಿ ಮಾಡಲು ನಿರ್ಣಯಿಸಲಾಗಿರುತ್ತದೆ ; ಈ ಎರಡು ಕೋಟಾದಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಬೇಕಾಗಿರುತ್ತದೆ ;

(ಆ) ದಿನಾಂಕ: ೨೨-೦೧-೨೦೦೯ರ ಸಚಿವ ಸಭೆಯಲ್ಲಿ ೨೦೦೮-೦೯ ಮತ್ತು ೨೦೦೯-೧೦ನೇ ಸಾಲಿಗೆ ಭರ್ತಿ ಮಾಡುವ ಹುದ್ದೆಗಳನ್ನು ಒಗ್ಗೂಡಿಸಿ ೨೦೦೯-೧೦ ಸಾಲಿನಲ್ಲಿ ನೇರ ನೇಮಕಾತಿ ಮುಖಾಂತರ ೨೫೦೦ ಹುದ್ದೆಗಳನ್ನು ಹಾಗೂ ಬಡ್ತಿ ಕೋಟಾದಡಿ (ಪಿ.ಡಿ.ಓ. ಹುದ್ದೆಯಿಂದ ವಿಲೀನ ಹಾಗೂ ಗ್ರೇಡ್-೧ ಕಾರ್ಯದರ್ಶಿ ಹುದ್ದೆ ಮುಖಾಂತರ ಬಡ್ತಿ) ೧೨೫೨ ಹುದ್ದೆಗಳನ್ನು ಭರ್ತಿ ಮಾಡಲು ನಿರ್ಣಯಿಸಲಾಗಿತ್ತೆ ;

(ಇ) ಈ ೨೫೦೦ ಹುದ್ದೆಗಳಲ್ಲಿ, ಜಿಲ್ಲಾವಾರು ಎಷ್ಟು ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಹಾಗೂ ೧೨೫೨ ಹುದ್ದೆಗಳಲ್ಲಿ, ಜಿಲ್ಲಾವಾರು ಎಷ್ಟು ಹುದ್ದೆಗಳಿಗೆ (ಪಿ.ಡಿ.ಓ. ಹುದ್ದೆಯಿಂದ ವಿಲೀನ ಹಾಗೂ ಗ್ರೇಡ್ - ೧ ಕಾರ್ಯದರ್ಶಿ ಹುದ್ದೆ ಮುಖಾಂತರ ಬಡ್ತಿ) ಭರ್ತಿ ಮಾಡಬೇಕಾಗಿರುತ್ತದೆ ;

(ಈ) ೨೦೦೮-೦೯ ಮತ್ತು ೨೦೦೯-೧೦ನೇ ಸಾಲಿಗೆ ಭರ್ತಿ ಮಾಡುವ ಹುದ್ದೆಗಳನ್ನು ಒಗ್ಗೂಡಿಸಿ ಜಿಲ್ಲಾವಾರು ಎಷ್ಟು ಹುದ್ದೆಗಳಿಗೆ (ಪಿ.ಡಿ.ಓ. ಹುದ್ದೆಯಿಂದ ವಿಲೀನ ಹಾಗೂ ಗ್ರೇಡ್ - ೧ ಕಾರ್ಯದರ್ಶಿ ಹುದ್ದೆ ಮುಖಾಂತರ ಬಡ್ತಿ) ಭರ್ತಿ ಮಾಡಲಾಗಿದೆ ; (ಜಿಲ್ಲಾವಾರು ಭರ್ತಿ ಹೊಂದಿದವರ ಹೆಸರು ನೀಡುವುದು)

(ಉ) ಒಂದು ವೇಳೆ ೨೦೧೦-೧೧ನೇ ಸಾಲಿಗೆ ಮೀಸಲಿರಿಸಿದ ಬಡ್ತಿ ಕೋಟಾದಲ್ಲಿನ ಹುದ್ದೆಗಳನ್ನು ೨೦೦೯-೧೦ನೇ ಸಾಲಿನಲ್ಲಿಯೇ ಮುಂಗಡವಾಗಿ ಭರ್ತಿ ಮಾಡಲಾಗಿದೆಯೇ ? (ಜಿಲ್ಲಾವಾರು ಅಭ್ಯರ್ಥಿಗಳ ಹೆಸರು ಹಾಗೂ ೨೦೧೪ರಲ್ಲಿನ ಪಿ.ಡಿ.ಓ. ರಾಜ್ಯ ಜ್ಯೇಷ್ಠತಾ ಸಂಖ್ಯೆ ನೀಡುವುದು)

## ಸಮುದಾಯ/ಜಾತಿ ಆಧಾರಿತ ನಿಗಮಗಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೨ (೯೬೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸಮುದಾಯ ಮತ್ತು ಜಾತಿ ಆಧಾರಿತ ಅಭಿವೃದ್ಧಿ ನಿಗಮಗಳಾವುವು ; ೨೦೨೪–೨೫ನೇ ಸಾಲಿನ ಆಯವ್ಯಯದಲ್ಲಿ ವಿವಿಧ ಸಮುದಾಯ ಮತ್ತು ಜಾತಿ ಆಧಾರಿತ ಅಭಿವೃದ್ಧಿ ನಿಗಮಗಳಿಗೆ ಮೀಸಲಿರಿಸಿದ ಅನುದಾನವೆಷ್ಟು ; (ನಿಗಮವಾರು ವಿವರ ನೀಡುವುದು)

(ಆ) ಸದರಿ ನಿಗಮಗಳಿಗೆ ಫೆಬ್ರವರಿ – ೨೦೨೫ರ ಅಂತ್ಯಕ್ಕೆ ಬಿಡುಗಡೆಯಾದ ಅನುದಾನ ಮತ್ತು ಖರ್ಚಾದ ಅನುದಾನವೆಷ್ಟು ; (ನಿಗಮವಾರು ಮಾಹಿತಿ ನೀಡುವುದು)

(ಇ) ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಖರ್ಚು ಮಾಡಲಾಗಿದೆ ; (ಕಾಮಗಾರಿಗಳ ಭೌತಿಕ ಮತ್ತು ಆರ್ಥಿಕ ಪ್ರಗತಿಯ ಸಂಪೂರ್ಣ ಮಾಹಿತಿ ನೀಡುವುದು)

(ಈ) ಆರ್ಥಿಕ ವರ್ಷ ಮುಗಿಯುತ್ತಿದ್ದರೂ ಸದರಿ ನಿಗಮಗಳಿಗೆ ಪೂರ್ಣ ಪ್ರಮಾಣದ ಅನುದಾನ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಬಿಡುಗಡೆ ಮಾಡದಿರಲು ಕಾರಣಗಳೇನು ?

## ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯತ್‌ನಲ್ಲಿ ವಿತರಿಸಿದ ಇ–ಖಾತಾ ರದ್ಧತಿಯ ಬಗ್ಗೆ

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೩ (೯೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಕಾರ್ಯಾಲಯದಿಂದ, ಬೆಂಗಳೂರು ಉತ್ತರ ತಾಲ್ಲೂಕು, ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯತಿಯಲ್ಲಿ ದಿನಾಂಕ: ೩೧-೦೩-೨೦೨೧ರ ನಂತರ ಆದ ಖಾತೆಗಳನ್ನು ರದ್ದು ಮಾಡುವಂತೆ ಪತ್ರ ಬರೆಯಲಾಗಿದೆಯೇ ; ಬರೆಥಿಲಾಗಿದ್ದರೆ, ಸದರಿ ಪತ್ರದ ಪ್ರತಿಯನ್ನು ನೀಡುವುದು ;

(ಆ) ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯತಿಗೆ ಸೇರಿದ್ದ ಗ್ರಾಮಗಳ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಗ್ರಾಮಗಳು ಪುರಸಭೆಗೆ ಸೇರ್ಪಡೆಯಾಗಿವೆ ಮತ್ತು ಬಿ.ಬಿ.ಎಂ.ಪಿ. ಗೆ ಸೇರ್ಪಡೆಯಾದ ಗ್ರಾಮಗಳ ಸಂಖ್ಯೆ ಎಷ್ಟು ಹಾಗೂ ಅವು ಯಾವುವು ;

(ಇ) ಎನ್.ಐ.ಸಿ. ಕಳುಹಿಸಿದ ಪತ್ರದಲ್ಲಿ ಬಿ.ಬಿ.ಎಂ.ಪಿ. ವ್ಯಾಪ್ತಿಯ ಲಕ್ಷ್ಮೀಪುರ ಗ್ರಾಮವಿದ್ದು, ಬಿ.ಬಿ.ಎಂ.ಪಿ.ಗೆ ಸಹ ಲಕ್ಷ್ಮೀಪುರ ಖಾತಾಗಳ ರದ್ದತಿಯ ಬಗ್ಗೆ ಪತ್ರ ಬರೆಯಲಾಗಿದೆಯೇ ; ಬರೆಯದೆ ಇದ್ದಲ್ಲಿ ಇದಕ್ಕೆ ಕಾರಣಗಳೇನು ; (ಪ್ರತಿಯನ್ನು ನೀಡುವುದು)

(ಈ) ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೆ ಏರಿಸಿದ್ದು ಮತ್ತು ಯಾವ ದಿನಾಂಕದಂದು ಚಾರ್ಜ್ ಪಟ್ಟಿ ನೀಡಲಾಗಿದೆ ; (ಚಾರ್ಜ್ ಪಟ್ಟಿಯ ಪ್ರತಿಯನ್ನು ಯಾವಾಗ ನೀಡುವುದು)

(ಉ) ಯಾವ ದಿನಾಂಕದವರೆಗೆ ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯತಿಯು ಕಾರ್ಯನಿರ್ವಹಿಸಿದೆ ಹಾಗೂ ದಿನಾಂಕ: ೩೧-೦೩-೨೦೨೧ರ ನಂತರ ಗ್ರಾಮ ಪಂಚಾಯತಿಯು ನಿರ್ವಹಿಸಿದ್ದ ಕಾರ್ಯಗಳು ಯಾವುವು ; ಅಲ್ಲಿನ ಸರ್ಕಾರಿ/ಗ್ರಾಮ ಪಂಚಾಯತಿಯ ಸಿಬ್ಬಂದಿಗೆ ಯಾವ ದಿನಾಂಕದವರೆಗೆ ತಾಲ್ಲೂಕು ಪಂಚಾಯತಿ ವತಿಯಿಂದ ವೇತನ ಪಾವತಿ ಮಾಡಲಾಗಿದೆ ;

(ಊ) ಸದರಿ ಪಟ್ಟಿಯಲ್ಲಿನ ಖಾತಾಗಳನ್ನು ರದ್ದು ಮಾಡಲು ಕಾರಣಗಳೇನು ; ಸದರಿ ಆಸ್ತಿಗಳ ಖಾತಾಗಳ ನಮೂನೆ – ೯ ಮತ್ತು ನಮೂನೆ – ೧೧ರಲ್ಲಿ ಯಾವ ವರ್ಷದಿಂದ ದಾಖಲಾಗಿವೆ ; (ಎಲ್ಲಾ ಖಾತೆಗಳ ವಿವರ ಪ್ರತ್ಯೇಕವಾಗಿ ನೀಡುವುದು)

(ಋ) ೨೦೨೦ಕ್ಕೆ ಪೂರ್ವದಲ್ಲಿಯೇ ಮ್ಯುಟೇಷನ್ ಆಗಿದ್ದು, ಮ್ಯಾನ್ಯುಯಲ್ ಖಾತಾ ರಿಜಿಸ್ಟರ್‌ನಲ್ಲಿ ದಾಖಲಿದ್ದು, ३೧–೦३–೨೦೨೧ಕ್ಕೆ ಪೂರ್ವದಲ್ಲೇ ಅರ್ಜಿ ಸಲ್ಲಿಸಿ ನಕ್ಷೆ ಬಿಡುಗಡೆಯಾಗಿ ಸಾಮಾನ್ಯ ಸಭೆ ಅನುಮೋದನೆಯಾಗಿದ್ದು, ಅಧಿಕಾರಿ/ಸಿಬ್ಬಂದಿಗಳ ವಿಳಂಬದಿಂದಾಗಿ ದಿನಾಂಕ: ३೧–೦३–೨೦೨೧ರ ನಂತರ ಇ–ಖಾತಾ ನೀಡಿದ್ದರೆ ಸದರಿ ಖಾತೆಗಳನ್ನು ರದ್ದು ಮಾಡುವುದು ಖಾತಾದಾರರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ ;

(ಎ) ಖಾತಾ ರದ್ದು ಪಡಿಸಲು ಇರುವ ಕ್ರಮವೇನು ; ಕಡತ/ ದಾಖಲೆಗಳನ್ನು ಪರಿಶೀಲಿಸದೆ ಖಾತಾದಾರರಿಗೆ ನೋಟೀಸ್ ಸಹ ನೀಡದೆ ಖಾತಾ ರದ್ದುಪಡಿಸಲು ಪತ್ರ ಬರೆಯುವುದು ಸೂಕ್ತವೇ ; ಸದರಿ ಖಾತಾದಾರರಿಗೆ ಆಗಿರುವ ಅನ್ಯಾಯವನ್ನು ಸರಿ ಪಡಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮವೇನು ;

(ಋ) ಸರ್ಕಾರದ ಇಲಾಖೆಗಳಿಂದ ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯತಿಯ ಬಗ್ಗೆ ಪತ್ರ ಬರೆದಲ್ಲಿ ಪುರಸಭೆಗೆ ಹಸ್ತಾಂತರವಾಗಿರುವುದಾಗಿ ಬರೆಯುವ ಜಿಲ್ಲಾ ಪಂಚಾಯತಿಯವರು ಖಾತಾ ರದ್ಧತಿಯ ಬಗ್ಗೆ ಮಾಹಿತಿ ಪಡೆದು ಪತ್ರ ಬರೆಯಲು ಕಾರಣವೇನು ?

# ಅರಣ್ಯ ಹಕ್ಕು ಕಾಯ್ದೆ ೨೦೦೬-೦೮ರ ಅಡಿಯಲ್ಲಿ ಗ್ರಾಮ ಅರಣ್ಯ ಹಕ್ಕು ಸಮಿತಿ ಸ್ಥಾಪಿಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿವರು) :–**

೮೩೪ (೯೭೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುಸೂಚಿತ ಬಡಕಟ್ಟುಗಳ ಮತ್ತು ಇತರೆ ಪಾರಂಪಾರಿಕ ಅರಣ್ಯ ವಾಸಿಗಳ (ಅರಣ್ಯ ಹಕ್ಕುಗಳನ್ನು ಮಾನ್ಯ ಮಾಡುವ) ಅಧಿನಿಯಮ ೨೦೦೬ರ ಮತ್ತು ನಿಯಮಗಳು ೨೦೦೮ರ ಕಾಯ್ದೆಯ ಪ್ರಕಾರ ಗ್ರಾಮ ಅರಣ್ಯ ಹಕ್ಕು ಸಮಿತಿ ಸ್ಥಾಪಿಸಲು ಇರುವ ಮಾನದಂಡಗಳು ಯಾವುವು ; (ವಿವರ ನೀಡುವುದು)

(ಆ) ಅರಣ್ಯ ಹಕ್ಕು ಕಾಯ್ದೆಯಡಿ ಪಂಚಾಯತಿ ವ್ಯಾಪ್ತಿಯ ಕಂದಾಯ ಗ್ರಾಮಗಳಷ್ಟೇ ಅಲ್ಲದೆ, ಪ್ರತಿ ಸಣ್ಣ ಸಣ್ಣ ಗ್ರಾಮಗಳಲ್ಲಿಯೂ ಕೂಡ ಗ್ರಾಮ ಅರಣ್ಯ ಹಕ್ಕು ಸಮಿತಿ ರಚಿಸಲು ಕಾನೂನಿನಲ್ಲಿ ಇದ್ದರೂ ಹಲವು ಕಡೆ ಎಲ್ಲಾ ಗ್ರಾಮಗಳನ್ನು ಸೇರಿಸಿ ಪಂಚಾಯತಿ ಮಟ್ಟದಲ್ಲಿ ಮಾತ್ರ ಸಮಿತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳ ಕುರಿತು ಮಾಹಿತಿ ನೀಡುವುದು ;

(ಇ) ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪಾರಿಕ ಅರಣ್ಯ ವಾಸಿಗಳ (ಅರಣ್ಯ ಹಕ್ಕುಗಳನ್ನು ಮಾನ್ಯ ಮಾಡುವ) ಅಧಿನಿಯಮ ೨೦೦೬ರ ಮತ್ತು ನಿಯಮಗಳು – ೨೦೦೮ರ ಕಾಯ್ದೆಯ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ? (ಮಾಹಿತಿ ನೀಡುವುದು)

## ಶಾಸಕರ ಅನುದಾನದಡಿ ಜರುಗುವ ಕಾಮಗಾರಿಗಳ ಕಾಲಾವಧಿ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೮೩೫ (೯೭೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದಡಿ ಜರುಗುವ ಅಭಿವೃದ್ಧಿ ಕಾಮಗಾರಿಗಳು ಗರಿಷ್ಠ ಎರಡು ವರ್ಷದೊಳಗೆ ಪೂರ್ಣಗೊಳಿಸಬೇಕು ಎಂಬ ಮಾನದಂಡ ಇರುವುದು ನಿಜವೇ ;

(ಆ) ಜಿಲ್ಲೆಯ ಅಧಿಕಾರಿಗಳು ಕಾಮಗಾರಿಗಳಿಗೆ ಅನುಮೋದನೆ ನೀಡಲು ತಡ ಮಾಡಿದರೆ ಅಥವಾ ಕಛೇರಿಗಳಿಂದ ನಿಧಾನಗತಿಯಲ್ಲಿ ಸಾಗುವ ಪತ್ರ ವ್ಯವಹಾರ ಮುಂತಾದ ಕಾರಣದಿಂದಾಗಿ ಅಥವಾ ಕಾಮಗಾರಿ ಬದಲಾವಣೆ ಸಂದರ್ಭದಲ್ಲಿ ಜಿಲ್ಲೆಯಿಂದ ಇನ್ನೊಂದು ಜಿಲ್ಲೆಗೆ ಕಾಮಗಾರಿ ಕೈಗೊಳ್ಳುವುದರಿಂದ ಕಾಮಗಾರಿ ಪೂರ್ಣಗೊಳಿಸಲು ಎರಡು ವರ್ಷಗಳಿಂದ ಹೆಚ್ಚಿನ ಕಾಲಾವಕಾಶ ತೆಗೆದುಕೊಂಡರೆ ಇದಕ್ಕೆ ಪರಿಹಾರವೇನು ;

(ಇ) ಸದರಿ ಕಾಮಗಾರಿಗಳ ಕಾಲಾವಧಿ ೨ ವರ್ಷದ ಬದಲು ೩ ವರ್ಷದವರೆಗೆ ಕಾಲಾವಧಿ ವಿಸ್ತರಿಸುವ ಯೋಚನೆ ಸರ್ಕಾರಕ್ಕೆ ಇದೆಯೇ ; ಈ ಕುರಿತು ಮಾಹಿತಿ ನೀಡುವುದು ?

## ಅರಣ್ಯ ಹಕ್ಕು ಕಾಯ್ದೆ ೨೦೦೬–೦೮ರ ಸಂಪರ್ಕ ಅನುಷ್ಠಾನ ಆಗದಿರುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೮೩೬ (೯೭೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪಾರಿಕ ಅರಣ್ಯ ವಾಸಿಗಳ (ಅರಣ್ಯ ಹಕ್ಕುಗಳನ್ನು ಮಾನ್ಯ ಮಾಡುವ) ಅಧಿನಿಯಮ ೨೦೦೬ರ ಮತ್ತು ನಿಯಮಗಳು– ೨೦೦೮ರ ಕಾಯ್ದೆಯಡಿಯಲ್ಲಿ ರಾಜ್ಯದ ಬುಡಕಟ್ಟುಗಳಿಗೆ ಅರಣ್ಯ ಹಕ್ಕು ಪತ್ರ ನೀಡುವ ಪ್ರಕ್ರಿಯೆಯು ತುಂಬಾ ನಿಧಾನವಾಗಲು ಕಾರಣಗಳೇನು ; (ವಿವರ ನೀಡುವುದು)

(ಆ) ಈವರೆಗೆ ರಾಜ್ಯದಲ್ಲಿ ಪರಿಶಿಷ್ಟ ಪಂಗಡದವರಿಗೆ ಮತ್ತು ಪಾರಂಪರಿಕ ಅರಣ್ಯ ವಾಸಿಗಳಿಗೆ ನೀಡಿರುವ ವೈಯಕ್ತಿಕ ಮತ್ತು ಸಮುದಾಯ ಹಕ್ಕು ಪತ್ರಗಳಾವುವು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಜಿಲ್ಲಾವಾರು ಸ್ವೀಕೃತಗೊಂಡಿರುವ ಅರ್ಜಿಗಳು, ಹಕ್ಕುಪತ್ರ ನೀಡಿರುವ ಕುಟುಂಬಗಳು, ತಿರಸ್ಕೃತಗೊಂಡಿರುವ ಅರ್ಜಿಗಳು ಮತ್ತು ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಖಾನಾಪೂರ ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿನ ಗೌಳಿ ಜನಾಂಗದ ಹಾಡಿಗಳಿಗೆ ಮೂಲಭೂತ ಸೌಕರ್ಯ ಒದಗಿಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೮೩೭ (೯೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಖಾನಾಪೂರ ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಪಾರಂಪರಿಕ ಅರಣ್ಯ ವಾಸಿಗಳಾದ ಧನಗರ ಗೌಳಿ ಜನಾಂಗದ ಹಾಡಿಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಆ) ಈ ಗ್ರಾಮಗಳ ಪೈಕಿ ಮೂಲಭೂತ ಸೌಲಭ್ಯಗಳು ಹೊಂದಿರುವ ಮತ್ತು ಹೊಂದದಿರುವ ಹಾಡಿಗಳು ಯಾವುವು ; (ಪಂಚಾಯತಿವಾರು ವಿವರ ಒದಗಿಸುವುದು)

(ಇ) ಸದರಿ ಜನಾಂಗ ವಾಸಿಸುವ ಗ್ರಾಮಸ್ಥರು ಪಂಚಾಯತಿಯಲ್ಲಿ ಮನೆಗಳಿಗೆ, ತೆರಿಗೆ ನೀಡುತ್ತಿದ್ದರೂ, ಹಲವು ಗ್ರಾಮಗಳಲ್ಲಿ ಓಣಿ ರಸ್ತೆ, ಗಟಾರು, ಕುಡಿಯುವ ನೀರು, ಬೀದಿ ದೀಪಗಳ ವ್ಯವಸ್ಥೆಗಳಿಲ್ಲದೆ ಸದರಿ ಜನಾಂಗ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳ ಕುರಿತು ವಿವರ ನೀಡುವುದು ?

## ಪಂಚಾಯತ್ ರಾಜ್ ಇಲಾಖೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಟೆಂಡರ್ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೩೮ (೯೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೦೨೪ ಮತ್ತು ೨೦೨೪–೨೦೨೫ನೇ ಸಾಲಿನಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಅನುಷ್ಠಾನಗೊಳಿಸಿರುವ ಟೆಂಡರ್ ಗುತ್ತಿಗೆಗಳ ಸಂಖ್ಯೆ ಎಷ್ಟು ;

(ಆ) ಚಿತ್ರದುರ್ಗ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಟೆಂಡರ್ ಗುತ್ತಿಗೆಗಳನ್ನು ಅನುಷ್ಠಾನಗೊಳಿಸಲಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗಿರುವ ಟೆಂಡರ್ ಗುತ್ತಿಗೆಗಳಲ್ಲಿ ಸರ್ಕಾರದ ಆದೇಶ ಮತ್ತು ನಿಯಮಗಳಂತೆ ಪ್ರವರ್ಗ–೧ರ ಜಾತಿಗಳ ಗುತ್ತಿಗೆದಾರರಿಗೆ ಎಷ್ಟು ಗುತ್ತಿಗೆಗಳನ್ನು ನೀಡಲಾಗಿದೆ ;

(ಈ) ನೀಡದಿದ್ದಲ್ಲಿ, ಕಾರಣಗಳೇನು ; ಇದಕ್ಕೆ ಜವಾಬ್ದಾರರಾಗಿರುವ ಅಧಿಕಾರಿಗಳ ಮೇಲೆ ಕೈಗೊಳ್ಳುವ ಕ್ರಮಗಳೇನು ?

## ಹಿಂದುಳಿದ ವರ್ಗಗಳ ಚೆನ್ನಪ್ಪರೆಡ್ಡಿ ಆಯೋಗದ ಬಗ್ಗೆ ಮಾಹಿತಿ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೩೯ (೯೭೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀ ಎಲ್.ಜಿ.ಹಾವನೂರು ಆಯೋಗದ ವರದಿಯಲ್ಲಿ ಹಿಂದುಳಿದ ವರ್ಗ ಎಂಬ ಗುಂಪಿನಲ್ಲಿದ್ದ ಜಾತಿಗಳನ್ನು ಪ್ರಸ್ತುತ ಚೆನ್ನಪ್ಪ ರೆಡ್ಡಿ ಆಯೋಗದ ವರದಿಯಲ್ಲಿ ಪ್ರವರ್ಗ – ೧ರ ಗುಂಪಿಗೆ ಸೇರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಿಂದೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ನೀಡುತ್ತಿದ್ದ ಎಲ್ಲಾ ಸೌಲಭ್ಯಗಳನ್ನು ಹಿಂದುಳಿದ ವರ್ಗದ ಜನಾಂಗದವರಿಗೆ ನೀಡಲಾಗುತ್ತಿದ್ದು, ಪ್ರಸ್ತುತ ಪ್ರವರ್ಗ – ೧ರ ಜಾತಿಗಳಿಗೆ ನೀಡದಿರಲು ಕಾರಣವೇನು ;

(ಇ) ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದವರಿಗೆ ನೀಡುತ್ತಿದ್ದ ಸೌಲಭ್ಯಗಳನ್ನು ಈ ಹಿಂದೆ ಪ್ರವರ್ಗ – ೧ರ ಜಾತಿಗಳಿಗೂ ನೀಡುತ್ತಿದ್ದು, ಪ್ರಸ್ತುತ ಸೌಲಭ್ಯಗಳನ್ನು ನೀಡದಿರುವುದರಿಂದ ಈ ಜನಾಂಗದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದಿಲ್ಲವೇ ;

(ಈ) ಸದರಿ ಸೌಲಭ್ಯಗಳನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಪ್ರವರ್ಗ – ೧ರ ವಿದ್ಯಾರ್ಥಿಗಳ ಪ್ರಿ–ಮೆಟ್ರಿಕ್ ಮತ್ತು ಪೋಸ್ಟ್ – ಮೆಟ್ರಿಕ್ ಮಾಹಿತಿ ಒದಗಿಸುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೪೦ (೯೭೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦೨೦ರಿಂದ ೨೦೨೪–೨೦೨೫ರವರೆಗೆ ಪ್ರವರ್ಗ – ೧ರ ಜಾತಿಗಳ ಎಷ್ಟು ವಿದ್ಯಾರ್ಥಿಗಳಿಗೆ ಪ್ರಿ–ಮೆಟ್ರಿಕ್ ಮತ್ತು ಪೋಸ್ಟ್–ಮೆಟ್ರಿಕ್ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿದ್ಯಾಸಿರಿ ಯೋಜನೆ, ವಿದ್ಯಾರ್ಥಿ ವೇತನ ಹಾಗೂ ಇನ್ನಿತರೆ ಆರ್ಥಿಕ ಸೌಲಭ್ಯಗಳನ್ನು ನೀಡಿರುವ ಜಾತಿವಾರು, ವ್ಯಾಸಂಗದ ಕೋರ್ಸ್‌ವಾರು, ಜಿಲ್ಲಾವಾರು ವಿದ್ಯಾರ್ಥಿಗಳಿಗೆ ನೀಡಲಾಗಿರುವ ಸಂಖ್ಯೆ ಎಷ್ಟು ;

(ಇ) ಇದರಲ್ಲಿ ಎಷ್ಟು ಮಹಿಳಾ ಮತ್ತು ಪುರುಷ ವಿದ್ಯಾರ್ಥಿಗಳಿಗೆ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೨೦–೨೧ರಿಂದ ೨೦೨೪–೨೫ರವರೆಗೆ ಪ್ರವರ್ಗ – ೧ರ ಜಾತಿಗಳಿಗೆ ಸೇರಿದ ನಿಗಮಗಳಿಗೆ ನೀಡಲಾದ ಅನುದಾನವೆಷ್ಟು ;

(ಉ) ಈ ಅನುದಾನದಲ್ಲಿ ಜಿಲ್ಲಾವಾರು ವಿವಿಧ ಯೋಜನೆಗಳಿಗೆ ಖರ್ಚು ಮಾಡಲಾದ ಹಣವೆಷ್ಟು ; (ಮಾಹಿತಿ ನೀಡುವುದು)

(ಊ) ಇದರಲ್ಲಿ ಮಹಿಳೆಯರ ಮತ್ತು ಪುರುಷರ ಫಲಾನುಭವಿಗಳ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಕ್ಕೆ ನೀಡುತ್ತಿರುವ ಸೌಲಭ್ಯಗಳ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೮೪೧ (೯೭೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ಕುಟುಂಬದವರು ಅನ್ಯ ಧರ್ಮಕ್ಕೆ ಮತಾಂತರಗೊಂಡ ನಂತರವೂ (ಬೌದ್ಧ ಧರ್ಮ ಹೊರತುಪಡಿಸಿ) ತಮ್ಮ ಹಳೆಯ ಜಾತಿಯಲ್ಲಿಯೇ ಸೌಲಭ್ಯಗಳನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಕುಟುಂಬಗಳು ಮತಾಂತರಗೊಂಡ ನಂತರವೂ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ ; ಇದರಿಂದ ನೈಜವಾದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಕುಟುಂಬದವರಿಗೆ ಅನ್ಯಾಯವಾಗುವುದಿಲ್ಲವೇ ;

(ಇ) ಅನ್ಯ ಧರ್ಮಕ್ಕೆ ಮತಾಂತರಗೊಂಡ ನಂತರ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಸೌಲಭ್ಯಗಳನ್ನು ಪಡೆಯುತ್ತಿರುವುದು ಸಂವಿಧಾನ ಬಾಹಿರವಲ್ಲವೇ ; ಈ ರೀತಿಯಾಗಿ ಪಡೆಯುತ್ತಿರುವ ಕುಟುಂಬಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಬಹುತೇಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕುಟುಂಬಗಳು ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಂಡು ಪ್ರಾರ್ಥನಾ ಮಂದಿರಗಳಿಗೆ ಹೋಗುತ್ತಿದ್ದು, ಸೌಲಭ್ಯ ಪಡೆಯುವುದಕ್ಕೋಸ್ಕರವಾಗಿಯೇ ಚರ್ಚುಗಳಲ್ಲಿ ನೋಂದಣಿ ಮಾಡಿಸದೇ ಇರುವುದು ನಿಜವೇ ;

(ಉ) ಈ ಅಂಶಗಳ ಬಗ್ಗೆ ಸರ್ಕಾರವು ಸರ್ವೆ ಕಾರ್ಯಗಳನ್ನು ನಡೆಸಲು ಮತ್ತು ಮತಾಂತರಗೊಂಡ ಕುಟುಂಬಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸೌಲಭ್ಯದಿಂದ ದೂರ ಇಡಲು ಕೈಗೊಂಡಿರುವ ಕ್ರಮಗಳೇನು ?

## ಹಿಂದುಳಿದ ವರ್ಗಗಳ ನಿಗಮಕ್ಕೆ ಹಣ ಬಿಡುಗಡೆ ಮಾಡದಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೮೪೨ (೯೧೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ಮತ್ತು ತೀರಾ ಹಿಂದುಳಿದ ವರ್ಗಗಳ ನಿಗಮಗಳಿಗೆ ೨೦೨೪–೨೫ನೇ ಸಾಲಿಗೆ ಘೋಷಣೆ ಮಾಡಿದ ಮತ್ತು ಇಲ್ಲಿಯವರೆಗೆ ಬಿಡುಗಡೆ ಮಾಡಿದ ಹಣವೆಷ್ಟು:

(ಆ) ಬಡವರೆ ಹೆಚ್ಚಿರುವ ಹಿಂದುಳಿದ ವರ್ಗಗಳಿಗೆ ಘೋಷಣೆ ಮಾಡಿದ ಹಣ ತೀರಾ ಕಡಿಮೆ ಆಗಿದ್ದು ಆ ಹಣ ಬಿಡುಗಡೆ ಮಾಡದಿರಲು ಕಾರಣಗಳೇನು ;

(ಇ) ಬಡವರ ಆರ್ಥಿಕ ಚಟುವಟಿಕೆಗಳಿಗೆ ಮತ್ತು ಅವರ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವುದಕ್ಕೆ ಸ್ಥಾಪಿತವಾದ ನಿಗಮಗಳು ಇಂದು ಸರ್ಕಾರವೆ ಹಣ ಬಿಡುಗಡೆ ಮಾಡದೆ ನಿಷ್ಕ್ರಿಯಗೊಳಿಸಿರುವುದು ಸರಿಯೇ ;

(ಈ) ಬಡ ಹಿಂದುಳಿದ ವರ್ಗಗಳಿಗೆ ಸಹಾಯಕ್ಕಾಗಿ ಸ್ಥಾಪಿಸಿದ ನಿಗಮಗಳನ್ನು ಸರ್ಕಾರವು ಹೆಚ್ಚು ಹಣ ಬಿಡುಗಡೆ ಮಾಡಿ ಹಿಂದುಳಿದವರ ಅಭಿವೃದ್ಧಿಗಾಗಿ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ಇಂಡಿಯಾ ಲೇಬರ್ ಲೈನ್ಸ್ ಸಹಾಯವಾಣಿ ಇದ್ದರೂ ಕಾರ್ಮಿಕರಿಗೆ ವಂಚನೆ ಆಗುತ್ತಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೮೪೩ (೯೧೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂಡಿಯನ್ ಲೇಬರ್ ಲೈನ್ಸ್ ಸಹಾಯವಾಣಿಗೆ ೨೦೨೩ ಮತ್ತು ೨೦೨೪ ರಲ್ಲಿ ಅಸಂಘಟಿತ ಕಾರ್ಮಿಕರಿಗೆ ಆಗುವ ಶೋಷಣೆ ಮತ್ತು ವಂಚನೆಗಳ ಕುರಿತು ಎಷ್ಟು ದೂರು ಸಲ್ಲಿಕೆಯಾಗಿದೆ; (ವಿವರ ನೀಡುವುದು)

(ಆ) ಅಸಂಘಟಿತ ಕಾರ್ಮಿಕರಿಗೆ ಶೋಷಣೆ ತಾರತಮ್ಯ ವಂಚನೆ ಮುಂತಾದವು ಹೆಚ್ಚಾಗಿ ಬೆಂಗಳೂರು ನಗರದಲ್ಲಿ ಸಂಭವಿಸಲು ಕಾರಣಗಳೇನು ;

(ಇ) ಬೆಂಗಳೂರು ನಗರದಲ್ಲಿ ಸಂಭವಿಸುತ್ತಿರುವ ಶೋಷಣೆ ಮತ್ತು ವಂಚನೆ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ರಾಜ್ಯದಲ್ಲಿನ ಅಸಂಘಟಿತ ಕಾರ್ಮಿಕರ ಮೇಲೆ ಆಗುತ್ತಿರುವ ವಂಚನೆಗಳನ್ನು ತಡೆಯಲು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದೇ ?

## ಸಮಗಾರ ಹರಳಯ್ಯನವರ ಪವಿತ್ರ ಕ್ಷೇತ್ರ ಅಭಿವೃದ್ಧಿ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೪ (೯೦೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಬಿಜನಹಳ್ಳಿಯ ಗ್ರಾಮದಲ್ಲಿ ಸಮಗಾರ ಹರಳಯ್ಯನವರ ತೊಡೆಯ ಚರ್ಮದಿಂದ ತಯಾರಿಸಿದ ಪಾದರಕ್ಷೆಗಳನ್ನು ಸಾಂಸ್ಕೃತಿಕ ನಾಯಕ ಜಗತ್ ಜ್ಯೋತಿ ಬಸವಣ್ಣನವರಿಗೆ ಅರ್ಪಿಸಿದ್ದು ನಿಜವೇ ;

(ಆ) ಅಪಾರ ಭಕ್ತರು ಪ್ರತಿನಿತ್ಯ ಈ ಪಾದರಕ್ಷೆಗಳ ದರ್ಶನಕ್ಕೆ ಬರುತ್ತಿರುವುದು ನಿಜವೇ ;

(ಇ) ಈ ಪವಿತ್ರ ಕ್ಷೇತ್ರ ಅಭಿವೃದ್ಧಿ ಕಾಣದೆ ಶಿಥಿಲಾವಸ್ಥೆಗೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಪ್ರಾಧಿಕಾರ ರಚಿಸಲು ಮುಂದಾಗುವುದೇ ?

## ಸಾಂಸ್ಕೃತಿಕ ಚಟುವಟಿಕೆಗಳಿಗೆ ನೀಡಲಾಗುವ ಅನುದಾನ ಸ್ಥಗಿತದ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೫ (೯೧೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಾಂಸ್ಕೃತಿಕ ಚಟುವಟಿಕೆಗಳಿಗೆ ಅನುದಾನವನ್ನು ಸ್ಥಗಿತಗೊಳಿಸಿರುವುದು ನಿಜವೇ ;

(ಆ) ಸ್ಥಗಿತಗೊಳಿಸಿದ್ದರೆ ಪರಿಣಾಮ ಕಲೆ ಮತ್ತು ಕಲಾವಿದರನ್ನು ಸರ್ಕಾರ ಕಡೆಗಣಿಸಿದಂತಾಗಲಿಲ್ಲವೇ ;

(ಇ) ಸ್ಥಗಿತಗೊಳಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನರಿಗೆ ಸುವರ್ಣ ಆರೋಗ್ಯ ಯೋಜನೆಯ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೬ (೯೧೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದ ಜನರಿಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಪರಿಶಿಷ್ಟರ ಕಲ್ಯಾಣ

ಯೋಜನೆ ಅಡಿಯಲ್ಲಿ ಯಾವ ಯಾವ ಕಾಯಿಲೆಗಳ ಚಿಕಿತ್ಸೆಗೆ ಸರ್ಕಾರದಿಂದ ನೆರವು ನೀಡಲಾಗುತ್ತಿದೆ ;

(ಆ) ಈವರೆಗೆ ಎಷ್ಟು ಜನರು ಇದರ ಪ್ರಯೋಜನ ಪಡೆದಿದ್ದಾರೆ ;

(ಇ) ಯೋಜನೆಯ ನೆರವನ್ನು ಫಲಾನುಭವಿಗಳಿಗೆ ತಲುಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಕಲಾವಿದರಿಗೆ ಮಾಸಾಶನ ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೪೭ (೯೨೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಷ್ಟು ಜನ ಕಲಾವಿದರಿಗೆ ಮಾಸಾಶನ ನೀಡಲಾಗುತ್ತಿದೆ ; ಮಾಶಾಸನದ ಮೊತ್ತವೆಷ್ಟು ;

(ಆ) ಮಾಸಾಶನಕ್ಕೆ ೨೦೨೧ ರಿಂದ ೨೦೨೪ ಮಾರ್ಚ್‌ವರೆಗೂ ಬಂದಿರುವ ಅರ್ಜಿಗಳೆಷ್ಟು ; ಈ ಅರ್ಜಿಗಳನ್ನು ಪರಿಶೀಲಿಸಿ ಆಯ್ಕೆ ಮಾಡಿ ಆಯ್ಕೆ ಸಮಿತಿಯು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆಯೇ ; ಯಾವ ದಿನಾಂಕದಂದು ಆಯ್ಕೆ ಸಮಿತಿ ಶಿಫಾರಸ್ಸಿನ ಪಟ್ಟಿಯನ್ನು ಸರ್ಕಾರಕ್ಕೆ ಕಳುಹಿಸಲಾಗಿದೆ ;

(ಇ) ಆಯ್ಕೆ ಪಟ್ಟಿಯಲ್ಲಿ ಎಷ್ಟು ಜನ ಕಲಾವಿದರು ಮಾಸಾಶನಕ್ಕೆ ಆಯ್ಕೆಯಾಗಿದ್ದಾರೆ ;

(ಈ) ಸದರಿ ಸಾಲಿನ ಅವಧಿಯಲ್ಲಿ ಅರ್ಜಿ ಸಲ್ಲಿಸಿದ ಕಲಾವಿದರಿಗೆ ಮಾಸಾಶನ ಇನ್ನೂ ದೊರೆತಿಲ್ಲವೆಂದು ದೂರು ಬಂದಿದ್ದು ನಿಜವೇ ; ಮಾಸಾಶನ ದೊರೆಯದೆ ಇರಲು ಕಾರಣವೇನು ?

## ಮಹಿಳಾ ಸಹಕಾರ ಸಂಘದ ಸದಸ್ಯರಿಗೆ ಸಾಲ ಸೌಲಭ್ಯ ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೪೮ (೯೨೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದ ಮೂಲಕ ಮಹಿಳಾ ಸಹಕಾರ ಸಂಘದ ಸದಸ್ಯರಿಗೆ ಸಾಲ ಸೌಲಭ್ಯ ನೀಡಲಾಗುತ್ತಿದ್ದೆಯೇ ; ಎಷ್ಟು ಸಂಘಗಳಿಗೆ ನೀಡಲಾಗಿದೆ ;

(ಆ) ಸಾಲ ನೀಡಿಕೆಯ ಮೊತ್ತವೆಷ್ಟು ; ೨೦೨೩–೨೪ರಲ್ಲಿ ಹಾಗೂ ೨೦೨೪–೨೫ರ ಸಾಲಿನಲ್ಲಿ ಎಷ್ಟು ಮಹಿಳಾ ಫಲಾನುಭವಿಗಳಿಗೆ ಈ ಯೋಜನೆ ತಲುಪಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಎರಡು ವರ್ಷಗಳಲ್ಲಿ ಈ ಯೋಜನೆಗಾಗಿ ಕಾಯ್ದಿರಿಸಿದ ಹಣವೆಷ್ಟು ; ಖರ್ಚಾಗಿರುವುದು ಹಣ ಎಷ್ಟು ?

## ರಾಜ್ಯದಲ್ಲಿ ಬೆಳೆದ ಸಾವಯವ ಮತ್ತು ಸಿರಿಧಾನ್ಯ ಬೆಳೆಗೆ ಸೌಲಭ್ಯ ನೀಡುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೪೯ (೯೨೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೆಳೆದ ಸಾವಯವ ಮತ್ತು ಸಿರಿಧಾನ್ಯ ಹಾಗೂ ಅದರ ಉತ್ಪನ್ನವನ್ನು ಹೊರದೇಶಗಳಿಗೆ ರಫ್ತು ಮಾಡಲಾಗುತ್ತಿದೆಯೇ ; ರಫ್ತು ಮಾಡುತ್ತಿರುವ ರಾಜ್ಯದಲ್ಲಿನ ಸಂಸ್ಥೆಗಳು ಯಾವುವು ;

(ಆ) ರಾಜ್ಯದಲ್ಲಿ ಸಿರಿಧಾನ್ಯ ಬೆಳೆಗೆ ಯಾವ ರೀತಿ ಪ್ರೋತ್ಸಾಹ ಸಹಾಯ, ಸೌಲಭ್ಯಗಳನ್ನು ಸರ್ಕಾರ ಒದಗಿಸುತ್ತಿದೆ ;

(ಇ) ಸಿರಿಧಾನ್ಯಕ್ಕೆ ಸರಿಯಾಗಿ ಮಾರುಕಟ್ಟೆ ದೊರೆತು ಲಾಭದಾಯಕ ಬೆಳೆಯಾಗಿದೆಯೇ ;

(ಈ) ಸಿರಿಧಾನ್ಯ ಬೆಳೆಯ ಹಬ್‌ನ್ನು ರಾಜ್ಯದಲ್ಲಿ ಎಲ್ಲೆಲ್ಲಿ ನಿರ್ಮಾಣ ಮಾಡಲಾಗಿದೆ ; ಈ ಸಿರಿಧಾನ್ಯ ಬೆಳೆಯುವ ಹಬ್‌ನ್ನು ಸ್ಥಾಪಿಸುವ ಉದ್ದೇಶ ಹಾಗೂ ಗುರಿಗಳೇನು ;

(ಉ) ಸಿರಿಧಾನ್ಯ ಬೆಳಗಾರರಿಗೆ ಎ.ಪಿ.ಎಂ.ಸಿ ಮೂಲಕ ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆಯೇ ?

## ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೫೦ (೯೨೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ನೀಡುವ ಯೋಜನೆ ಇದೆಯೇ ; ಇದ್ದಲ್ಲಿ, ಪ್ರಾರಂಭವಾದ ವರ್ಷದಿಂದ ೨೦೨೪ರವರೆಗೆ ಎಷ್ಟು ಮಹಿಳೆಯರಿಗೆ ಈ ಸೌಲಭ್ಯ ದೊರೆತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗೆ ಅನುದಾನ ರಾಜ್ಯ ಸರ್ಕಾರ ನೀಡುತ್ತಿದೆಯೇ ಅಥವಾ ಕೇಂದ್ರ ಸರ್ಕಾರ ನೀಡುತ್ತಿದೆಯೇ ; ಕೇಂದ್ರ ಸರ್ಕಾರ ಶೇಕಡಾ ಎಷ್ಟು ಹಣ ಅನುದಾನ ನೀಡುತ್ತಿದೆ ; ೧೦ ವರ್ಷಗಳಲ್ಲಿ ಈ ಯೋಜನೆಗಾಗಿ ಖರ್ಚಾದ ಹಣವೆಷ್ಟು ? (ವಿವರ ನೀಡುವುದು)

## ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ಪ್ರೋತ್ಸಾಹಧನ ನೀಡುವ ಬಗ್ಗೆ

**ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೫೧ (೯೨೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಿದೇಶಿ ಅಧ್ಯಯನಕ್ಕೆ ಎಷ್ಟು ಪ್ರೋತ್ಸಾಹಧನ ನೀಡಲಾಗುತ್ತಿದೆ ;

(ಆ) ಈ ಯೋಜನೆ ಯಾವಾಗ ಜಾರಿಯಾಯಿತು ; ಜಾರಿಯಾದ ಅಂದಿನಿಂದ ಇಲ್ಲಿಯವರೆಗೆ ಎಷ್ಟು ಜನ ವಿದ್ಯಾರ್ಥಿಗಳು ಈ ಸೌಲಭ್ಯ ಬಳಸಿಕೊಂಡಿದ್ದಾರೆ ;

(ಇ) ಪಿ.ಹೆಚ್.ಡಿ ವ್ಯಾಸಂಗಕ್ಕೆ ಫೆಲೋಷಿಫ್ ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಒಟ್ಟಾರೆಯಾಗಿ ಪ್ರತಿ ವಿದ್ಯಾರ್ಥಿಗೆ ಎಷ್ಟು ಹಣ ನೀಡಲಾಗುತ್ತಿದೆ ;

(ಈ) ಎಷ್ಟು ಜನ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆದಿದ್ದಾರೆ ; (೧೦ ವರ್ಷಗಳ ಮಾಹಿತಿ ನೀಡುವುದು)

(ಉ) ಐಎಎಸ್/ಕೆಎಎಸ್/ಬ್ಯಾಂಕಿಂಗ್‌ಗೆ ಪರೀಕ್ಷೆಯ ಪೂರ್ವಭಾವಿ ತಯಾರಿಗೆ ತರಬೇತಿ ಪಡೆಯಲು ತರಬೇತಿ ಭತ್ಯೆ ನೀಡಲಾಗುತ್ತಿದೆಯೇ ; ಭತ್ಯೆಯ ಮೊತ್ತವೆಷ್ಟು ; ಎಷ್ಟು ಫಲಾನುಭವಿಗಳು ಈ ಪರೀಕ್ಷೆಯಲ್ಲಿ ಪಾಸಾಗಿ ಅಧಿಕಾರಿಗಳಾಗಿ ಹೊರಹೊಮ್ಮಿದ್ದಾರೆ ?

## ಶೈಕ್ಷಣಿಕ ಪ್ರೋತ್ಸಾಹ ಧನ ನೀಡುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೨ (೮೯೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ ೨ ವರ್ಷದಲ್ಲಿ ಎಷ್ಟು ಜನ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹೊಸದಾಗಿ ಪ್ರೋತ್ಸಾಹ ಧನ ಪಡೆಯುವ ಸಲುವಾಗಿ ಎಷ್ಟು ಅರ್ಜಿಗಳು ಬಂದಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪ್ರೋತ್ಸಾಹ ಧನ ಪಡೆಯಲು ಇರುವ ಮಾನದಂಡಗಳೇನು ? (ಮಾಹಿತಿ ನೀಡುವುದು)

## ಟ್ರಾನ್ಸಿಟ್ ಹಾಸ್ಟೆಲ್ ಯೋಜನೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೩ (೮೯೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಟ್ರಾನ್ಸಿಟ್ ಹಾಸ್ಟೆಲ್ ಯೋಜನೆ ಅಡಿಯಲ್ಲಿ ಉದ್ಯೋಗ, ಸಂದರ್ಶನ, ಪ್ರವೇಶ ಪರೀಕ್ಷೆ ಮತ್ತು ಇನ್ನಿತರೆ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗೆ ಹಾಜರಾಗಲು ಬೆಂಗಳೂರಿಗೆ ಬರುವ ಮಹಿಳೆಯರಿಗೆ ಸುರಕ್ಷಿತ ಆಶ್ರಯ, ರಕ್ಷಣೆ ದೃಷ್ಟಿಯಿಂದ ಸರ್ಕಾರ ಪ್ರಾರಂಭಿಸುವ ಈ ಯೋಜನೆ ಸಾಕಷ್ಟು ಮಹಿಳೆಯರಿಗೆ/ನಿರುದ್ಯೋಗ ವಿದ್ಯಾರ್ಥಿನಿಯರಿಗೆ ಮಾಹಿತಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಹಿಳೆಯರ ಸುರಕ್ಷಿತ ದೃಷ್ಟಿಯಿಂದ ಸರ್ಕಾರ ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಸಾಂತ್ವನಾ ಕೇಂದ್ರಗಳ ಕಾರ್ಯನಿರ್ವಹಣೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪ (೮೯೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಸಾಂತ್ವನಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಸಾಂತ್ವನಾ ಕೇಂದ್ರಗಳಲ್ಲಿ ಎಷ್ಟು ಜನ ಸಮಾಲೋಚಕರು, ಸಮಾಜ ಕಾರ್ಯಕರ್ತರು ಕಾರ್ಯನಿರ್ವಹಿಸುತ್ತಿದ್ದಾರೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಕಳೆದ ೨ ವರ್ಷದಲ್ಲಿ ವಿವಿಧ ಪ್ರಕರಣಗಳಲ್ಲಿ ಈ ಸಾಂತ್ವನಾ ಕೇಂದ್ರಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ? (ಮಾಹಿತಿ ನೀಡುವುದು)

## ಸಹಾಯಧನದ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೫ (೮೯೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ವಿವಿಧ ಸಮುದಾಯದ ಅಭಿವೃದ್ಧಿ ಕಾರ್ಯಕ್ರಮ ಅಡಿಯಲ್ಲಿ ವಿದ್ಯಾರ್ಥಿ ನಿಲಯಕ್ಕೆ ಮತ್ತು ಸಮುದಾಯ ಭವನಕ್ಕೆ ನೀಡಲಾದ ಸಹಾಯಧನವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಸಮುದಾಯ ಭವನ ಮತ್ತು ವಿದ್ಯಾರ್ಥಿ ನಿಲಯಕ್ಕೆ ಸಹಾಯಧನಕ್ಕಾಗಿ ಹೊಸದಾಗಿ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ? (ಬಂದಿದ್ದಲ್ಲಿ, ಹೆಸರು ಸಹಿತ ವಿವರ ನೀಡುವುದು)

## ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ನೀಡುವ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೬ (೮೯೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ ೨ ವರ್ಷದಲ್ಲಿ ಪಿಹೆಚ್‌ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡುವ ಮಾಸಿಕ ವ್ಯಾಸಂಗ ವೇತನ/ ಫೆಲೋಶಿಪ್‌ಗೆ ಎಷ್ಟು ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ ; (ಮಾಹಿತಿ ನೀಡುವುದು)

(ಆ) ಸದರಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಸರ್ಕಾರದ ಮಾನದಂಡಗಳು ಏನು ; (ವಿವರ ನೀಡುವುದು)

(ಇ) ಇಲ್ಲಿಯವರೆಗೆ ಈ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಬ್ಯಾಂಕಿಗೆ ಜಮೆ ಮಾಡಲಾಗಿದೆ ಮತ್ತು ಬ್ಯಾಂಕಿಗೆ ಜಮೆಯಾಗದೇ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಶ್ರೀ ಭಾಗ್ಯವಂತಿ ದೇವಾಲಯ ರಸ್ತೆ ಹಾಗೂ ಶುದ್ಧ ಕುಡಿಯುವ ನೀರಿನ ಬಗ್ಗೆ

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೭ (೯೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ಮೂಲ ದೇವಸ್ಥಾನಕ್ಕೆ ಭಕ್ತರು ಅತಿ

ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ರಸ್ತೆ ಮಾರ್ಗವು ಸಂಪೂರ್ಣವಾಗಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಯಾವ ಕಾಲಮಿತಿಯೊಳಗೆ ಹೊಸ ರಸ್ತೆಯನ್ನು ನಿರ್ಮಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ, ದೇವಸ್ಥಾನದ ಆವರಣದಲ್ಲಿ ಶುದ್ಧ ಕುಡಿಯುವ ನೀರಿನ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ದಿನನಿತ್ಯ ಆಗಮಿಸುವ ಸಾವಿರಾರು ಭಕ್ತರಿಗೆ ಅನುಕೂಲವಾಗುವಂತೆ ಯಾವ ಕಾಲಮಿತಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲಾಗುವುದು ? (ವಿವರ ನೀಡುವುದು)

## ಗಂಗಾ ಕಲ್ಯಾಣ ಯೋಜನೆಯ ಕೊಳವೆ ಬಾವಿಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೮ (೯೩೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಯಲಾದ ಮತ್ತು ಅನುಮೋದನೆಗೊಂಡಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಅನುಮೋದನೆಗೊಂಡು ಕೊರೆಯಲು ಬಾಕಿ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ಮತ್ತು ಕೊರೆಯದೆ ಇರಲು ಕಾರಣವೇನು ;

(ಇ) ಕೊರೆಯಲು ಬಾಕಿ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಫಲಾನುಭವಿಗಳ ವಿವರದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಉಡುಪಿ ಜಿಲ್ಲೆಯಲ್ಲಿ ಕೊಳವೆ ಬಾವಿಗಳನ್ನು ಕೊರೆಯಲು ಗುತ್ತಿಗೆ ಪಡೆದಿರುವ ಏಜೆನ್ಸಿ/ಸಂಸ್ಥೆಯ ಹೆಸರುಗಳೇನು ; (ವಿವರವನ್ನು ನೀಡುವುದು)

(ಉ) ಕೊಳವೆ ಬಾವಿಗಳನ್ನು ಸರಿಯಾದ ಸಮಯದಲ್ಲಿ ಅನುಷ್ಠಾನಗೊಳಿಸದೆ ಇರುವ ಈ ಏಜೆನ್ಸಿಗಳು ಮತ್ತು ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಊ) ಪ್ರಸ್ತುತ ಕೊಳವೆ ಬಾವಿಗಳ ಕಾಮಗಾರಿಯ ಗುತ್ತಿಗೆಯನ್ನು ಹೊರ ಜಿಲ್ಲೆಯ ಏಜೆನ್ಸಿ/ಸಂಸ್ಥೆಗಳಿಗೆ ನೀಡಿರುವುದೇ ಸದರಿ ಕಾಮಗಾರಿಗಳ ವಿಳಂಬಕ್ಕೆ ಕಾರಣ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವವಿದ್ದು ಮತ್ತು ಬೇಸಿಗೆ ಕಾಲ ಹತ್ತಿರ ಬರುತ್ತಿರುವುದರಿಂದ ಜನರು ನೀರಿನ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಪಿ.ಡಿ.ಓ ಹುದ್ದೆ ಉನ್ನತೀಕರಣ ಮತ್ತು ಗ್ರೇಡ್–೧ ಕಾರ್ಯದರ್ಶಿಗಳ ಜ್ಯೇಷ್ಠತಾ ಪಟ್ಟಿಯ ಬಗ್ಗೆ

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೯ (೯೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಂಚಾಯತ್ ರಾಜ್ ಇಲಾಖೆಯ ಪಿ.ಡಿ.ಓಗಳ ಜ್ಯೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ದಿನಾಂಕ:೦೩.೦೭.೨೦೨೩ ರಿಂದ ೧೨.೦೩.೨೦೨೪ ರವರೆಗೆ ಕೆ.ಎ.ಟಿ ಅರ್ಜಿ ಸಂಖ್ಯೆ:೩೩೪೯/೨೦೨೩ರ ಆದೇಶದ ವಿರುದ್ಧವಾಗಿ ನೇರ ಹಾಗೂ ಬಡ್ತಿ ಕೋಟಾದಲ್ಲಿ ಖಾಲಿ ಹುದ್ದೆಗಳಿಗೆ ಅಂತಹ ಜಿಲ್ಲಾ ವರ್ಗಾವಣೆ ಮಾಡಿದ ಸಂಖ್ಯೆ ಮತ್ತು

ವರ್ಗಾವಣೆ ಹೊಂದಿದ ನೌಕರರ ವಿವರಗಳೇನು ; (ಹೆಸರು ಹಾಗೂ ಈ ಆದೇಶಗಳಿಗೆ ಮಂಡಿಸಿರುವ ಟಿಪ್ಪಣಿ ಪ್ರತಿ ನೀಡುವುದು)

(ಆ) ದಿನಾಂಕ:೧೩.೦೩.೨೦೨೪ರ ಅಧಿಸೂಚನೆಯನ್ವಯ ಪಿ.ಡಿ.ಓ ಹುದ್ದೆ ರಾಜ್ಯ ವೃಂದವಾಗಿ ಮಾರ್ಪಾಟುಗೊಳ್ಳದಿದ್ದರೆ ದಿನಾಂಕ :೨೮.೦೨.೨೦೨೫ ರಲ್ಲಿದ್ದಂತೆ ಜಿಲ್ಲಾವಾರು ಈ ವೃಂದದ ನೇರ ಹಾಗೂ ಬಡ್ತಿ ಕೋಟಾದಲ್ಲಿ ಎಷ್ಟು ರಿಕ್ತ ಸ್ಥಾನಗಳಿರುತ್ತಿದ್ದವು ;

(ಇ) ಸರ್ಕಾರವು ದಿನಾಂಕ:೦೧.೧೦.೨೦೨೪ ರಂದು ಪ್ರಕಟಿಸಿರುವ ಗ್ರೇಡ್–೧ ಕಾರ್ಯದರ್ಶಿಗಳ ರಾಜ್ಯ ಮಟ್ಟದ ಕರಡು ಜ್ಯೇಷ್ಠತಾ ಪಟ್ಟಿಗೆ ಬಂದಂತಹ ಆಕ್ಷೇಪಣೆಗಳಾವುವು ಈ ಆಕ್ಷೇಪಣೆಗಳಿಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ಆಕ್ಷೇಪಣೆವಾರು ಸರ್ಕಾರದ ಉತ್ತರಗಳ ಪ್ರತಿ ನೀಡುವುದು)

(ಈ) ಸದರಿ ರಾಜ್ಯ ಮಟ್ಟದ ಕರಡು ಜ್ಯೇಷ್ಠತಾ ಪಟ್ಟಿ ಅಂತಿಮಗೊಳಿಸಲು ಸರ್ಕಾರದ ಮುಂದಿರುವ ಅಡೆತಡೆಗಳೇನು: ಹಾಗೂ ಜ್ಯೇಷ್ಠತಾ ಪಟ್ಟಿಯಲ್ಲಿನ ಆಕ್ಷೇಪಣೆಗಳನ್ನು ಅಂತಿಮಗೊಳಿಸದೇ ಎಲ್ಲಾ ಜಿಲ್ಲಾ ಪಂಚಾಯಿತಿಗೆ ದಿನಾಂಕ:೩೧.೧೨.೨೦೨೪ರ ಪತ್ರದ ಪ್ರಕಾರ ಮತ್ತೆ ಜಿಲ್ಲಾ ಮಟ್ಟದ ಗ್ರೇಡ್–೧ ಕಾರ್ಯದರ್ಶಿಗಳ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸುವಂತೆ ಸೂಚಿಸಲು ಕಾರಣವೇನು ;

(ಉ) ಕರ್ನಾಟಕ ಸರ್ಕಾರಿ ನೌಕರರ (ಜ್ಯೆಷ್ಠತಾ) ನಿಯಮಗಳು, ೧೯೫೭ರ ನಿಯಮ ೧೦ರ ಅಡಿ ನೇಮಕಾತಿ ಪ್ರಾಧಿಕಾರವು ಸಿದ್ಧಪಡಿಸಬೇಕಾದ ಜ್ಯೇಷ್ಠತಾ ಪಟ್ಟಿ ಗ್ರೇಡ್–೧ ಕಾರ್ಯದರ್ಶಿಗಳ ಜಿಲ್ಲಾ ಮಟ್ಟದ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಯನ್ನು ತಡೆಹಿಡಿಯುವಂತೆ ಸರ್ಕಾರಕ್ಕೆ ಸೂಚಿಸಲು ಕಾನೂನಿನಲ್ಲಿ ಅವಕಾಶವಿದೆಯೇ ;

(ಊ) ದಿನಾಂಕ:೩೧.೧೨.೨೦೨೪ರ ಆಯುಕ್ತಾಲಯದ ಪತ್ರದ ಪ್ರಕಾರ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು ಪ್ರಕಟಿಸಿದ ಗ್ರೇಡ್–೧ ಕಾರ್ಯದರ್ಶಿಗಳ ಜ್ಯೇಷ್ಠತಾ ಪಟ್ಟಿಗಳನ್ನು ಇಲ್ಲಿಯವರೆಗೆ ಅಂತಿಮಗೊಳಿಸದಿರಲು ಕಾರಣಗಳೇನು ?

## ಪಿ.ಡಿ.ಓ ಗಳ ವರ್ಗಾವಣೆ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೦ (೯೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ನೇ ಸಾಲಿನಲ್ಲಿದ್ದ ಪಿ.ಡಿ.ಓ ಹುದ್ದೆಗಳ ಕಾರ್ಯನಿರತ ವೃಂದ ಬಲವೆಷ್ಟು; ಇದರಲ್ಲಿ ಒಟ್ಟು ಎಷ್ಟು ಪಿ.ಡಿ.ಓ ರವರನ್ನು ವರ್ಗಾವಣೆ ಮಾಡಲಾಗಿದೆ ; (ಸಾರ್ವತ್ರಿಕ ವರ್ಗಾವಣೆ ಅವಧಿಯಲ್ಲಿ ಹಾಗೂ ಈ ಅವಧಿ ಮುಗಿದ ನಂತರ ವರ್ಗಾವಣೆಗಳ ವಿವರದೊಂದಿಗೆ) ಇವುಗಳಲ್ಲಿ ಕೆ.ಎ.ಟಿ.ಯು ಎಷ್ಟು ಆದೇಶಗಳಿಗೆ ತಡೆಯಾಜ್ಞೆ ನೀಡಿದೆ ಹಾಗೂ ಎಷ್ಟು ಆದೇಶಗಳನ್ನು ರದ್ದುಗೊಳಿಸಿದೆ ; (ಪ್ರಕರಣವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ವರ್ಗಾವಣೆಗಳಿಗಾಗಿ ಸರ್ಕಾರವು ನಿರ್ವಹಿಸಿದ ಆದ್ಯತೆ ಪಟ್ಟಿ ಪಿ.ಡಿ.ಓಗಳಿಂದ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; (ಇವುಗಳ ಪ್ರತಿ ನೀಡುವುದು) ಈ ವರ್ಗಾವಣೆಗಳನ್ನು ಪುರಸ್ಕರಿಸಲು ಹಾಗೂ ತಿರಸ್ಕರಿಸಲು ಟಿಪ್ಪಣಿ ನಿರ್ವಹಿಸಿದೆಯೇ ; (ಟಿಪ್ಪಣಿ ಪ್ರತಿ ನೀಡುವುದು)

(ಇ) ಸಾರ್ವತ್ರಿಕ ವರ್ಗಾವಣೆ ಅವಧಿಯು ನಂತರ ದಿನಾಂಕ:೦೪.೦೭.೨೦೨೩ ರಿಂದ ೩೧.೧೨.೨೦೨೪ರವರೆಗೆ ಕರ್ನಾಟಕ ಉಚ್ಚನ್ಯಾಯಾಲಯ ರಿಟ್ ಅರ್ಜಿ WP 45916/ 2018(S-KAT), Rajashekar M. vs State of Karnataka ತೀರ್ಪಿನ ಅಂಶವನ್ನು ಪಾಲಿಸಿ ಎಷ್ಟು ಪಿ.ಡಿ.ಓ.ಗಳನ್ನು ವರ್ಗಾವಣೆ/ಸ್ಥಳ ನಿಯುಕ್ತಿ ಮಾಡಲಾಗಿದೆ ;

(ಈ) ಕೆ.ಎ.ಟಿ ಅರ್ಜಿ ಸಂಖ್ಯೆ:೩೩೪೯/೨೦೨೩ ಶ್ರೀಮತಿ ವೀಣ ಟಿ.ವಿ VS. ಕರ್ನಾಟಕ ರಾಜ್ಯ ಪ್ರಕರಣದಲ್ಲಿ ನೀಡಿದ ತೀರ್ಪಿನ

ವಿರುದ್ಧವಾಗಿ ಆಯುಕ್ತಾಲಯುವು ಎಷ್ಟು ಅಂತರ ಜಿಲ್ಲಾ ವರ್ಗಾವಣೆಗಳನ್ನು ಮಾಡಿದೆ ; (ಇವುಗಳ ಆದೇಶ ಪ್ರತಿಯನ್ನು ನೀಡುವುದು)

(ಉ) ದಿನಾಂಕ:೦೪.೦೭.೨೦೨೩ ರಿಂದ ೩೧.೧೨.೨೦೨೪ರವರೆಗೆ ಮಾಡಿರುವ ವರ್ಗಾವಣೆಗಳಿಂದ ಸ್ಥಳವಿಲ್ಲದೆ ಬಾಧಿತರಾದ ಜಿಲ್ಲಾವಾರು ಒಟ್ಟು ಪಿ.ಡಿ.ಓಗಳ ಸಂಖ್ಯೆ ಎಷ್ಟು ; ಇವರ ಹೆಸರು ಬಾಧಿತ ಅವಧಿಯ ಮಾನವ ದಿನಗಳು, ಈ ಅವಧಿಯ ಒಟ್ಟು ವೇತನ ಮೊತ್ತದ ವಿವರ ನೀಡುವುದು ?

## ಗೃಹಲಕ್ಷ್ಮಿ ಯೋಜನೆಗೆ ಮೀಸಲಿಟ್ಟ ಅನುದಾನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬೧ (೮೯೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಕಳೆದ ಒಂದೂವರೆ ವರ್ಷದಿಂದ ಗೃಹಲಕ್ಷ್ಮೀ ಯೋಜನೆಗಾಗಿ ಮೀಸಲಿಟ್ಟ ಅನುದಾನದ ಮೊತ್ತವೆಷ್ಟು ;

(ಆ) ಹಾಗಿದ್ದಲ್ಲಿ, ೨೦೨೩–೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ಗೃಹಲಕ್ಷ್ಮಿ ಯೋಜನೆಗಾಗಿ ಫಲಾನುಭವಿಗಳಿಂದ ಬಂದಿರುವ ಅರ್ಜಿಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಫಲಾನುಭವಿಗಳಿಗೆ ಬಿಡುಗಡೆ ಮಾಡಿರುವ ಮೊತ್ತವೆಷ್ಟು ; (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

(ಈ) ಗೃಹಲಕ್ಷ್ಮಿ ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಸರ್ಕಾರ ಅನುಸರಿಸಿರುವ ಮಾನದಂಡಗಳೇನು ? (ವಿವರಗಳನ್ನು ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ವಿವಿಧ ನಿಗಮಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬೨ (೯೦೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿವಿಧ ಅಭಿವೃದ್ಧಿ ನಿಗಮಗಳು ಯಾವುವು ; (ಮಾಹಿತಿ ನೀಡುವುದು)

(ಆ) ಸಮಾಜ ಕಲ್ಯಾಣ ಇಲಾಖೆಯಡಿ ಬರುವ ಅಭಿವೃದ್ಧಿ ನಿಗಮಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ನಿಗಮಗಳವಾರು ವಿವರಗಳನ್ನು ನೀಡುವುದು)

(ಇ) ಹಾಗಿದ್ದಲ್ಲಿ, ಹೊಸಕೋಟೆ ತಾಲ್ಲೂಕಿನಲ್ಲಿ ಕಳೆದ ೨ ವರ್ಷಗಳಲ್ಲಿ ವಿವಿಧ ನಿಗಮಗಳ ಯೋಜನೆಯಡಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ವರ್ಷವಾರು ವಿವರಗಳನ್ನು ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮೀಣ ಪ್ರಗತಿ ಪಥ ಯೋಜನೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೩ (೯೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮೀಣ ಪ್ರಗತಿ ಪಥ ಯೋಜನೆ ಜಾರಿಯಲ್ಲಿದೆಯೇ ಜಾರಿಯಲ್ಲಿದ್ದಲ್ಲಿ, ಸದರಿ ಯೋಜನೆಯು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಸದರಿ ಯೋಜನೆಗೆ ಬಿಡುಗಡೆಯಾದ ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಗೆ ಒಟ್ಟು ಎಷ್ಟು ವೆಚ್ಚ ಮಾಡಲಾಗುತ್ತಿದೆ ಹಾಗೂ ಇದರ ಹಣಕಾಸು ನಿರ್ವಹಣೆಯನ್ನು ಹೇಗೆ ನಿರ್ವಹಿಸಲಾಗುವುದು ;

(ಈ) ಸದರಿ ಜಿಲ್ಲೆಗಳಿಂದ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಷ್ಟು ಬೇಡಿಕೆಗಳು ಸಲ್ಲಿಕೆಯಾಗಿವೆ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಂಥಾಲಯಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೪ (೯೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾಯತ್ ಕಛೇರಿಗಳಲ್ಲಿ ಗ್ರಂಥಾಲಯಗಳನ್ನು ತೆರೆಯಲಾಗಿದೆ ; ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ಗ್ರಂಥಾಲಯ ಸೌಲಭ್ಯವಿರುವುದಿಲ್ಲ ; (ವಿವರ ನೀಡುವುದು)

(ಆ) ಎಲ್ಲಾ ಗ್ರಾಮ ಪಂಚಾಯತಿ ಹಾಗೂ ಹೆಚ್ಚು ಜನರಿರುವ ಗ್ರಾಮಗಳಲ್ಲಿ ಗ್ರಂಥಾಲಯಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ ಹಾಗೂ ಗ್ರಂಥಾಲಯು ತೆರೆಯುವುದಕೋಸ್ಕರ ಪ್ರತ್ಯೇಕ ಅನುದಾನವೇನಾದರು ಸರ್ಕಾರ ನಿಗದಿಪಡಿಸಿದೆಯೇ ; (ವಿವರ ನೀಡುವುದು)

(ಇ) ಗ್ರಂಥಾಲಯ ತೆರೆಯಲು ಸರ್ಕಾರ ಅನುಸರಿಸುತ್ತಿರುವ ಮಾನದಂಡವೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಘನತ್ಯಾಜ್ಯ ವಿಲೇವಾರಿ ಘಟಕಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೫ (೯೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಘನತ್ಯಾಜ್ಯ ವಿಲೇವಾರಿ ಘಟಕಗಳಿವೆ ; ಮತ್ತು ಇವುಗಳನ್ನು ನಿರ್ವಹಣೆ ಮಾಡುತ್ತಿರುವವರು ಯಾರು ; ಇದಕ್ಕೆ ತಗಲುವ ವಾರ್ಷಿಕವಾರು ವೆಚ್ಚವೆಷ್ಟು ; ಇದರಲ್ಲಿ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಈ ಘಟಕಗಳ ನಿರ್ವಹಣೆಗೆ ತಗಲುವ ವೆಚ್ಚವನ್ನು ಯಾವ ಯಾವ ಅನುದಾನದಿಂದ ಯಾವ ಲೆಕ್ಕ ಶೀರ್ಷಿಕೆಯಡಿ ಬಿಡುಗಡೆ ಮಾಡಲಾಗುತ್ತಿದೆ ; ಮತ್ತು ಮುಂಬರುವ ವರ್ಷಗಳಲ್ಲಿ ಇವುಗಳ ನಿರ್ವಹಣೆ ಯಾವ ರೀತಿ ಮಾಡಲಾಗುವುದು ? (ವಿವರ ನೀಡುವುದು)

## ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬಿಡುಗಡೆಗೊಂಡ ಅನುದಾನ ಮತ್ತು ಖರ್ಚಾದ ಅನುದಾನದ ಬಗ್ಗೆ

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೬ (೯೪೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಬಿಡುಗಡೆಗೊಳಿಸಲಾದ ಅನುದಾನ ಎಷ್ಟು ; (ವಾರ್ಷಿಕವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ ; (ಯೋಜನೆವಾರು, ವಾರ್ಷಿಕವಾರು ವಿವರಗಳನ್ನು ನೀಡುವುದು)

(ಇ) ಹಾಗಿದ್ದಲ್ಲಿ, ೨೦೨೪–೨೫ನೇ ಸಾಲಿನಲ್ಲಿ ಹಾಸನ ಜಿಲ್ಲೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಬಿಡುಗಡೆಯಾಗಿರುವ ಅನುದಾನ, ಖರ್ಚಾದ ಅನುದಾನ ಹಾಗೂ ಉಳಿಕೆ ಆದ ಅನುದಾನ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಕೃಷಿ ಇಲಾಖೆಯಡಿಯಲ್ಲಿ ಯಂತ್ರೋಪಕರಣಗಳು, ಕೃಷಿ ಉಪಕರಣಗಳು, ಕೀಟನಾಶಕಗಳ ಸಹಾಯಧನಕ್ಕೆ ಸಲ್ಲಿಸಿದ ಅರ್ಜಿಗಳ ಬಗ್ಗೆ

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೭ (೯೪೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಕೃಷಿ ಇಲಾಖೆಗೆ ನೀಡಿರುವ ಅನುದಾನ ಎಷ್ಟು; (ವಾರ್ಷಿಕವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ಹಾಸನ ಜಿಲ್ಲೆಯ ರೈತರುಗಳಿಗೆ ಕೃಷಿ ಉಪಕರಣಗಳು, ಯಂತ್ರೋಪಕರಣಗಳು ಮತ್ತು ಕೀಟನಾಶಕ ಖರೀದಿಗೆ ಸಹಾಯಧನಕ್ಕಾಗಿ ವಿನಿಯೋಗಿಸಿದ ಅನುದಾನ ಎಷ್ಟು; ಸರ್ಕಾರದಿಂದ ಬಿಡುಗಡೆಯಾದ ಅನುದಾನ ಹಾಗೂ ಉಳಿಕೆ ಆದ ಅನುದಾನ ಎಷ್ಟು; (ವಾರ್ಷಿಕವಾರು ಜಿಲ್ಲೆಯ ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ೨೦೨೪–೨೫ನೇ ವಾರ್ಷಿಕ ವರ್ಷದಲ್ಲಿ ಕೃಷಿ ಉಪಕರಣಗಳು, ಯಂತ್ರೋಪಕರಣಗಳು ಮತ್ತು ಕೀಟನಾಶಕ ಖರೀದಿಗೆ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳಲ್ಲಿ ವಿಲೇವಾರಿಗೊಂಡ ಅರ್ಜಿಗಳ ಸಂಖ್ಯೆ ಹಾಗೂ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು;

(ಈ) ಎಷ್ಟು ಕಾಲಾವಕಾಶಗಳ ಒಳಗೆ ಬಾಕಿ ಅರ್ಜಿಗಳನ್ನು ವಿಲೇವಾರಿ ಮಾಡಿ ರೈತರುಗಳಿಗೆ ಸರ್ಕಾರದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುವುದೇ? (ಸಂಪೂರ್ಣ ವಿವರ ನೀಡುವುದು)

## ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಬಿಡುಗಡೆಯಾದ ಅನುದಾನ ಮತ್ತು ಖರ್ಚಾದ ಅನುದಾನದ ಬಗ್ಗೆ

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೮ (೯೪೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬಿಡುಗಡೆಯಾದ ಅನುದಾನ ಎಷ್ಟು; (ವಾರ್ಷಿಕವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಅನುಷ್ಠಾನಗೊಂಡ ಕಾರ್ಯಕ್ರಮಗಳು ಯಾವುವು; ಬಿಡುಗಡೆಯಾದ, ಖರ್ಚಾದ ಹಾಗೂ ಬಾಕಿ ಉಳಿದಿರುವ ಅನುದಾನ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ೨೦೨೪-೨೫ನೇ ಸಾಲಿನಲ್ಲಿ ಹಾಸನ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿಗಳ ಸಂಖ್ಯೆ ಎಷ್ಟು; ಸಹಾಯಧನ ಪಡೆದುಕೊಂಡ ಅಭ್ಯರ್ಥಿಗಳ ಹಾಗೂ ಅನುದಾನ ಕೊರತೆಯಿಂದ ವಿಲೇವಾರಿಗೊಳ್ಳದೇ ಇರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O254/500 ಪ್ರತಿಗಳು/06–03–2025